ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 20 | PAGE- ಪುಟ 8 | ಶನಿವಾರ 22.02.2025 | RS.ಬೆಲೆ 2/-

## ಭೀಕರ ರಸ್ತೆ ಅಪಘಾತ - ಕುಂಭಮೇಳಕ್ಕೆ ತೆರಳಿದ್ದ

# ಬೀದರನ ಐವರು ಸಾವು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 21 : ವಾರಣಾಸಿ ಪ್ರಯಾಗ್ ರಾಜ್ ಮಹಾಕುಂಭಮೇಳಕ್ಕೆತೆರಳಿದ್ದ ಕರ್ನಾಟಕದ ಬೀದರನವರಿದ್ದ ಕ್ರೂಸರ್ ನಿಂತಿದ್ದ ಟ್ರಕ್ ಗೆ ಡಿಕ್ಕಿ ಹೊಡೆದ ಪರಿಣಾಮ ಐವರು ಸಾವನಪ್ಪಿ 7 ಜನರು ಗಂಭೀರವಾಗಿ ಗಾಯಗೊಂಡ ಘಟನೆ ಮಿರ್ಜಾಮುರಾದ್ ಪ್ರದೇಶದ ರೂಪಾಪುರ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಬೆಳಿಗ್ಗೆ ನಡೆದಿದೆ.

ಅಪಘಾತದ ತೀವ್ರತೆಗೆ ಕ್ರೂಸರ್ ನಲ್ಲಿದ್ದ ಮಹಿಳೆಯ ತಲೆ ದೇಹದಿಂದ ಬೇರ್ಪಟ್ಟಿತ್ತು.

ಕುಂಭಮೇಳಕ್ಕೆ ತೆರಳಿ ವಾಪಸ್ಸಾಗುತ್ತಿದ್ದ ಬೀದರ್‌ನ ಲಾಡಗೇರಿ ಬಡಾವಣೆಯ 12 ಮಂದಿ ಪ್ರಯಾಣಿಸುತ್ತಿದ್ದ ಕ್ರೂಸರ್ ವಾಹನಕ್ಕೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ.

ಮೃತಪಟ್ಟವರೆಲ್ಲರೂ ಬೀದರ್‌ನ ಲಾಡಗೇರಿ ಬಡಾವಣೆಯ

(2ನೇ ಪುಟ ನೋಡಿ)

### ಮಾಜಿ ಸಚಿವ ಪಾಟೀಲ ಸಂತಾಪ



ಹುಮನಾಬಾದ:ಫೆ.21: ಪ್ರಯಾಗರಾಜ್ ಮಹಾಕುಂಭ ಮೇಳದಲ್ಲಿ ಪುಣ್ಯ

(2ನೇ ಪುಟ ನೋಡಿ)

### ಸಚಿವ ಈಶ್ವರ ಖಂಡ್ರೆ ಸಂತಾಪ



ಪ್ರಯಾಗ್ ರಾಜ್ ಕುಂಭ ಮೇಳಕ್ಕೆತೆರಳಿದ್ದ ವೇಳೆ ಉತ್ತರ ಪ್ರದೇಶದ ರುಪಾಪೂರಬಳಿ ಬೀದರ್ ಜಿಲ್ಲೆಯ ಐವರು ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತೀವ್ರ ಶೋಕ

(2ನೇ ಪುಟ ನೋಡಿ)

### ಸಚಿವ ರಹೀಂ ಖಾನ ಸಂತಾಪ



ಪ್ರಯಾಗ್ ರಾಜ್ ಕುಂಭಮೇಳಕ್ಕೆ ತೆರಳಿದವೇಳೆ ಉತ್ತರಪ್ರದೇಶದ ರುಪಾಪೂರ ಬಳಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಬೀದರ್ ಜಿಲ್ಲೆಯ ಐವರು ಯಾತ್ರಿಕರು ದುರ್ಮರಣಕ್ಕೀಡಾಗಿರುವ ದುಃಖದ ಸುದ್ದಿ ಆಘಾತ ತಂದಿದೆ. ಪೌರಾಡಳಿತ ಮತ್ತು

(2ನೇ ಪುಟ ನೋಡಿ)

# ವಾರದಲ್ಲಿ ಗೃಹಲಕ್ಷ್ಮೀ ಹಣ




ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ:ಫೆ.21: ಇನ್ನೊಂದು ವಾರದಲ್ಲಿ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳ ಖಾತೆಗೆ ಹಣ ಸಂದಾಯವಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತಾಡಿದ ಅವರು, ತಾಲೂಕು ಪಂಚಾಯಿತಿ ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಬಿಡುಗಡೆ ಮಾಡಲಾಗುವುದು.

ರಸ್ತೆ ಅಪಘಾತದಿಂದಾಗಿ ವಿಶ್ರಾಂತಿಯಲ್ಲಿದ್ದುದರಿಂದಾಗಿ ಹಣ ಸಂದಾಯವಾಗಲು ಸ್ವಲ್ಪ ವಿಳಂಬ ಆಯಿತು. ಈಗಾಗಲೇ ಅಧಿಕಾರಿಗಳಿಗೆ ಆದೇಶ ನೀಡಿದ್ದು, ಶೀಘ್ರದಲ್ಲೇ ಹಣ ಸಂದಾಯವಾಗಲಿದೆ ಎಂದರು. ಶೀಘ್ರವೇ ಗೃಹಲಕ್ಷ್ಮೀ ಯೋಜನೆ ಹಣ: ಹಿಂದಿನ ಮಾದರಿಯಂತೆ ಜಿಲ್ಲಾ ಉಪ ನಿರ್ದೇಶಕರ ಮೂಲಕವೇ ಗೃಹಲಕ್ಷ್ಮೀ ಯೋಜನೆ ಹಣ ಫಲಾನುಭವಿಗಳ ಖಾತೆಗೆ ಜಮಾ ಆಗಲಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ತಾಲೂಕು ಪಂಚಾಯಿತಿ ಮೂಲಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹಣ ರವಾನೆಯಾಗುತ್ತಿದ್ದು, ಉಪ ನಿರ್ದೇಶಕರ ಮೂಲಕ ಹಣ ಹಾಕಲಾಗುತ್ತಿದೆ ಎಂದರು.

ಎರಡು ವಾರದಲ್ಲಿ ಸಾರ್ವಜನಿಕ ಜೀವನಕ್ಕೆ ವಾಪಸ್: ದೇವರ ದಯೆಯಿಂದ ಸಂಪೂರ್ಣ ಗುಣಮುಖ ಆಗಿದ್ದೇನೆ. ವೈದ್ಯರು 6 ವಾರ ವಿಶ್ರಾಂತಿ ಹೇಳಿದ್ದಾರೆ. ಹಾಗಾಗಿ ಇನ್ನೆರಡು ವಾರಗಳಲ್ಲಿ ಪ್ರಯಾಣ ಆರಂಭಿಸಿ, ಸಾರ್ವಜನಿಕ ಜೀವನಕ್ಕೆ ಮರಳುವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಳೆದ ಒಂದು ತಿಂಗಳು ತುಂಬಾ ಕಷ್ಟಕರವಾಗಿತ್ತು. ಕ್ಷೇತ್ರದ ಜನರನ್ನು ತುಂಬಾ ಮಿಸ್ ಮಾಡಿಕೊಳ್ಳುತ್ತಿದ್ದೆ. ಶೀಘ್ರವೇ ಜನ ಸೇವೆಗೆ ಮರಳುವೆ ಎಂದರು. ನಾನು ಕಳೆದ 25 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿರುವೆ. ಜನರ ಮಧ್ಯೆಯೇ ನನ್ನ ದೈನಂದಿನ ಜೀವನ ನಡೆಯುತ್ತಿದೆ. ಈಗಲೂ ದೂರವಾಣಿ ಮೂಲಕ ಜನರ ಸಂಪರ್ಕದಲ್ಲಿರುವೆ. ಜನರ, ದೇವರ ಆಶೀರ್ವಾದದಿಂದ ಸಂಪೂರ್ಣ ಗುಣಮುಖ ಆಗಿರುವೆ ಎಂದು ಹೆಬ್ಬಾಳಕರ್ ಹೇಳಿದರು.

# ಸಾಲಬಾಧೆ ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.21:ಸಾಲದ ಬಾಧೆ ತಾಳಲಾರದೆ ಯುವ ರೈತನೊಬ್ಬ ಮರದ ಕೊಂಬೆಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ಜಿಲ್ಲೆಯ ಕಾಳಗಿ ತಾಲೂಕಿನ ಹುಳಿಗೇರಾ ಗ್ರಾಮದಲ್ಲಿ ನಡೆದಿದೆ. ಪ್ರಕಾಶ್ ಜಮಾದಾರ (24) ಆತ್ಮಹತ್ಯೆ ಮಾಡಿಕೊಂಡ ರೈತ. ಬ್ಯಾಂಕ್ ಮತ್ತು ಖಾಸಗಿಯಾಗಿ 5.80 ಲಕ್ಷ ರೂ. ಸಾಲ ಮಾಡಿಕೊಂಡಿದ್ದ ಪ್ರಕಾಶ್, ಬೆಳೆ ಕೈಕೊಟ್ಟಿದ್ದರಿಂದ ಮಾನಸಿಕವಾಗಿ ಆಘಾತ-ಕ್ಕೆ ಒಳಗಾಗಿದ್ದ ಎಂದು ಹೇಳಲಾಗಿದೆ. ಸಾಲ ತೀರಿಸಲು ಆಗದ ಹಿನ್ನೆಲೆಯಲ್ಲಿ ಮನನೊಂದು ತನ್ನದೇ ಜಮೀನಿನಲ್ಲಿ ಇರುವ ಮರವೊಂದಕ್ಕೆ ನೇಣು ಬಿಗಿದುಕೊಂಡು ಸಾವಿಗೆ ಶರಣಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಕಾಳಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಚಿವ ಈಶ್ವರ್ ಖಂಡ್ರೆ

## ಕಾಲಿಗೆ ಬಿದ್ದ ಕಾರಂಜ ಸಂತ್ರಸ್ತ



ಬೀದರ. ಫೆ. 21 : ಕಾರಂಜ ಸಂತ್ರಸ್ತರೊಬ್ಬರು ಪರಿಹಾರಕ್ಕಾಗಿ ಸಚಿವ ಈಶ್ವರ್ ಖಂಡ್ರೆ ಕಾಲಿಗೆ ಬಿದಿದ್ದು, ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಈಶ್ವರ್ ಖಂಡ್ರೆ ಜಿಲ್ಲೆಗೆ ಭೇಟಿ ನೀಡಿದ ವೇಳೆ ಕಾರಂಜಾ ಡ್ಯಾಂ ನಿರ್ಮಾಣ ವೇಳೆ ನನ್ನ 26 ಎಕರೆ ಜಮೀನು ಹೋಗಿದೆ. ನಾನು ಇನ್ನೂ ಎಷ್ಟು ವರ್ಷ ಕಾಯಬೇಕು. ನಮಗೆ ಪರಿಹಾರ ಹಣ ನೀಡಿ ಎಂದು ಕಾರಂಜ ಡ್ಯಾಂನ

(2ನೇ ಪುಟ ನೋಡಿ)

## ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದು:ಡಿಎಚ್‌ಓ ಧ್ಯಾನೇಶ್ವರ ನಿರಗುಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.21: ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಜನರಿಗೆ ಅರಿವು ಮೂಡಿಸುವುದರಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಧ್ಯಾನೇಶ್ವರ ನಿರಗುಡೆ ಅವರು ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಹಿತಿ ಶಿಕ್ಷಣ ಸಂವಹನ ವಿಭಾಗ ಬೀದರ ಸಹಯೋಗದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮಾಧ್ಯಮ ಮಿತ್ರರಿಗೆ ಆರೋಗ್ಯ ಕಾರ್ಯಕ್ರಮಗಳ ಅರಿವು ಮೂಡಿಸುವ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಆರೋಗ್ಯ-ಕ್ಕೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳು ಚಾಲನೆಯಲ್ಲಿದ್ದು, ಜನರಿಗೆ ಉತ್ತಮವಾದ ಆರೋಗ್ಯ ಸೇವೆಯನ್ನು ಒದಗಿಸಲಾಗಿದೆ. ಜಿಲ್ಲೆಯಲ್ಲಿ ಟಿಬಿ ತಪಾಸಣೆಗೆ ಹೊಸ ತಂತ್ರಜ್ಞಾನವಾದ ನ್ಯಾಟ್‌ನ್ನು ಬಳಸಲಾಗುತ್ತಿದ್ದು, ಯಶಸ್ವಿಯಾದ ಫಲಿತಾಂಶ ನೀಡುತ್ತಿದೆ ಹಾಗೂ ಮಲೇರಿಯಾ,

(2ನೇ ಪುಟ ನೋಡಿ)

## ನಿಗಮ ಮಂಡಳಿಗೆ 10 ದಿನಗಳ ಒಳಗೆ ನಿರ್ದೇಶಕರ ನೇಮಕ: ಚಂದ್ರಶೇಖರ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.21: 10 ದಿನಗಳ ಒಳಗೆ ನಿಗಮ ಮಂಡಳಿಗಳ ನಿರ್ದೇಶಕರ ನೇಮಕಾತಿ ಆಗಲಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಚಂದ್ರಶೇಖರ್ ತಿಳಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ನಿಗಮ ಮಂಡಳಿಗಳ ನಿರ್ದೇಶಕರ ನೇಮಕವನ್ನು ಸರ್ಕಾರ ಮಾಡಲಿದೆ. ನಾವು ಈಗಾಗಲೇ ಲೀಸ್ಟ್ ಕೊಟ್ಟಿದ್ದೇವೆ. ಅಧ್ಯಕ್ಷರು ಅದನ್ನು ಸರ್ಕಾರಕ್ಕೆ ಶಿಫಾರಸು ಮಾಡ್ತಾರೆ. 10 ದಿನಗಳ ಒಳಗೆ ನಿರ್ದೇಶಕರ ನೇಮಕ ಆಗಲಿದೆ ಎಂದು ತಿಳಿಸಿದ್ದಾರೆ. ಪರಮೇಶ್ವರ್ ನೇತೃತ್ವದ ಕಮಿಟಿ ಈಗಾಗಲೇ ಪಟ್ಟಿ ಕೊಟ್ಟಿದೆ. ನಾನು ಅದರಲ್ಲಿ ನಿರ್ದೇಶಕನಾಗಿದ್ದೆ. ಕೆಲವು ಬದಲಾವಣೆಗಳು ಆಗಿದೆ. ಹಾಗಾಗಿ ಸ್ವಲ್ಪ ವಿಳಂಬವಾಗಿದೆ ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.

# ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಅನುಷ್ಠಾನಗೊಳಿಸಿ; ಶುಕ್ಲಾ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 21: ದೇಶದ ಪ್ರಧಾನಮಂತ್ರಿ ವಿಶೇಷ ಕಾರ್ಯಕ್ರಮಗಳಲ್ಲಿ ಒಂದಾದ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯಡಿ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿದ್ದು, ಅವುಗಳನ್ನು ಜಿಲ್ಲೆಯಲ್ಲಿ ಉತ್ತಮ ರೀತಿಯಲ್ಲಿ ಅನುಷ್ಠಾನಗೊಳ್ಳಿಸಬೇಕೆಂದು ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿಗಳಾದ ಸಮೀರ್ ಶುಕ್ಲಾ ಅವರು ಹೇಳಿದರು.

ಫೆ.21ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೇಶದ ಹಿಂದುಳಿದ 112 ಜಿಲ್ಲೆಗಳಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆ 2018ರಲ್ಲಿ ಜಾರಿಗೊಂಡಿದ್ದು, ವಿವಿಧ ಕ್ಷೇತ್ರಗಳಲ್ಲಿ ಜಿಲ್ಲೆಯನ್ನು ಅಭಿವೃದ್ಧಿ ಪಥದಲ್ಲಿ ಸಾಗಿಸುವುದು ಗುರಿ ಹೊಂದಲಾಗಿದೆ. ಅಲ್ಲದೆ ಜನರ ಆರೋಗ್ಯ ಮತ್ತು ಪೌಷ್ಟಿಕ, ಕೃಷಿ ಮತ್ತು ಜಲ ಸಂಪನ್ಮೂಲ, ಶಿಕ್ಷಣ, ಆರ್ಥಿಕ ಸೇರ್ಪಡೆ ಹಾಗೂ ಕೌಶಲಾಭಿವೃದ್ಧಿ ಮತ್ತು ಮೂಲಸೌಕರ್ಯಗಳ ಕುರಿತು 49 ಸೂಚ್ಯಂಕ ನೀಡಲಾಗಿದೆ. ಇವುಗಳಲ್ಲಿ ಪ್ರಗತಿ ಸಾಧಿಸಿದರೆ ಉತ್ತಮ ರ್‍ಯಾಂಕ್ ಸಿಗುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳು ಜವಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕೆಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಪಿ.ಎಮ್ ಸ್ವಾನಿಧಿ, ಮುದ್ರಾ ಹಾಗೂ ವಿಶ್ವಕರ್ಮ ಯೋಜನೆಗಳತ್ತ

(2ನೇ ಪುಟ ನೋಡಿ)

# ಫೆ. 24 ರಿಂದ ಕಲಬುರಗಿಯಲ್ಲಿ

## ರಾಷ್ಟ್ರಮಟ್ಟದ ಬೃಹತ್ ಸರಸ್ ಮೇಳ ಆಯೋಜನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.21:ಕರ್ನಾಟಕ ಸರ್ಕಾರ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕಲಬುರಗಿ ಇವರ ಸಹಯೋಗದೊಂದಿಗೆ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಫೆ.24 ರಿಂದ ಮಾ.05 ರ ವರೆಗೆ ಕಲಬರುಗಿ ಶ್ರೀ ಶರಣಬಸವೇಶ್ವರ ಜಾತ್ರೆ ಮೈದಾನದಲ್ಲಿ ರಾಷ್ಟ್ರಮಟ್ಟದ ನಮ್ಮ ಸರಸ್ ಮೇಳ-2025, ಮಹಿಳಾ ಸ್ವ-ಸಹಾಯ ಗುಂಪುಗಳ ಉತ್ಪನ್ನಗಳ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಆಯೋಜಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ ಪಾಟೀಲ ಹೇಳಿದರು

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 10 ದಿನಗಳ ಕಾಲ ನಡೆಯವ ಸರಸ್ ಮೇಳ ಕಲಬುರಗಿಯಲ್ಲಿ ಹಬ್ಬದ ವಾತಾವರಣ ಸೃಷ್ಟಿಸಲಿದೆ ಎಂದ ಅವರು ಪ್ರತಿದಿನ ಬೆಳಗ್ಗೆ 10:30 ರಿಂದ ರಾತ್ರಿ 09:30 ರ ವರೆಗೆ ರಾಷ್ಟ್ರಮಟ್ಟದ ಸರಸ್ ಮೇಳ ನಡೆಯಲಿದ್ದು, ಮೇಳದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸ್ವ-ಸಹಾಯ ಗುಂಪುಗಳ ಮಹಿಳೆಯರು ಭಾಗವಹಿಸಲಿದ್ದು, ಆಯಾ ರಾಜ್ಯಗಳ ಪ್ರಮುಖ ಉತ್ಪನ್ನಗಳ ವಸ್ತು ಪ್ರದರ್ಶನ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದರು

ಫೆ.24 ರಂದು ರಾಷ್ಟ್ರಮಟ್ಟದ ಸರಸ್ ಮೇಳವನ್ನು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆ ಹಾಗೂ ಮಾಹಿತಿ & ತಂತ್ರಜ್ಞಾನ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರು ಹಾಗೂ ವೈದ್ಯಕೀಯ ಶಿಕ್ಷಣ ಮತ್ತು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಕಾಲಿಗೆ ಬಿದ್ದ ಕಾರಂಜ ಸಂತ್ರಸ್ತ

ನಿರ್ಮಾಣದ ವೇಳೆ ಭೂಮಿ ಕಳೆದುಕೊಂಡ ರೈತನೊಬ್ಬ ಸಚಿವ ಈಶ್ವರ್ ಖಂಡ್ರೆ ಅವರ ಕಾಲಿಗೆ ಬಿದಿದ್ದಾರೆ. ರೈತ ಕಾಲಿಗೆ ಬೀಳುತ್ತಿದ್ದಂತೆ ನೀವು ಹಿರಿಯರು ನಮ್ಮ ಕಾಲಿಗೆ ಬೀಳಬಾರದು ಎಂದು ರೈತನನ್ನು ಸಚಿವ ಈಶ್ವರ್ ಖಂಡ್ರೆ ಅವರು ಸಮಾಧಾನ ಮಾಡಿದರು. ನನ್ನ ಒಬ್ಬ ಮಗ ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡುತ್ತಾನೆ ಇನ್ನೊಬ್ಬ ಕೂಲಿ ಕೆಲಸಕ್ಕೆ ಹೋಗ್ತಾನೆ. ನಾನು 26 ಎಕರೆ ಭೂಮಿಯನ್ನು ಕಳೆದುಕೊಂಡಿದ್ದೇನೆ. ಖಂಡ್ರೆ ಸಾಹೇಬರು ನಮಗೆ ಪರಿಹಾರ ಕೊಡುವುದಾಗಿ ಹೇಳಿ ನಮ್ಮ ಹೋರಾಟವನ್ನು ಕೈಬಿಡಿಸಿದ್ದಾರೆ. ನಾನು ಕಾಲಿಗೆ ಬಿದ್ದ ಮೇಲಾದರೂ ಪರಿಹಾರ ನೀಡಬಹುದೆಂದು ಭಾವಿಸಿ ಸಚಿವರ ಕಾಲಿಗೆ ಬಿದ್ದೆ ಎಂದು ಸಚಿವರ ಮುಂದೆ ಅಳಲು ತೋಡಿಕೊಂಡಿದ್ದಾನೆ.

# ಉತ್ತಮ ರೀತಿಯಲ್ಲಿ ಅನುಷ್ಠಾನಗೊಳಿಸಿ; ಶುಕ್ಲಾ

ಹೆಚ್ಚಿನ ಗಮನಹರಿಸಬೇಕು. ಅಲ್ಲದೆ ಕಡ್ಡಾಯವಾಗಿ ಸರ್ಕಾರಿ ಆಸ್ಪತ್ರೆಯಲ್ಲಿ ಮಹಿಳೆಯರ ಹೆರಿಗೆಯ ಪ್ರಮಾಣವನ್ನು ಹೆಚ್ಚಿಸಬೇಕು. ಗರ್ಭಿಣಿಯರಲ್ಲಿ ರಕ್ತಹೀನತೆಯಂತಹ ಸಮಸ್ಯೆಗಳ ಕುರಿತು ಸಂಬಂಧಿಸಿದ ಅಧಿಕಾರಿಗಳು ಗಮನಹರಿಸಬೇಕು. ಆರೋಗ್ಯ ಇಲಾಖೆಯಲ್ಲಿ ಖಾಲಿವಿರುವ ವಿವಿಧ ಹುದ್ದೆಗಳ ಭರ್ತಿಗೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳನ್ನು ಸೂಚನೆ ನೀಡಿದರು. ಕಡಿಮೆ ತೂಕದ ಶಿಶುಗಳ ಜನನವನ್ನು ಶೇಕಡಾವಾರು ಕಡಿಮೆ ಮಾಡುವಲ್ಲಿ ಆರೋಗ್ಯ ಕ್ಷೇತ್ರವು ತನ್ನ ಸಾಧನೆಗಳನ್ನು ಮಾಡಿದ್ದು, ಈ ಕಾರ್ಯಕ್ಕೆ ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿಗಳು ಶ್ಲಾಘಿಸಿದರು. ಇದಲ್ಲದೆ ಐಸಿಡಿಎಸ್ ಕಾರ್ಯಕ್ರಮದ ಅಡಿಯಲ್ಲಿ ನಿಯಮಿತವಾಗಿ ಪೂರಕ ಪೌಷ್ಟಿಕಾಂಶವನ್ನು ಪಡೆಯುವ ಮಹಿಳೆಯರ ಸಂಖ್ಯೆ ಮತ್ತು ರೋಗಿಗಳಿಗೆ ಒದಗಿಸಲಾದ ಪ್ರೋಟೀನ್-ಭರಿತ ಆಹಾರಗಳ ಕುರಿತು ಶಿಕ್ಷಣ, ಕೃಷಿ ಮತ್ತು ಜಲಸಂಪನ್ಮೂಲಗಳು, ಆರ್ಥಿಕ ಸೇರ್ಪಡೆ ಮತ್ತು ಕೌಶಲ್ಯ ಅಭಿವೃದ್ಧಿ ಮತ್ತು ಮೂಲಭೂತ ಮೂಲಸೌಕರ್ಯಗಳಂತಹ ಪ್ರಮುಖ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಮತ್ತು ಸವಾಲುಗಳನ್ನು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಎಮ್.ಸಿ.ಹೆಚ್ ಆಸ್ಪತ್ರೆಗೆ ಭೇಟಿ; ನಗರದ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿಗಳ ಕಚೇರಿಯ ಎದುರುಗಡೆ ಇರುವ ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಗೆ ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿಗಳಾದ ಸಮೀರ್ ಶುಕ್ಲಾ ಅವರು ಭೇಟಿ ನೀಡಿ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಆಸ್ಪತ್ರೆಗೆ ಬರುವ ತಾಯಿ ಮತ್ತು ಮಕ್ಕಳಿಗೆ ಉತ್ತಮ ರೀತಿಯ ಚಿಕಿತ್ಸೆ ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನ ನೀಡಿದರು. ಈ ವೇಳಿ ಗರ್ಭಿಣಿ ಮಹಿಳೆಯರೊಂದಿಗೆ ಮಾತನಾಡಿ, ಆಸ್ಪತ್ರೆಯಲ್ಲಿ ಸಿಗುವ ಆರೋಗ್ಯ ಸೌಲಭ್ಯಗಳ ಕುರಿತು ಚರ್ಚಿಸಿದರು. ನಂತರ ಸ್ಕ್ಯಾನಿಂಗ್ ಕೊಠಡಿಗೆ ಭೇಟಿ ನೀಡಿ ವೀಕ್ಷಣೆ ಮಾಡಿ ಡಿ.ಎಚ್.ಒ, ಆರ್.ಸಿ.ಹೆಚ್ ಅಧಿಕಾರಿ ಹಾಗೂ ಅಲ್ಲಿನ ಸಿಬ್ಬಂದಿಗಳೊಂದಿಗೆ ಚರ್ಚಿಸಿ, ಔಷದ ವಿತರಣೆ ವಿಭಾಗಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಲಸಿಕಾ ಕೊಠಡಿಗೆ ತಾಯಿ ಮತ್ತು ಮಕ್ಕಳಿಗೆ ನೀಡುವ ಲಸಿಕೆ ಕುರಿತು ಮಾಹಿತಿ ಪಡೆದು ಲಸಿಕೆಯ ಮಾಹಿತಿಯನ್ನು ಆನ್ಲೈನ್‌ನಲ್ಲಿ ನೋಂದಣೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ, ಹಾಜರಾತಿ ಪುಸ್ತಕವನ್ನು ಪರಿಶೀಲಿಸಿದರು. ಅಂಗನವಾಡಿ ಹಾಗೂ ಆದರ್ಶ ವಿದ್ಯಾಲಯಕ್ಕೆ ಭೇಟಿ; ನಗರದ ಪೊಲೀಸ ಕಾಲೋನಿಯ ಅಂಗನವಾಡಿ ಕೇಂದ್ರ-12ಕ್ಕೆ ಭೇಟಿ ನೀಡಿ ಮಕ್ಕಳ ಕಲಿಕೆಯನ್ನು ವೀಕ್ಷಣೆ ಮಾಡಿದರು. ಈ ವೇಳೆ ಮಕ್ಕಳಿಗೆ ನೀಡುವ ಆಹಾರದ ವಿವರಣೆಯನ್ನು ಅಂಗನವಾಡಿ ಅಧಿಕಾರಿಗಳಿಂದ ಪಡೆದರು. ಈ ವೇಳೆ ಮಕ್ಕಳ ಬಿಡಿಸಿದ ವಿವಿಧ ಚಿತ್ರಕಲಾವನ್ನು ವೀಕ್ಷಣೆ ಮಾಡಿದರು. ಮಕ್ಕಳಿಂದ ನೃತ್ಯ ಪ್ರದರ್ಶನ ಮಾಡಲಾಯಿತು. ಈ ವೇಳೆ ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿಗಳಾದ ಸಮೀರ್ ಶುಕ್ಲಾ ಅವರು ಮಕ್ಕಳ ಪ್ರತಿಭೆ ನೋಡಿ ಪ್ರಶಂಸೆ ವ್ಯಕ್ತಪಡಿಸಿದರು. ನಂತರ ನಗರದ ಯರಮರಸಿನ ಸರ್ಕಾರಿ ಆದರ್ಶ ವಿದ್ಯಾಲಯದ ಗ್ರಂಥಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ವಿದ್ಯಾರ್ಥಿಗಳಿಗೆ ಕಿಟ್‌ಗಳನ್ನು ವಿತರಣೆ ಮಾಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಂ ಪಾಂಡ್ವೆ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹೋಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಕೌಶಲಾಭಿವೃದ್ಧಿಕಾರಿ ಜಿ.ಯು.ಹುಡೇದ್, ಕೈಗಾರಿಕಾರಿ ಅಧಿಕಾರಿ ಬಸವರಾಜ ಯರಕಂಚಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಚಿದಾನಂದ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಯಪ್ರಕಾಶ್, ಪಶು ಸಂಗೋಪಾನ ಇಲಾಖೆಯ ಅಧಿಕಾರಿ ಡಾ.ಅಶೋಕ ಕೋಲಕಾರ್ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ರಾಷ್ಟ್ರಮಟ್ಟದ ಬೃಹತ್ ಸರಸ್ ಮೇಳ ಆಯೋಜನೆ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ್ ಆರ್ ಪಾಟೀಲ್ ಅವರು ಉದ್ಘಾಟಿಸಲಿದ್ದಾರೆ. ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕರಾದ ಶ್ರೀ ಅಲ್ಲಮಪ್ರಭು ಪಾಟೀಲ್ ಅವರು ಅಧ್ಯಕ್ಷತೆ ವಹಿಸಲಿರುವ ಈ ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲೆಯ ಲೋಕಸಭಾ ಹಾಗೂ ರಾಜ್ಯಸಭಾ ಸದಸ್ಯರು ವಿಧಾನಸಭೆ ಹಾಗೂ ವಿಧಾನಪರಿಷತ್ ಸದಸ್ಯರು ಭಾಗವಹಿಸಲಿದ್ದಾರೆ.ಸಮಾರಂಭದಲ್ಲಿ ಗಣ್ಯ ಮಾನ್ಯರು ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು, ಇಲಾಖಾವಾರು ಅಧಿಕಾರಿಗಳು ಹಾಗೂ ಜಿಲ್ಲೆಯ ಹಾಗೂ ಸುತ್ತಮುತ್ತಲಿನ 2000 ಕ್ಕೂ ಹೆಚ್ಚು ಸ್ವ-ಸಹಾಯ ಗುಂಪುಗಳ ಮಹಿಳೆಯರು, ಯುವ ಜನತೆ ಹಾಗೂ ಇನ್ನಿತರರು ಆಗಮಿಸಲಿದ್ದಾರೆ.ಬೃಹತ್ ಮಟ್ಟದಲ್ಲಿ 230 ವಸ್ತು ಪ್ರದರ್ಶನ ಮತ್ತು ಮಾರಾಟ ಮಳಿಗೆ, 20 ಲೈವ್ ಫುಡ್ ಸ್ಟಾಲ್ ರಾಷ್ಟ್ರ ಮಟ್ಟದ ನಮ್ಮ ಸರಸ್ ಮೇಳದಲ್ಲಿ ಸ್ವ-ಸಹಾಯ ಗುಂಪುಗಳ ಮಹಿಳೆಯರು ಉತ್ಪಾದಿಸಿರುವ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಒಟ್ಟು 230 ಮಳಿಗೆಗಳನ್ನು ಹಾಗೂ 20 ಲೈವ್ ಫುಡ್ ಸ್ಟಾಲ್ ಗಳನ್ನು ಸ್ಥಾಪಿಸಲಾಗುತ್ತಿದೆ. ಈ ಲೈವ್ ಫುಡ್ ಕೋರ್ಟ್ ನಲ್ಲಿ ರಾಜ್ಯದ 10 ಮಳಿಗೆಗಳು ಹಾಗೂ ಬೇರೆ ರಾಜ್ಯಗಳ 10 ಲೈವ್ ಫುಡ್ ಸ್ಟಾಲ್ ಗಳಲ್ಲಿ ಸ್ಥಳದಲ್ಲೇ ವಿವಿಧ ತಿಂಡಿ ಹಾಗೂ ಭಕ್ಷ್ಯಗಳನ್ನು ತಯಾರಿಸಿ ಕೊಡಲಾಗುವುದು.ಅಕ್ಕ ಕಥೆ ಶೀರ್ಷಿಕೆ ಅಡಿಯಲ್ಲಿ ಸ್ಥಾಪಿಸಲಾಗುತ್ತಿರುವ ಲೈವ್ ಫುಡ್ ಕೋರ್ಟ್ ನಲ್ಲಿ ರುಚಿ ಹಾಗೂ ಶುಚಿಯಾದ ಆಹಾರ ಪದಾರ್ಥಗಳು ಕೈಗೆಟುಕುವ ಬೆಲೆಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗಲಿದ್ದು, ಪ್ರಮುಖವಾಗಿ ದಾವಣಗೆರೆ ಬೆಣ್ಣೆ ದೋಸೆ. ಮೈಸೂರು ಮಸಾಲ ದೊಸೆ, ಗಿರಮಿಟ್, ಬಜ್ಜಿ ಸೇರಿದಂತೆ ವಿವಿಧ ವೈವಿಧ್ಯಮಯ ಖಾದ್ಯಗಳು ದೊರೆಯಲಿವೆ.ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜನೆ: ನಮ್ಮ ಸರಸ್ ಮೇಳದಲ್ಲಿ 10 ದಿನಗಳ ಕಾಲ ರಾಜ್ಯದ ಖ್ಯಾತ ಸಂಗೀತಗಾರರು ಹಾಗೂ ಸ್ಥಳೀಯ ಕಲಾವಿದರಿಂದ ವಿವಿಧ ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಸಂಜೆ 06:30 ರಿಂದ ರಾತ್ರಿ 09:30 ರ ವರೆಗೆ ಆಯೋಜಿಲಾಗಿದೆ.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಾವಿದರು ಸೇರಿದಂತೆ ಸ್ಥಳೀಯ ಕಲಾವಿದರು ಈ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕಾರ್ಯಕ್ರಮ ನೀಡಲಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ಅವಿನಾಶ ಶಿಂಧೆ ಇದ್ದರು

ನಮ್ಮ ಸರಸ್ ಮೇಳದ ವೈವಿಧ್ಯಮಯ ಉತ್ಪನ್ನಗಳು: ಕರ್ನಾಟಕದ ಇಳಕಲ್ ಸೀರೆ, ಕಸೂತಿ ವಸ್ತುಗಳು, ಚನ್ನಪಟ್ಟಣ ಗೊಂಬೆ, ಬೀದರ ಜಿಲ್ಲೆಯ ಬಿದರಿ ಅಲಂಕಾರಿಕ ಉತ್ಪನ್ನಗಳು, ಕೊಪ್ಪಳ ಜಿಲ್ಲೆಯ ಕಿನ್ನಾಳ ಮಕ್ಕಳ ಆಟದ ಗೊಂಬೆಗಳು, ಉತ್ತರ ಭಾರತದಿಂದ ಜಮ್ಮು ಕಾಶ್ಮೀರದ ಕಸೂತಿ ಉಡುಪುಗಳು, ಪಂಜಾಬ್ ಬಳೆಗಳು, ಸಿಕ್ಕಿಂ ಮತ್ತು ಬಿಹಾರದ ಕೈಮಗ್ಗ, ದಕ್ಷಿಣ ಭಾರತದ ತಮಿಳುನಾಡಿನ ಕೃತಕ ಆಭರಣಗಳು, ಕೇರಳದ ಮಣಿಗಳು, ಆಂದ್ರ ಪ್ರದೇಶದ ಆಟಿಕೆಗಳು ಸೇರಿದಂತೆ ಮುಂತಾದ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಪ್ರಮುಖ ಆಕರ್ಷಣೆಯಾಗಿದೆ.ತರಬೇತಿ ಕಾರ್ಯಾಗಾರ: ನಮ್ಮ ಸರಸ್ ಮೇಳದ ಮುಖ್ಯ ವೇದಿಕೆಯ ಪ್ರಾಂಗಣದದಲ್ಲಿ ಪ್ರತಿದಿನ ವಿವಿಧ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಪುಮುಖವಾಗಿ ಮಹಿಳೆಯರ ಉತ್ಪನ್ನಗಳಿಗೆ ಪ್ಯಾಕಿಂಗ್ ಹಾಗೂ ಬ್ಯಾಂಡಿಂಗ್, ಮಾರುಕಟ್ಟೆ ಕೌಶಲ್ಯ, ಉತ್ಪನ್ನಗಳ ಮೌಲ್ಯವರ್ಧನೆ, ಸರ್ಕಾರದ ವಿವಿಧ ಇಲಾಖೆಯಿಂದ ಸಿಗುವ ಸೌಲಭ್ಯಗಳು, ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಸಾಮಾಜಿಕ ವಿಮಾ ಭದ್ರತಾ ಸೌಲಭ್ಯ ಸೇರಿದಂತೆ ಅವರ ಉದ್ಯಮವನ್ನು ಮೇಲ್ದರ್ಜೆಗೆ ಏರಿಸಲು ಬ್ಯಾಂಕ್ ಲಿಂಕೇಜ್ ಸೇವೆಗಳ ಕುರಿತು ಉಪನ್ಯಾಸ ಹಾಗೂ ತರಬೇತಿ ಕಾರ್ಯಾಗಾರ ಆಯೋಜಿಸಲಾಗುತ್ತಿದೆ.

# ಬೀದರನ ಐವರು ಸಾವು

ನಿವಾಸಿಗಳು ಎಂದು ಗುರುತಿಸಲಾಗಿದೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗಿದೆ. ಪ್ರಯಾಗ್‌ರಾಜ್ ಮತ್ತು ಕಾಶಿಯಲ್ಲಿ ನಡೆದ ಕುಂಭಮೇಳದಲ್ಲಿ ಪಾಲ್ಗೊಂಡು ಅಯೋಧ್ಯೆ ಕಡೆಗೆ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ಮೃತರನ್ನು ಲಕ್ಷ್ಮೀ (56), ನೀಲಮ್ಮ (55), ಸಂತೋಷ್‌ಕುಮಾರ್ (42), ಸುನೀತಾ (42) ಎಂದು ಗುರುತಿಸಲಾಗಿದೆ. ಡಿಕ್ಕಿ ಎಷ್ಟು ಭೀಕರವಾಗಿತ್ತೆಂದರೆ, ಒಬ್ಬ ಮಹಿಳೆ ಸೇರಿದಂತೆ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದರು. ಈ ಮಧ್ಯೆ, ದಾರಿಯಲ್ಲಿ ಒಬ್ಬ ವ್ಯಕ್ತಿ ಸಾವನ್ನಪ್ಪಿದ್ದಾನೆ. ಈ ಭೀಕರ ಅಪಘಾತದಲ್ಲಿ, ಒಬ್ಬ ಮಹಿಳೆ ಸೇರಿದಂತೆ ಇಬ್ಬರು ಕ್ರೂಸರನೊಳಗೆ ಸಿಲುಕಿಕೊಂಡಿದ್ದರು. ಟ್ರಕ್‌ನಲ್ಲಿ ಸಿಲುಕಿಕೊಂಡಿದ್ದ ಕ್ರೂಸರ್‌ನ್ನು ತೆಗೆಯಲು ಪೊಲೀಸರು ಕ್ರೇನ್ ಬಳಸಬೇಕಾಯಿತು.

## ಸಚಿವರ ಸಂತಾಪ

ವ್ಯಕ್ತಪಡಿಸಿದ್ದಾರೆ.ಲಾಡಗೇರಿಯ 14 ಜನರು ಪ್ರಯಾಣಿಸುತ್ತಿದ್ದ ಕ್ರೂಸರ್ ವಾಹನ ಮತ್ತು ಲಾರಿಯೊಂದರ ನಡುವೆ ಇಂದು ಬೆಳಗಿನ ಜಾವ ಡಿಕ್ಕಿಯಾಗಿ 5 ಜನರು ಮೃತಪಟ್ಟು, ಇತರ 7 ಜನರು ಗಾಯಗೊಂಡಿದ್ದಾರೆ ಎಂದು ತಿಳಿದು ಆಘಾತವಾಯಿತು. ಕೂಡಲೇ ಜಿಲ್ಲಾಡಳಿತಕ್ಕೆ ಸೂಚನೆ ನೀಡಿ ಮೃತರ ಪಾರ್ಥಿವ ಶರೀರವನ್ನು ಬೀದರ್‌ಗೆ ತರಲು ಮತ್ತು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆಗೆ ವ್ಯವಸ್ಥೆ ಮಾಡಲು ಸೂಚಿಸಿರುವುದಾಗಿ ಈಶ್ವರ ಖಂಡ್ರೆ ತಿಳಿಸಿದ್ದಾರೆ.ಅಲ್ಲಿ ಕರ್ನಾಟಕದವರೇ ಆದ ಚನ್ನಪ್ಪ ಎಂಬ ಅಧಿಕಾರಿಯಿದ್ದು ಅವರೊಂದಿಗೆ ಮಾತನಾಡಿ, ಮೃತರ ಮತ್ತು ಗಾಯಾಳುಗಳ ಕುಟುಂಬಕ್ಕೆ ಸೂಕ್ತ ನೆರವು ದೊರಕಿಸಲು ತಿಳಿಸಿರುವುದಾಗಿ ಈಶ್ವರ ಖಂಡ್ರೆ ಹೇಳಿದ್ದಾರೆ.ಈ ಸಂಕಷ್ಟದ ಸಮಯದಲ್ಲಿ ಸರ್ಕಾರ ಅವರೊಂದಿಗೆ ನಿಲ್ಲುತ್ತದೆ. ಮೃತರ ಅಗಲಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಅವರ ಕುಟುಂಬದವರಿಗೆ ದೇವರು ನೀಡಲಿ, ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

ಹಜ್ ಸಚಿವರಾದ ರಹೀಂ ಖಾನ್ ಅವರು ಶೋಕ ವ್ಯಕ್ತಪಡಿಸಿದ್ದಾರೆ.ಈ ದುಃಖದ ಸಂದರ್ಭದಲ್ಲಿ ಅವರ ಕುಟುಂಬದೊಂದಿಗೆ ನಾನು ಆಳವಾದ ಸಂತಾಪ ವ್ಯಕ್ತಪಡಿಸುತ್ತೇನೆ ಲಾಡಗೇರಿಯ 14 ಜನರು ಪ್ರಯಾಣಿಸುತ್ತಿದ್ದ ಕ್ರೂಸರ್ ವಾಹನ ಲಾರಿಯೊಂದಿಗೆ ಡಿಕ್ಕಿಯಾಗಿ ಈ ಭೀಕರ ಅಪಘಾತ ಸಂಭವಿಸಿದ್ದು, 5 ಮಂದಿ ಸಾವನ್ನಪ್ಪಿದರೆ, 7 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಖಂಡ್ರೆ ಜಿ ಹಾಗೂ ನಾನು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡಲು ಮತ್ತು ಮೃತ ದೇಹಗಳನ್ನು ಬೀದರ್‌ಗೆ ತರಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದರು. ಮೃತರ ಕುಟುಂಬಗಳಿಗೆ ದೇವರು ದುಃಖ ಸಹಿಸುವ ಶಕ್ತಿಯನ್ನು ನೀಡಲಿ,ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂಬುದಾಗಿ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

ಸ್ನಾನ ಮುಗಿಸಿಕೊಂಡು ವಾಪಸ್ ಆಗುವ ವೇಳೆ ಉತ್ತರ ಪ್ರದೇಶದ ಕಾಶಿ ಹತ್ತಿರ ಶುಕ್ರವಾರ ಬೆಳಿಗ್ಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಬೀದರ್ ನಗರದ ಲಾಡಗೇರಿಯ ಐವರು ಭಕ್ತರು ದುರಂತ ಅಂತ್ಯ ಕಂಡ ಘಟನೆ ಬಗ್ಗೆ ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ಸಂತಾಪ ಸೂಚಿಸಿದ್ದಾರೆ.

ಕುಂಭ ಯಾತ್ರೆ ಬಳಿಕ ಕಾಶಿ ವಿಶ್ವನಾಥ ದರ್ಶನಕ್ಕೆ ಹೊರಟಿದ್ದ ಲಾಡಗೇರಿಯ 14 ಭಕ್ತರಿದ್ದ ಕ್ರೂಷರ್ ಜೀಪ್ ಮಿರ್ಜಾಪುರ ಹತ್ತಿರದ ರುಪಾಪುರ ಬಳಿ ಅಪಘಾತಕ್ಕೀಡಾಗಿ ಐವರು ಮೃತಪಟ್ಟರೆ, 8 ಭಕ್ತರು ಗಾಯಗೊಂಡಿದ್ದಾರೆ. ಮೃತರ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಹಾಗೂ ಕುಟುಂಬದವರಿಗೆ ದುಃಖ ಸಹಿಸುವ ಶಕ್ತಿ ನೀಡಲಿ. ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಅವರು ತಮ್ಮ ಸಂತಾಪದಲ್ಲಿ ತಿಳಿಸಿದ್ದಾರೆ.

# ಮಾಧ್ಯಮಗಳ ಪಾತ್ರ ಮಹತ್ವದ್ದು: ಡಿಎಚ್‌ಓ ಧ್ಯಾನೇಶ್ವರ ನಿರಗುಡೆ

ಡೆಂಗ್ಯೂ, ಚಿಕನ್ ಗೂನ್ಯಾದಂತಹ ಪ್ರಕರಣಗಳ ಸಂಖ್ಯೆ ಇಳಿಕೆ ಕಂಡಿದೆ. ಡಬ್ಲ್ಯೂಎಚ್‌ಓ ಗುರಿಯ ಪ್ರಕಾರ ಕುಷ್ಠರೋಗವನ್ನು 2027 ರವರೆಗೆ ನಿರ್ಮೂಲನೆ ಮಾಡುವ ಮಾರ್ಗಗಳು ಹಾಕಿಕೊಳ್ಳಲಾಗಿದೆ ಎಂದರು.ಪ್ರಸ್ತುತ ಜಿಲ್ಲೆಯಲ್ಲಿ ಶೇ. 0.5 ರಷ್ಟು ಮಾತ್ರ ಕುಷ್ಠರೋಗ ಪ್ರಕರಣಗಳು ದಾಖಲಾಗಿವೆ. ಇತ್ತೀಚೆಗೆ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಲು "ಸ್ಪರ್ಷ" ಎಂಬ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಗ್ರಾಮೀಣ ಪ್ರದೇಶದ ಜನರಿಗೆ ಆರೋಗ್ಯದ ಬಗ್ಗೆ ಮಾಹಿತಿ ನೀಡಲು ಕರ್ನಾಟಕ ಸರ್ಕಾರ "ಈ ಸಂಜೀವಿನಿ" ಎಂಬ ಆ್ಯಪ್ ಬಿಡುಗಡೆ ಮಾಡಿದ್ದು ಇದರ ಮೂಲಕ ಮನೆಯಲ್ಲಿಯೇ ಕುಳಿತು ಆರೋಗ್ಯದ ಬಗ್ಗೆ ಮಾಹಿತಿ ಪಡೆದುಕೊಳ್ಳಬಹುದಾಗಿದೆ. ಮಾನಸಿಕ ಆರೋಗ್ಯದ ತಪಾಸಣೆ ಸಂಬಂಧಿಸಿದಂತೆ "ಮನೋ ಚೈತನ್ಯ ಕೇಂದ್ರಗಳು" ಸ್ಥಾಪಿಸಲಾಗಿದೆ. "ಟೆಲಿ ಮಾನಸಿ" ಎಂಬ ಟೋಲ್ ಫ್ರೀ ಸಂಖ್ಯೆ 14416 ಗೆ ಕರೆ ಮಾಡಿ ಮಾಹಿತಿಗಳನ್ನು ಪಡೆದುಕೊಳ್ಳಬಹುದಾಗಿದೆ. ಜನಸಂಖ್ಯೆ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಹಲವು ಕಾರ್ಯಕ್ರಮಗಳು ಚಾಲ್ತಿಯಲ್ಲಿವೆ. ಎಚ್‌ಐವಿ ಏಡ್ಸ್ ಬಗ್ಗೆ ಕೂಡ ಜನರಿಗೆ ಅರಿವು ಮತ್ತು ಚಿಕಿತ್ಸಾ ಮಾರ್ಗಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೈಗೊಂಡಿದೆ. ಆಯುಷ್ಮಾನ ಭಾರತ ಕಾರ್ಯಕ್ರಮದ ಅಡಿಯಲ್ಲಿ ಬಿಪಿಎಲ್ ಕಾರ್ಡ್ ಕುಟುಂಬಗಳಿಗೆ 5 ಲಕ್ಷ ಮತ್ತು ಎಪಿಎಲ್ ಕಾರ್ಡ್ ಕುಟುಂಬಗಳಿಗೆ 1.5 ಲಕ್ಷದ ವರೆಗೆ ಚಿಕಿತ್ಸೆ ವಿಮೆ ನೀಡಲಾಗುತ್ತಿದೆ ಎಂದು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ಡಿಎಸ್‌ಓ ಎಸ್. ಕೆ. ಬೊಮ್ಮಾ, ಡಾ. ರಾಜಶೇಖರ ಪಾಟೀಲ, ಡಾ. ಕಿರಣ್ ಕುಮಾರ್ ಪಾಟೀಲ್, ಡಾ. ಅನಿಲಕುಮಾರ್ ಚಿಂತಾಮಣಿ, ಸಿದ್ದಪ್ಪ ಕಾಂಬಳೆ, ಅನಿತಾ ಸೇರಿದಂತೆ ಕಾರ್ಯಕ್ರಮ ಅಧಿಕಾರಿಗಳು ಉಪಸ್ಥಿತರಿದ್ದರು.

# ಫೆ. 23 ರಂದು ಗ್ರೂಪ" ಬಿ" ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳು : ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.21: ಫೆಬ್ರವರಿ 23 ರಂದು ರಾಜ್ಯದ ವಿವಿಧ ಇಲಾಖೆಗಳಲ್ಲಿನ ಗ್ರೂಪ್ 'ಬಿ' (ಕಲ್ಯಾಣ ಕರ್ನಾಟಕ) ವೃಂದದ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ಕೊಪ್ಪಳ ತಾಲ್ಲೂಕಿನಲ್ಲಿ ನಡೆಯಲಿದ್ದು, ಈ ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ.

ವಿವಿಧ ಇಲಾಖೆಗಳಲ್ಲಿನ ಗ್ರೂಪ್ 'ಬಿ' (ಕಲ್ಯಾಣ ಕರ್ನಾಟಕ) ವೃಂದದ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಕಾಲೇಜು, ಸರಕಾರಿ ಬಾಲಕಿಯರ ಪಿ.ಯು ಕಾಲೇಜು, ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಸರಕಾರಿ ಬಾಲಕರ ಪಿ.ಯು ಕಾಲೇಜು, ಬಾಲಕಿಯರ ಜೂನಿಯರ್ ಕಾಲೇಜು (ಪ್ರೌಢಶಾಲಾ ವಿಭಾಗ) ಹಾಗೂ ಭಾಗ್ಯನಗರದ ಸರಕಾರಿ ಪಿ.ಯು ಕಾಲೇಜು (ಪ್ರೌಢಶಾಲಾ ವಿಭಾಗ), ಈ ಆರು ಪರೀಕ್ಷಾ ಕೇಂದ್ರಗಳಲ್ಲಿ ಫೆ. 23 ರಂದು ಬೆಳಿಗ್ಗೆ 10 ರಿಂದ 11.30 ಗಂಟೆಯವರೆಗೆ ಜರುಗಲಿದ್ದು, ಪರೀಕ್ಷಾ ಕೇಂದ್ರದಲ್ಲಿ ಯಾವುದೇ ರೀತಿಯ ಅಕ್ರಮ, ಅವ್ಯವಹಾರ ನಡೆಯದಂತೆ ತಡೆಗಟ್ಟಲು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಅನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಅಂತರದ ಪ್ರದೇಶದಲ್ಲಿ ವಿವಿಧ ಷರತ್ತಿಗೆ ಒಳಪಟ್ಟು ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ನಿಷೇಧಿತ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್ ಪೇಜರ್, ಝರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆಯಲ್ಲಿ ಪ್ರವೇಶ ಪತ್ರ ಹೊಂದಿದ ಅಭ್ಯರ್ಥಿಗಳು ಹಾಗೂ ನಿಯೋಜಿತ ಶಿಕ್ಷಕರನ್ನು, ಜಾಗೃತ ದಳದವರನ್ನು ಹೊರತುಪಡಿಸಿ ಇನ್ನೂಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವದಿಲ್ಲ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

# ಕೆಎಸ್‌ಎಂಸಿಎಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1 ಕೋಟಿ ದೇಣಿಗೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.21:ಕರ್ನಾಟಕ ಸರ್ಕಾರದ ಏಕೈಕ ಜಾಹೀರಾತು ಸಂಸ್ಥೆಯಾದ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಕಂಪನಿಯ ಅಧ್ಯಕ್ಷರಾದ ಶ್ರೀ ಸತೀಶ್ ಕೃಷ್ಣ ಸೈಲ್ ಅವರು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಂಸ್ಥೆಯ ಆರ್ಥಿಕ ವರ್ಷ 2023-24ರ ಲಾಭಾಂಶದಿಂದ 1 ಕೋಟಿ ರೂಪಾಯಿ ದೇಣಿಗೆಯ ಚೆಕ್ ಅನ್ನು ಇಂದು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಶ್ರೀ ಎಂ.ಬಿ. ಪಾಟೀಲ ಅವರ ಸಮ್ಮುಖದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯರವರಿಗೆ ಹಸ್ತಾಂತರಿಸಿದರು. ಸಂಸ್ಥೆಯು ಸಾಮಾಜಿಕ ಕಳಕಳಿ ಹೊಂದಿರುವ ದ್ಯೋತಕ ಇದಾಗಿರುವುದು.

ಕೆಎಸ್‌ಎಂಸಿಎ ಸಂಸ್ಥೆಯು ಆರ್ಥಿಕ ವರ್ಷ 2023-24ರ ಸಾಲಿನಲ್ಲಿ ರೂ.5.29 ಕೋಟಿಗಳ ಮೊತ್ತದ ಲಾಭಾಂಶವನ್ನು ಘೋಷಿಸಿದೆ.ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ಅಪರ ಮುಖ್ಯಕಾರ್ಯದರ್ಶಿಯವರಾದ ಶ್ರೀ ಎಲ್.ಕೆ. ಅತೀಕ್ ಹಾಗೂ ಕೆಎಸ್‌ಎಂಸಿಎ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಮೊಹಮ್ಮದ್ ಅತೀಕುಲ್ಲಾ ಶರೀಫ್‌ರವರು ಮತ್ತು ಉಪ ಪ್ರಧಾನ ವ್ಯವಸ್ಥಾಪಕರಾದ ಶ್ರೀ ಪಿ.ಎಸ್. ನಂದೀಶ ಅವರು ಉಪಸ್ಥಿತರಿದ್ದರು.

# ಇಂದು ಮಾಚಿದೇವ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.21: ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠಸಂಸ್ಥಾನದವತಿಯಿಂದ ಶನಿವಾರ ಸಾಯಂಕಾಲ 5.30ಕ್ಕೆ 308ನೆಯ ಮಾಸಿಕ ಶರಣ ಸಂಗಮ ಹಾಗೂ ಶರಣ ಮಡಿವಾಳ ಮಾಚಿದೇವ ಜಯಂತಿ ಮತ್ತು ಸಾಮೂಹಿಕ ಪ್ರಾರ್ಥನೆ ಗ್ರಂಥ ಲೋಕಾರ್ಪಣೆ ಕಾರ್ಯಕ್ರಮ ನಡೆಯಲಿದೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಮ್ಮುಖ ವಹಿಸುವರು. ಕಮಲನಗರ ತಾಲೂಕು ವಚನ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಹಾದೇವ ಮಡಿವಾಳ ಅನುಭಾವ ನೀಡಲಿದ್ದಾರೆ. ಬೀದರ್ ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷ ಸುಭಾಷ ಮಡಿವಾಳ ಅಧ್ಯಕ್ಷತೆ ವಹಿಸಲಿದ್ದಾರೆ.

ತಾಲೂಕು ಮಡಿವಾಳ ಸಮಾಜದ ಅಧ್ಯಕ್ಷ ದಿಲೀಪ ಮಡಿವಾಳ, ಪ್ರಧಾನ ಕಾರ್ಯದರ್ಶಿ ಸತೀಶ ಮಡಿವಾಳ, ಉಪಾಧ್ಯಕ್ಷ ಸಂತೋಷ ಮಡಿವಾಳ, ಶಿವು ಮಡಿಆಳ, ಕಾರ್ಯದರ್ಶಿ ಬಸವರಾಜ ಚಿಕಲಚಂದಾ ಭಾಗವಹಿಸಲಿದ್ದಾರೆ. ವೀರಭದ್ರಪ್ಪ ಹುಮನಾಬಾದೆ ಧರ್ಮಗ್ರಂಥ ಪಠಣ ಮಾಡಲಿದ್ದಾರೆ. ಕುಮಾರಿ ನವ್ಯಾ ಮಹಾದೇವ ಮಡಿವಾಳ ವಿದ್ಯಾರ್ಥಿ ಭಾಷಣ ಮಾಡಲಿದ್ದಾಳೆ, ಸಂಗಮೇಶ ಕರಸಣ್ಣ ವಚನ ಗಾಯನ ನಡೆಸಿಕೊಡಲಿದ್ದಾರೆ. ದೀಪಕ ಠಮಕೆ ಕಾರ್ಯಕ್ರಮ ನಿರೂಪಣೆ ಮಾಡಲಿದ್ದಾರೆ.ವಿಶೇಷ ಸನ್ಮಾನ: ಇದೇವೇಳೆ ಮಹಾತ್ಮ ಗಾಂಧಿ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಬೀದರ್ ಬಾಪು ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಧ್ಯ ??ಷ ಡಾ.ಕಾಶಿನಾಥ ಪಾಟೀಲ್, ತಾಲೂಕು ಸರಕಾರಿ ನೌಕರರ ಸಂಘದ ಉಪಾಧ್ಯಕ್ಷ ಪ್ರಭು ಡಿಗ್ಗೆ, ಸದಸ್ಯ ಧನರಾಜ ಬಂಬುಳಗೆ, ಪುರಸಭೆ ನಾಮನಿರ್ದೇಶಿತ ಸದಸ್ಯರಾದ ಶಿವಕುಮಾರ ಪೆದ್ದೆ, ಪಂಚಶೀಲ ಪಾಟೀಲ್, ಸಂಜುಕುಮಾರ ಭಾವಿಕಟ್ಟಿ, ಅತೀಕ ಸೌದಾಗಾರ, ಸುಕನ್ಯಾ ರೇಷ್ಮೆ, ಪ್ರಮುಖರಾದ ದತ್ತಾತ್ರಿ ಮಡಿವಾಳ, ನೇಸಂತೋಷ ನಾಟೇಕರ್, ನರಸಿಂಗ ಹುಣಜೆ ಅವರನ್ನು ಶ್ರೀಮಠದ ಪರವಾಗಿ ಸನ್ಮಾನಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಫೆ.28 ರಂದು ತ್ರೈಮಾಸಿಕ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.21: ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರ ಅಧ್ಯಕ್ಷತೆಯಲ್ಲಿ ಫೆಬ್ರುವರಿ.28 ರಂದು ಬೆಳಿಗ್ಗೆ 11 ಗಂಟೆಗೆ ಬೀದರ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಆಯೋಜಿಸಲಾಗಿದೆ. ಕಾರಣ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಅನುಷ್ಠಾನಾಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಿಸಿದ ಪ್ರಗತಿ ವರದಿಯೊಂದಿಗೆ ತಪ್ಪದೇ ಸಭೆಗೆ ಹಾಜರಾಗಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬುದ್ಧಿಮಾಂದ್ಯ ಬಾಲಕಿಯ ಪೋಷಕರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.21-ಆಳಂದ ಬಸ್ ನಿಲ್ದಾಣದಲ್ಲಿ ದಿನಾಂಕ: 26-06-2016 ರಂದು ಪತ್ತೆಯಾದ 9 ವರ್ಷದ ಬುದ್ಧಿಮಾಂದ್ಯ ಬಾಲಕಿಯನ್ನು ರಕ್ಷಣೆ ಹಾಗೂ ಪೋಷಣೆಗಾಗಿ ಚೈಲ್ಡ್‌ಲೈನ್ ಸಿಬ್ಬಂದಿಗಳ ಮೂಲಕ ಕಲಬುರಗಿ ಸರ್ಕಾರಿ ಬುದ್ಧಿಮಾಂದ್ಯ ಬಾಲಕಿಯರ ಬಾಲಮಂದಿರದಲ್ಲಿ ದಾಖಲಿಸಲಾಗಿದೆ ಎಂದು ಕಲಬುರಗಿ ಸರ್ಕಾರಿ ಬುದ್ಧಿಮಾಂಧ್ಯ ಬಾಲಕಿಯರ ಬಾಲಮಂದಿರದ ಅಧೀಕ್ಷಕರು ತಿಳಿಸಿದ್ದಾರೆ.

ಈ ಬುದ್ಧಿಮಾಂದ್ಯ ಬಾಲಕಿಯರ ಹೆಸರನ್ನು ಸಂಸ್ಥೆಯಲ್ಲಿ ಅಪೂರ್ವ ಎಂದು ಇಡಲಾಗಿದ್ದು, ಈಗ ಸಧ್ಯದ ಬಾಲಕಿಯ ವಯಸ್ಸು 16 ವರ್ಷ ಇದ್ದು, ಬಿಳಿ ಬಣ್ಣ ಹೊಂದಿದ್ದು, ಈಕೆಗೆ ಮಾತು ಬರುವುದಿಲ್ಲ. ಸಂಬಂಧಪಟ್ಟ ಪಾಲಕರು ಮತ್ತು ಪೋಷಕರು ಪ್ರಕಟಣೆಯಾದ 60 ದಿನದೊಳಗೆ ಅಗತ್ಯ ದಾಖಲೆಗಳಾದ (ರೇಷನ್ ಕಾರ್ಡ್, ಗುರುತಿನ ಚೀಟಿ, ಆಧಾರ ಕಾರ್ಡ್ ಹಾಗೂ ಇನ್ನಿತರ ಗುರುತಿನ ಚೀಟಿಯೊಂದಿಗೆ) ಆಳಂದ ರಸ್ತೆಯಲ್ಲಿರುವ ಆಳಂದ ಕಾಲೋನಿಯ ಸರ್ಕಾರಿ ಬುದ್ದಿಮಾಂದ್ಯ ಬಾಲಕಿಯರ (ಹೊಸಕಟ್ಟಡ) ಬಾಲಮಂದಿರಕ್ಕೆ ಭೇಟಿ ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಆಳಂದ ರಸ್ತೆಯಲ್ಲಿರುವ ಆಳಂದ ಕಾಲೋನಿಯ ಸರ್ಕಾರಿ ಬುದ್ದಿಮಾಂದ್ಯ ಬಾಲಕಿಯರ ಬಾಲಮಂದಿರದ ಅಧೀಕ್ಷಕರನ್ನು ಹಾಗೂ ದೂರವಾಣಿ ಸಂಖ್ಯೆ 08472-230053 ಹಾಗೂ ಮೊಬೈಲ್ ಸಂಖ್ಯೆ 8747800980ಗೆ ಸಂಪರ್ಕಿಸಲು ಕೋರಿದೆ.

## ಪಿ. ಎಸ್. ಐ. ಅಂಬರೀಶ ವಾಗ್ಮೋಡೆ ಅವರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲವಾಗುವಂತ ಪುಸ್ತಕ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಫೆ 21.ನಗರ ಪೊಲೀಸ್ ಠಾಣೆಯ ಪಿಎಸ್ಐ ಅಂಬರೀಷ್ ವಾಗ್ಮೋಡೆ ರವರು ಶುಕ್ರವಾರದಂದು ಪ್ರತಾಪೂರ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ಗ್ರಂಥಾಲಯಕ್ಕೆ ಭೇಟಿ ನೀಡಿ ಅತ್ಯಮೂಲ್ಯ ಐಎಎಸ್, ಐಪಿಎಸ್, ಕೆಎಎಸ್, ಪಿಎಸ್ಐ ಹಾಗೂ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಪಯುಕ್ತವಾಗುವ ಪುಸ್ತಕಗಳನ್ನು ದೇಣಿಗೆಯಾಗಿ ನೀಡಿದರು. ಈ ಸಂದರ್ಭದಲ್ಲಿ ಪಿಎಸ್ಐ ಅಂಬರೀಷ್ ವಾಗ್ಮೋಡೆ ಮಾತನಾಡಿ ಪ್ರತಾಪೂರ ಗ್ರಾಮದಲ್ಲಿ ಅಂಬೇಡ್ಕರ್ ರವರ ಹೆಸರಿನ ಮೇಲೆ ಗ್ರಂಥಾಲಯ ನಿರ್ಮಾಣ ಮಾಡಿರುವುದು ಶ್ಲಾಘನೀಯ ಕಾರ್ಯವಾಗಿದೆ, ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯಾರ್ಥಿಗಳು ಇಂತಹ ಗ್ರಂಥಾಲಯಗಳ ಸದುಪಯೋಗಪಡೆದುಕೊಳ್ಳಬೇಕು ಎಂದು ಹೇಳಿದರು. ಈ ವೇಳೆ ಮಾನವ ಬಂಧುತ್ವ ವೇದಿಕೆ ತಾಲೂಕಾ ಸಂಚಾಲಕ ಪಿಂಟು ಕಾಂಬಳೆ, ಕ್ರೈಂ ಪಿಸಿಗಳಾದ ಗೌಸ್ ಪಟೇಲ್, ವಿನೋದ ಕಾಂಬಳೆ, ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷರಾದ ನಾಗೇಶ ಕಾಂಬಳೆ, ಮನೋಹರ ಕಾಂಬಳೆ, ಭಾವುರಾವ ಕಾಂಬಳೆ, ದತ್ತಾತ್ರೇಯ ಸೂರ್ಯವಂಶಿ, ಗ್ರಾಮ ಪಂಚಾಯತ ಸದಸ್ಯರುಗಳಾದ ಖುರ್ಷಿದ್ ಅಹ್ಮದ್, ಇಸ್ಮಾಯಿಲ್ ಬಡಾಯಿ, ರವಿ ಜಾಧವ್, ರಾಜೇಶ್ ಮೇತ್ರೆ, ರಮೇಶ ಕಾಂಬಳೆ, ವಿಲಾಸ ಗಾಯಕವಾಡ, ರವಿ ಕಾಂಬಳೆ, ವಿಜಯಕುಮಾರ ಗಾಯಕವಾಡ, ಗೋವಿಂದ ಕಾಂಬಳೆ, ವಾಮನ ಗಾಯಕವಾಡ, ಗೋವಿಂದ ಮೂಳೆ, ಮಾರುತಿ ಪಾಪಾಲಾಲ್, ಜೈಹಿಂದ್ ಕಾಂಬಳೆ, ವಿಶಾಲ ಕಾಂಬಳೆ, ಪ್ರಶಾಂತ ಗಾಯಕವಾಡ, ಅವಿನಾಶ್ ಗಾಯಕವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಮದನೂರ ಗ್ರಾಮದಲ್ಲಿ ರಸ್ತೆ, ಚರಂಡಿ ನಿರ್ಮಾಣಕ್ಕಾಗಿ

## ಗುರುನಾಥ ವಡ್ಡೆಯವರಿಂದ ಹೈಕೋರ್ಟ್‌ನಲ್ಲಿ ಅರ್ಜಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಮದನೂರ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಕಾಲೋನಿಗಳಲ್ಲಿ ಸಿ.ಸಿ. ರಸ್ತೆ ಹಾಗೂ ಚರಂಡಿ ನಿರ್ಮಾಣ ಮಾಡುವುದಕ್ಕಾಗಿ ಸಮಾಜ ಸೇವಕ ಗುರುನಾಥ ವಡ್ಡೆಯವರು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ, ಬೆಂಗಳೂರಿನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಿದ್ದಾರೆ.

ಮದನೂರ ಗ್ರಾಮದ ಪರಿಶಿಷ್ಟರ ಓಣಿಗಳಲ್ಲಿ ಸಮರ್ಪಕವಾಗಿ ಸಿ.ಸಿ. ರಸ್ತೆಗಳು ಇರುವುದಿಲ್ಲ ಹಾಗೂ ಚರಂಡಿ ರಸ್ತೆಗಳು ಇರುವುದಿಲ್ಲ. ಇದರಿಂದ ಇಲ್ಲಿನ ನಿವಾಸಿಗಳಿಗೆ ಮಳೆಗಾಲದಲ್ಲಿ ತಿರುಗಾಡಲು ಕಷ್ಟವಾಗುತ್ತಿದೆ. ಆದ್ದರಿಂದ

ಬಹಳ ಕಷ್ಟವಾಗುತ್ತಿದೆ. ಈ ಬಗ್ಗೆ ಗುರುನಾಥ ವಡ್ಡೆಯವರಿಂದ ದಿ.18-12-2024 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಈ ಬಗ್ಗೆ ದಿ. 21-11-2024 ರಂದು ಮುಖ್ಯಮಂತ್ರಿಗಳ ಕಚೇರಿಯಿಂದ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ಪತ್ರ ಬರೆಯಲಾಗಿದೆ. ಆದರೂ ಮದನೂರ ಗ್ರಾಮದ ಜನರಿಗೆ ರಸ್ತೆ ಹಾಗೂ ಚರಂಡಿ ಕಾಮಗಾರಿ ಪ್ರಾರ0ಭ'

ವಡ್ಡೆಯವರು ದಿನಾಂಕ: 17-02-2025 ರಂದು ಮದನೂರ ಗ್ರಾಮದಲ್ಲಿನ ಪರಿಶಿಷ್ಟರ ಕಾಲೋನಿಗಳಲ್ಲಿ ಸಿ.ಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಮಾಡುವ ಬಗ್ಗೆ ನಿರ್ದೇಶನ ಕೋರಿ. ಹೈಕೋರ್ಟ್ ಬೆಂಗಳೂರಿನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಕರಣದಲ್ಲಿ ಪ್ರತಿವಾದಿಯಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ. ಕಾರ್ಯದರ್ಶಿಗಳು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಕಲಬುರಗಿ ಹಾಗೂ ಜಿಲ್ಲಾಧಿಕಾರಿಗಳು ಬೀದರ ಇವರು ಇರುತ್ತಾರೆ.

## ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಕಲಬುರಗಿ,ಫೆ.21.-ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಫೆಬ್ರವರಿ 23 ರಂದು ಭಾನುವಾರ ಬೆಳಿಗ್ಗೆ 10.35 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಕಲಬುರಗಿಯಿಂದ ರಸ್ತೆ ಮೂಲಕ ಬೀದರ ಜಿಲ್ಲೆಯ ಬಸವಕಲ್ಯಾಣಕ್ಕೆ ಪ್ರಯಾಣಿಸುವರು.

## ಮೃತಪಟ್ಟ ವಯೋವೃದ್ಧೆಯ ಸಂಬಂಧಿಕರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.21-ದಿನಾಂಕ: 12-02-2025 ರಂದು ಬೆಳಗಿನ 5.30 ರಿಂದ 6.30ರ ಅವಧಿಯಲ್ಲಿ ಫರಹತಾಬಾದ ಬೈಪಾಸ್ ಹತ್ತಿರ ಇರುವ ಧಾಬಾ ಹತ್ತಿರದಲ್ಲಿ ಕಲಬುರಗಿಯಿಂದ ಜೇವರ್ಗಿ ಕಡೆಗೆ ಹೋಗುವ ಯಾರೋ ಒಬ್ಬ ವಾಹನ ಚಾಲಕನು ಅತೀ ವೇಗ ಹಾಗೂ ಆಲಕ್ಷ್ಯತನದಿಂದ ವಾಹನ ಚಲಾಯಿಸಿ ಸುಮಾರು 50 ರಿಂದ 60 ವರ್ಷದ ವಯೋವೃದ್ಧೆಗೆ ಡಿಕ್ಕಿ ಹೊಡೆದು ವಾಹನ ಸಮೇತ ಓಡಿ ಹೋಗಿರುತ್ತಾರೆ. ಅಪಘಾತದಿಂದ ಗಾಯಗೊಂಡು ಈ ವಯೋವೃದ್ಧೆಯು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ ಎಂದು ಕಲಬುರಗಿ ನಗರ ಸಂಚಾರ ಪೊಲೀಸ್ ಠಾಣೆ-01ರ ಆರಕ್ಷಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ. ಈ ವಯೋವೃದ್ಧೆಯು 5.1 ಅಡಿ ಎತ್ತರ ಇದ್ದು, ಕಪ್ಪು ಮಿಶ್ರಿತ ಬಿಳಿ ಕೂದಲು, ಸಾದಾ ಕಪ್ಪು ಬಣ್ಣ, ಚಪ್ಪಟೆ ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಹಸಿರು ಬಣ್ಣದ ಕುಪ್ಪಸ ಮತ್ತು ಜಾಮೂನು (ಪರ್ಪಲ್) ಬಣ್ಣದ ಸೀರೆ ಧರಿಸಿರುತ್ತಾರೆ.

ಈ ವಯೋವೃದ್ಧೆಯ ವಾರಸುದಾರರು ಇದ್ದಲ್ಲಿ ಸಂಚಾರಿ ಪೊಲೀಸ್ ಠಾಣೆ-1 ಕಲಬುರಗಿ ನಗರ ಅಥವಾ ಪೊಲೀಸ್ ನಗರ ನಿಯಂತ್ರಣ ಕೋಣೆಗೆ ತಿಳಿಸಬೇಕು. ಇದಲ್ಲದೇ ದೂರವಾಣಿ ಸಂಖ್ಯೆ 08472-263625, 9480805530 ಹಾಗೂ ನಿಯಂತ್ರಣ ಕೋಣೆ ಸಂಖ್ಯೆ 08472-228113, 228112 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಆಳಂದ ತಾಲೂಕುದಾದ್ಯಂತ ಮದ್ಯಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.21.ಫೆ.26 ರಂದು ರಂದು ಮಹಾಶಿವರಾತ್ರಿ ನಿಮಿತ್ತ ಸಿದ್ಧಲಿಂಗಸ್ವಾಮಿ ಕರುಣೇಶ್ವರ ಮಠ ಆಂದೋಲಾ ಇವರು ಆಳಂದ ಪಟ್ಟಣದ ಲಾಡ್ಲೆ ಮಶಾಕ ದರ್ಗಾದ ಆವರಣದಲ್ಲಿರುವ ಶ್ರೀ ರಾಘವ ಚೈತನ್ಯ ಶಿವಲಿಂಗಕ್ಕೆ ಮಹಾಪೂಜೆಗೆ ಅನುಮತಿ ಕೋರಿ ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ಈ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಅನುಕೂಲವಾಗುವಂತೆ ಫೆಬ್ರವರಿ 25ರ ರಾತ್ರಿ 11 ಗಂಟೆಯಿಂದ ಫೆಬ್ರವರಿ 27ರ ಬೆಳಗಿನ 6 ಗಂಟೆಯವರೆಗೆ ಆಳಂದ ತಾಲೂಕಿದಾದ್ಯಂತ ಎಲ್ಲಾ ತರಹದ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ, ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಆದೇಶ ಹೊಡಿಸಿದ್ದಾರೆ.

ಈ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮುಡಾ ಪ್ರಕರಣ ರಾಜಕೀಯ ಪ್ರೇರಿತ, ಸಿದ್ದರಾಮಯ್ಯನವರ ವಿರುದ್ಧ ಷಡ್ಯಂತ್ರ ನಡೆಸಲಾಗಿತ್ತು : ಡಿಕೆಶಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.20-ಮುಡಾ ಪ್ರಕರಣ ರಾಜಕೀಯ ಪ್ರೇರಿತ. ಆಸ್ತಿಗೆ ಪ್ರತಿಯಾಗಿ ಪರಿಹಾರ ಕೇಳಿದ್ದನ್ನು ಅಪರಾಧ ಎಂಬಂತೆ ಬಿಂಬಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ನಡೆಸಲಾಯಿತು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಾಯುಕ್ತ ಪ್ರಕರಣದಲ್ಲಿ ಬಿಜೆಪಿ ದೆಹಲಿಯಿಂದ ವಕೀಲರನ್ನು ಕರೆಸಿ ವಾದ ಮಂಡಿಸಿದ್ದು ನಮಗೆ ಗೊತ್ತಿದೆ. ಇದರ ಹಿಂದೆ ಯಾವ ರೀತಿಯ ರಾಜಕೀಯ ಇದೆ ಎಂದು ನಮಗೆಲ್ಲಾ ಅರ್ಥವಾಗಿದೆ ಎಂದರು.

ಲೋಕಾಯುಕ್ತ ತನಿಖೆ ಮುಖ್ಯಮಂತ್ರಿ ಅಥವಾ ಇನ್ಯಾರದೋ ಅಣತಿಯಂತೆ ನಡೆದಿಲ್ಲ. ನ್ಯಾಯಾಲಯದ ಉಸ್ತುವಾರಿಯಲ್ಲಿ ವಿಚಾರಣೆ-ಯಾಗಿದೆ. ಮೇಲಾಗಿ ಲೋಕಾಯುಕ್ತ ಚುನಾವಣಾ ಆಯೋಗದಂತೆ ಸಂಪೂರ್ಣ ಸ್ವಾಯತ್ತ ಸಂಸ್ಥೆ. ಅಲ್ಲಿ ಮುಖ್ಯಮಂತ್ರಿಯವರ ಹಸ್ತಕ್ಷೇಪ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಡಾ ಪ್ರಕರಣ ಕುರಿತು ತಾವು ಆರಂಭದಲ್ಲೇ ಹೇಳಿಕೆ ನೀಡಿದ್ದು, ಇದರಲ್ಲಿ ಯಾವುದೇ ಸಾಕ್ಷ್ಯಗಳಿಲ್ಲ. ಮುಖ್ಯಮಂತ್ರಿಯವರು ಸಹಿ ಮಾಡಿರುವ ಯಾವುದೇ ಕಾಗದಪತ್ರಗಳಿಲ್ಲ ಎಂದು ದಿಢೀರ್ ಬಿಜೆಪಿಯ ಪಾದಯಾತ್ರೆಯ ವೇಳೆ ನಾನು ಹೇಳಿಕೆ ನೀಡಿದ್ದೆ. ಮುಡಾ ಪ್ರಕರಣ ಬಿಜೆಪಿ ಹಾಗೂ ಜೆಡಿಎಸ್ ಕುತಂತ್ರ. ಇದು ಹೆಚ್ಚಿನ ದಿನ ನಡೆಯುವುದಿಲ್ಲ ಎಂದು ತಿಳಿಸಿದರು.

ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಸಂಸ್ಥೆ ಬಿ ರಿಪೋರ್ಟ್ ಸಲ್ಲಿಕೆ ಮಾಡಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡಿದೆ ಎಂದು ಕೇಳಿದಾಗ, ಈ ಪ್ರಕರಣದ ಪ್ರಾರಂಭದಲ್ಲೇ ನಾನು ಹೇಳಿದ್ದೆ. ಬಿಜೆಪಿ ಹಾಗೂ ಜೆಡಿಎಸ್‌ನವರು ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಮಾಡಿದಾಗಲೇ, ನಾನು ಏನು ಹೇಳಬೇಕೋ ಹೇಳಿದ್ದೆ. ಇದು ರಾಜಕೀಯ ಪ್ರೇರಿತ ಆರೋಪ, ಯಾವ ದಾಖಲೆಯಲ್ಲೂ ಸಿದ್ದರಾಮಯ್ಯ ಅವರ ಸಹಿ ಇಲ್ಲದಿರುವಾಗ, ಸಂಬಂಧವೇ ಇಲ್ಲದಿರುವಾಗ ಅವರ ಪಾತ್ರ ಹೇಗೆ ಬರುತ್ತದೆ. ಆಸ್ತಿ ಕಳೆದುಕೊಂಡವರು ಪರಿಹಾರ ಕೇಳುವುದು ಸಹಜ.

ನಾವು ನೀವು ಕೂಡ ಕೇಳುತ್ತೇವೆ. ಅವರು ಕೊಟ್ಟಿದ್ದಾರೆ. ನಮಗೆ ಇಂತಹುದೇ ಜಾಗದಲ್ಲಿ ನಿವೇಶನ ನೀಡಿ ಎಂದು ಅವರು ಎಲ್ಲಿಯೂ ಕೇಳಿಲ್ಲ. ಆದರೂ ಅನಗತ್ಯ ಗೊಂದಲ ಬೇಡ ಎಂದು ಅವರು ಈ ನಿವೇಶನಗಳನ್ನು ವಾಪಸ್ ನೀಡಿದ್ದಾರೆ. ಯಾವುದೇ ಪ್ರಕರಣ ದಾಖಲಿಸುವಾಗ ಅದಕ್ಕೆ ಪೂರಕವಾದ ದಾಖಲೆ ಬೇಕು. ಲೋಕಾಯುಕ್ತ ಸಂಸ್ಥೆ ತನ್ನ ಕರ್ತವ್ಯ ಮಾಡಿದೆ. ಬಿಜೆಪಿಯವರು ತಮ್ಮ ಹೋರಾಟ ಮಾಡಿಕೊಳ್ಳಲಿ. ದೆಹಲಿಯಿಂದ ವಕೀಲರನ್ನು ಕರೆಸಿ ವಾದ ಮಂಡಿಸಲು ನಮಗೆ ಗೊತ್ತಿಲ್ಲವೇ? ಇದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕುತಂತ್ರ. ಇದು ಹೆಚ್ಚು ದಿನ ನಡೆಯುವುದಿಲ್ಲ ಎಂದರು.

ಲೋಕಾಯುಕ್ತ ಸಂಸ್ಥೆ ಸರ್ಕಾರದ ತಾಳಕ್ಕೆ ಕುಣಿದಿದೆ ಎಂಬ ಬಿಜೆಪಿ ಆರೋಪದ ಬಗ್ಗೆ ಕೇಳಿದಾಗ, ಸುಪ್ರೀಂ ಕೋರ್ಟ್ ತೀರ್ಪು ಏನಿದೆ ಗೊತ್ತಿದೆಯೇ? ಸ್ಥಳೀಯ ಮಟ್ಟದ ಯಾವುದೇ ಸಂಸ್ಥೆಗಳನ್ನು ದುರ್ಬಲಗೊಳಿಸಬಾರದು ಎಂಬ ನಿರ್ದೇಶನವಿದೆ. ಇನ್ನು ಹೈಕೋರ್ಟ್ ಕೂಡ ಲೋಕಾಯುಕ್ತ ಸ್ವಾಯತ್ತ ಸಂಸ್ಥೆ ಎಂದು ಹೇಳಿದೆ.

ಅವರವರು ಅವರ ಕೆಲಸ ಮಾಡುತ್ತಿದ್ದಾರೆ. ಯಾರೇ ಸಿಎಂ ಆಗಿರಲಿ, ಬೊಮ್ಮಾಯಿ ಸಿಎಂ ಆಗಿರಲಿ, ಮುಖ್ಯಮಂತ್ರಿ ಹೇಳಿದಂತೆ ಲೋಕಾಯುಕ್ತ ಪೊಲೀಸರು ಕೇಳುತ್ತಾರಾ? ಇಲ್ಲಿ ಮುಖ್ಯಮಂತ್ರಿ ಹಸ್ತಕ್ಷೇಪವಿಲ್ಲ. ಇಲ್ಲಿ ಯಾವುದೇ ಅಧಿಕಾರಿ ನೇಮಿಸಬೇಕಾದರೂ ಲೋಕಾಯುಕ್ತರ ಅನುಮತಿ ಮೇರೆಗೆ ಕೆಲಸ ಮಾಡಲಾಗುವುದು.

ಇಲ್ಲಿ ಕರ್ನಾಟಕದ ಅಧಿಕಾರಿಗಳನ್ನು ಆಯ್ಕೆ ಮಾಡಲಾಗುವುದೇ ಹೊರತು, ಹೊರರಾಜ್ಯದವರನ್ನು ಆಯ್ಕೆ ಮಾಡಲು ಬರುವುದಿಲ್ಲ ಎಂದು ತಿಳಿಸಿದರು. ಸರ್ಕಾರದ ಬೊಕ್ಕಸದಲ್ಲಿ ಹಣವಿಲ್ಲ ಎಂಬ ವಿಜಯೇಂದ್ರ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಅವರಿಗೆ ಬೇರೆ ಸಮಯದಲ್ಲಿ ಉತ್ತರ ನೀಡುತ್ತೇನೆ ಎಂದರು.

# ನಡುಗಡ್ಡೆ ಸಂತ್ರಸ್ಥರ ಸ್ಥಳಾಂತರಕ್ಕೆ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ:ತಾಲೂಕಿನ ನಡುಗಡೆ ಸಂತ್ರಸ್ಥರಿಗೆ ವಸತಿ ಸೌಲಭ್ಯ ಜೊತೆ ಶಾಶ್ವತ ಸ್ಥಳಾಂತರಕ್ಕೆ ಒತ್ತಾಯಸಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಹನುಮಂತಪ್ಪ ವೆಂಕಟಾಪುರ ಹೇಳಿದರು.

ಅವರು ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲೂಕಿನ ಯರಗೋಡಿ ಗ್ರಾಮದ ಮಾದರಗಡ್ಡಿ, ಕಡದರಗಡ್ಡಿ, ವೆಂಕಮ್ಮನಗಡ್ಡಿ ಹಾಗೂ ಕರಕಲಗಡ್ಡಿ ನಡುಗಡೆ ಪ್ರದೇಶದಲ್ಲಿ ವಾಸಿಸುತ್ತಿರುವರ ಸುಮಾರು 25 ಕುಟುಂಬದವರನ್ನು ಶಾಶ್ವತವಾಗಿ ಸ್ಥಳಾಂತರಿಸಲು ಜಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದು,

ಲಿಂಗಸುಗೂರ ತಾಲೂಕಿನ ಗುರುಗುಂಟಾ ಹೋಬಳಿಯ ನಡುಗಡ್ಡೆ ಗ್ರಾಮಗಳು ಸರ್ವೆ ನಂ19ರಲ್ಲಿ ಸರಕಾರಿ ಜಮೀನು ಕಂದಾಯ ಇಲಾಖೆಗೆ ಸೇರಿದ ಸುಮಾರು 25 ಎಕರೆ 10 ಗುಂಟೆ ಜಮೀನು ಇದ್ದು ಅದನ್ನು ಅನಧಿಕೃತವಾಗಿ ಒಬ್ಬ ವ್ಯಕ್ತಿ ಸಾಗುವಳಿ ಮಾಡುತ್ತಿದ್ದು, ಅದೆ ಸರ್ವೆ ನಂ 19ರಲ್ಲಿ ಒಂದು ಮೂಲೆಯಲ್ಲಿ 20 ಗುಂಟೆ ಜಾಗದಲ್ಲಿ ಈಗಾಗಲೆ ಕದರಗಡ್ಡಿ 5 ಜನ ಮಾದರಗಡ್ಡಿಯ 6ಜನ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಿ ತಾಲೂಕು ಆಡಳಿತ ತ ತನ್ನ ತನ್ನ ಜವ ಜವಾಬ್ದಾರಿಯನ್ನು ಕಳೆದುಕೊಂಡಿದೆ. ಆದರೆ, ಈಗಾಗಲೆ ಪತ್ರನೀಡಿದ ಜಾಗವನ್ನು ಪರಿಶೀಲಿಸಿ ಅದು ಸಂಪೂರ್ಣ ಕಲ್ಲುಗಳಿಂದ ಕೂಡಿದೆ.

ಫಲಾನುಭವಿಗಳು ಈ ಜಾಗದಲ್ಲಿ ಮನೆ ನಿರ್ಮಿಸಿಕೊಳ್ಳಲು ಹಿಂದೇಟು ಹಾಕಿದ್ದು, ಒಟ್ಟು 25 ದಲಿತ ಸಂತ್ರಸ್ಥ ಕುಟುಂಬಗಳಲ್ಲಿ ತಾಲೂಕು ಆಡಳಿತ ಕೇವಲ 11 ಕುಂಟುಂಬಗಳಿಗೆ ಮಾತ್ರ ಹಕ್ಕು ಪತ್ರ ನೀಡಿದ್ದು, ಇನ್ನೂಳಿದ ಕುಟುಂಬಳಿಗೆ ಆಯ್ಕೆಪಟ್ಟಿಯಿಂದ ಕೈ ಬಿಟ್ಟಿದ್ದಾರೆ ಉಳಿದ ಸಂತ್ರಸ್ಥ ಕುಟುಂಬಗಳಿಗೆ ಹಕ್ಕು ಪತ್ರ ನೀಡಬೇಕು. ಸರ್ವೆ ನಂ 19ರಲ್ಲಿ ದೌರ್ಜನ್ಯವಾಗಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ವ್ಯಕ್ತಿಯಿಂದ ಸರಕಾರಿ ಜಮೀನು ವಶಕ್ಕೆ ಪಡೆಯದೆ ಅಧಿಕಾರಿಗಳು ಅವರೊಂದಿಗೆ ಶಾಮಿಲಾಗಿದ್ದಾರೆ ಎಂದು ಆರೊಪಿಸಿದ್ದಾರೆ.

ಹಕ್ಕೊತ್ತಾಯಗಳು ನಡುಗಡ್ಡೆ ಸಂತ್ರಸ್ಥರು ಹೊಂದಿರುವ ಪಿತ್ರಾಜಿತ 66 ಎಕರೆ ಜಮೀನಿನನ್ನು ಸರಕಾರ ಖರೀದಿ ಮಾಡಬೇಕು ಅಥವಾ ಅವರಿಗೆ ಅದಕ್ಕೆ ಪರ್ಯಾಯವಾಗಿ ಗುಣಮಟ್ಟದ ಸರಕಾರಿ ಭೂಮಿಯನ್ನು ನೀಡಬೇಕು. ಸಹಾಯಕ ಆಯುಕ್ತರು, ತಹಶಿಲ್ದಾರು ಸಂತ್ರಸ್ಥರು ಹಾಗೂ ದಲಿತ ಸಂಘಟನೆ ಜೊತೆ ಸಭೆ ಕರೆಯಬೇಕು. ಇಲ್ಲವಾದಲ್ಲಿ ಹೋರಾಟ ಮಾಡಲಾಗುತ್ತದೆ ಎಂದು ಆಗ್ರಹಿಸಿರುವರು.

ದಸಂಸ ತಾಲೂಕು ಅಧ್ಯಕ್ಷ ಶರಣಪ್ಪ ಕಟ್ಟಿಮನಿ, ಅಜಪ್ಪ ಕರಡಕಲ್, ಶರಣಪ್ಪ ಬಂಕದಮನಿ, ಲಕ್ಕಪ್ಪ ನಾಗರಾಳ, ಇದ್ದರು.

## ವಾತ್ಸಲ್ಯ ಮನೆ ಹಸ್ತಾಂತರ ಮಾಡಿದರು. ಮಲ್ಲಶೆಟ್ಟಿ ಚಿದ್ರೆ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ತಾಲೂಕಿನ ಲಾಧಾ ದಲ್ಲಿ ನಿರ್ಗತಿಕ ಮಹಿಳೆಯ ಪಾರಮ್ಮ ಅವರಿಗೆ ತಹಸೀಲ್ದಾರ್ ಮಲ್ಲಶೆಟ್ಟಿ ಚಿದ್ರೆ ವಾತ್ಸಲ್ಯ ಮನೆ ಹಸ್ತಾಂತರ ಮಾಡಿದರು. ಯೋಜನಾಧಿಕಾರಿ ರಾಘವೇಂದ್ರಗೌಡಾ, ಧನರಾಜ್ ಮುಸ್ತಾಪೂರೆ, ಪ್ರದೀಪ್ ಮಿಠಾರೆ, ಬೀರಪ್ಪ, ಸಂಗೀತಾ, ಪಾರ್ವತಿ, ಕಾವೇರಿ ಇತರರಿದ್ದರು.

ಧರ್ಮಸ್ಥಳದ ಧರ್ಮಾಧಿಕಾರಿ ವಿರೇಂದ್ರಹೆಗ್ಗಡೆ ಹಾಗೂ ಮಾತೃಶ್ರೀ ಅಮ್ಮನವರ ಆಸೆಯಂತೆ ಆಸರೆ ಇಲ್ಲದ ಅಜ್ಜಿಗೆ ಒಂದು ಸೂರು ನೀಡಿ ಅಜ್ಜಿಯ ಕೊನೆಯ ಜೀವನವು ನೆಮ್ಮದಿಯಾಗಿ ಬದುಕಲು ನೆರವಾದ ಎಸ್ ಕೆ ಡಿ ಆರ್ ಡಪಿ ಯೋಜನೆ ಕೆಲಸ ಅಮೋಘವಾಗಿದೆ ಎಂದು ತಹಸೀಲ್ದಾರ್ ಮಲ್ಲಶೆಟ್ಟಿ ಚಿದ್ರೆ ನುಡಿದರು. ತಾಲೂಕಿನ ಲಾಧಾ ದಲ್ಲಿ ನಿರ್ಗತಿಕ ಮಹಿಳೆಯ ಪಾರಮ್ಮ ಅವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಮನೆ ಹಸ್ತಾಂತರ ಮಾಡಿ ಮಾತನಾಡಿದ ಅವರು,

ವಾತ್ಸಲ್ಯ ಮನೆ ನಿರಾಶ್ರೀತರ ಬಾಳಲ್ಲಿ ನೆರಳಾಗಿರಲಿ, ಅಕ್ಕ ಪಕ್ಕ ಕುಟುಂಬದವರು ಇಂತಹ ಜನರು ಪ್ರೀತಿ ವಾತ್ಸಲ್ಯದಿಂದ ನೋಡಿಕೊಳ್ಳಬೇಕು ಎಂದರು.

ಮುಖಂಡ ಧನರಾಜ್ ಮುಸ್ತಾಪೂರೆ ಮಾತನಾಡಿ, ಅಸಹಾಯಕ ಕುಟುಂಬಗಳನ್ನು ಗುರ್ತಿಸಿ ಶ್ರೀ ಕ್ಷೇತ್ರದಿಂದ ಜನಪರ ಕಾರ್ಯಗಳನ್ನು ಮಾಡುತ್ತಿದೆ. ಯೋಜನೆಯಿಂದ ವಿವಿಧ ರೀತಿಯ ಸೌಲಭ್ಯಗಳನ್ನು ಅವರ ಮನೆಬಾಗಿಲಿಗೆ ಮುಟ್ಟಿಸುವ ಕಾರ್ಯದಲ್ಲಿ ತೊಡಗಿರುವುದು ಸಂತಸದ ಸಂಗತಿಯಾಗಿದೆ ಎಂದರು.

ತಾಲೂಕು ಕ್ಷೇತ್ರಯೋಜನಾಧಿಕಾರಿ ರಾಘವೇಂದ್ರಗೌಡಾ, ಗ್ರಾಪಂ ಸದಸ್ಯ ಪ್ರದೀಪ ಮಿಠಾರೆ, ಬೀರಪ್ಪ, ಸಂಗೀತಾ, ಪಾರ್ವತಿ, ಕಾವೇರಿ ಇತರರಿದ್ದರು.

## ಶ್ರೀ ಮರಿಗೆಮ್ಮಾ ಹಾಗೂ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವದಲ್ಲಿ ಶಾಸಕ ಪಾಟೀಲ್ ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ತಾಳಮಡಗಿ ಗ್ರಾಮದ ಶ್ರೀ ಮರಿಗೆಮ್ಮಾ ಹಾಗೂ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವದಲ್ಲಿ ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ ರವರು ಪಾಲ್ಗೊಂಡು, ದೇವಿಯ ದರ್ಶನವನ್ನು ಪಡೆದುಕೊಂಡು ಗ್ರಾಮದ ಸರ್ವರ ಬಾಳಲ್ಲಿ ಶಾಂತಿ ಸಮೃದ್ಧಿ ತಾಯಿಯೂ ಕರುಣಿಸಲಿ ಎಂದು ಪ್ರಾರ್ಥಿಸಿ , ಸರ್ವರಿಗೂ ಜಾತ್ರಾ ಮಹೋತ್ಸವದ ಶುಭಾಶಯಗಳು ಕೋರಿದರು. ಗ್ರಾಮದ ಪ್ರಮುಖರಾದ ಮಲ್ಲಿಕಾರ್ಜುನ ಪಾಟೀಲ, ಅನೀಲಕುಮಾರ, ಈಶ್ವರ , ಮಹೇದೇವ ಸ್ವಾಮಿ , ಅನೀಲ ಪಾಟೀಲ , ಶ್ರೀಮಂತ ಪಾಟೀಲ, ಉಮೇಶ ಕುಲಕರ್ಣಿ, ರಾಜಕುಮಾರ ದೆಬ್ಬಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಶಿಕ್ಷಕ ಬಸವರಾಜ್ ಗೌಡರಗೆ 'ಕಾಯಕ ರತ್ನ' ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21– ಜಿಲ್ಲೆಯ ಹುನಗುಂದ ತಾಲೂಕಿನ ಚಿತ್ತವಾಡಗಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಬಸವರಾಜ ಗೌಡರ ಅವರಿಗೆ ಕಾಯಕ ರತ್ನ ಪ್ರಶಸ್ತಿ ನೀಡಲಾಗಿದೆ.

ಇಳಕಲ್ಲ ಕನ್ನಡ ನುಡಿ ಮತ್ತು ಸಾಹಿತ್ಯವೇದಿಕೆ ಹಾಗೂ ಕರ್ನಾಟಕಮತ್ತುನಿಸರ್ಗಸಂಗೀತ ವಿದ್ಯಾಲಯದಕಲಾವಿದರಸಂಘ ಕೊಡಮಾಡುವ ರಾಜ್ಯ ಪ್ರಶಸ್ತಿ ಇದಾಗಿದ್ದು, ಫೆ.22 ರಂದು ಶನಿವಾರ ಕೂಡಲಸಂಗಮದಲ್ಲಿ ನಡೆಯುವ ಸಂಘದ ದ್ವಿತಿಯ ವಾರ್ಷಿಕ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಘದ ಅಧ್ಯಕ್ಷರು ತಿಳಿಸಿದ್ದಾರೆ.

## ಕಾನಿಪ ಮಹಾಸಭೆಯಲ್ಲಿ ಭಾಗವಹಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21–ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2023–24ನೇ ಸಾಲಿನ 91ನೇ ಸರ್ವ ಸದಸ್ಯರ ಮಹಾಸಭೆ ಮಾರ್ಚ 9ರಂದು ಕೊಪ್ಪಳದಲ್ಲಿ ಜರುಗಲಿದ್ದು, ಜಿಲ್ಲೆಯ ಕಾನಿಪ ಸದಸ್ಯರು ಭಾಗಿಯಾಗಬೇಕು ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆನಂದ ಧಲಬಂಜನ ಹಾಗೂ ಪ್ರಧಾನ ಕಾರ್ಯದರ್ಶಿ ಶಂಕರ ಎಸ್. ಕಲ್ಯಾಣಿ ತಿಳಿಸಿದ್ದಾರೆ.

ಮಾ.9 ರಂದು ಭಾನುವಾರ ಬೆಳಗ್ಗೆ 11 ಗಂಟೆಗೆ ಕೊಪ್ಪಳದ ಟೌನ್ ಪಾನಘಂಟಿ ಕಲ್ಯಾಣ ಮಂಟಪ(ಭಾಗ್ಯನಗರ ರಸ್ತೆ, ಕೇಂದ್ರ ಬಸ್ ನಿಲ್ದಾಣದ ಹತ್ತಿರ)ದಲ್ಲಿ ನಡೆಯಲಿದೆ.

ಸರ್ವಸದಸ್ಯರಮಹಾಸಭೆಯಲ್ಲಿ ಸದಸ್ಯರು ಯಾವುದೇ ವಿಷಯ ಪ್ರಸ್ತಾಪ ಮಾಡಲು ಇಚ್ಛಿಸುವವರು ಫೆ.28ರೊಳಗೆ ನೀವು ಕೇಳುವ ವಿಷಯಗಳನ್ನು ಲಿಖಿತ ರೂಪದಲ್ಲಿ ಕೇಂದ್ರ ಸಂಘಕ್ಕೆ ಕಳಿಸಿಕೊಡಬೇಕು.

ಕೊಪ್ಪಳದಲ್ಲಿ ವಸತಿ ವ್ಯವಸ್ಥೆಗಾಗಿ ಕೊಪ್ಪಳ ಜಿಲ್ಲೆಯ ಜಿಲ್ಲಾಧ್ಯಕ್ಷ ಹನಮಂತ ಹಳ್ಳಿಕೇರಿ(9008067007), ವೈ.ನಾಗರಾಜು(8095402520), ರಾಜ್ಯ ಕಾರ್ಯಕಾರಣಿ ಸಮಿತಿ ಸದಸ್ಯ ಸಾಧಿಕ್ ಹಾಲಿ(9449154028),ರಾಜ್ಯ ಕಾರ್ಯಕಾರಣಿ ಸದಸ್ಯ ಎಚ್.ಎಸ್.ಹರೀಶ್(9900617582) ಇವರನ್ನುಸಂಪರ್ಕಿಸಬಹುದೆಂದು ತಿಳಿಸಿದ್ದಾರೆ.

# ಕಲಿಕಾ ಹಬ್ಬ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕ : ಗುಡೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21–ಕಲಿಕಾ ಹಬ್ಬ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿದೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಕೆ.ಗುಡೂರ ಹೇಳಿದರು. ತಾಲೂಕಿನ ಕಲಾದಗಿ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಕಲಾದಗಿ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಹಾಗೂ ಸಮೂಹ ಸಂಪನ್ಮೂಲ ಕೇಂದ್ರ ಉದ್ಘಾಟಿಸಿ ಮಾತನಾಡಿದರು. ಕಲಿಕಾ ಹಬ್ಬ ಸಂಪೂರ್ಣವಾಗಿ ಮಗುವಿನ ಒಂದು ಕಲಿಕಾ ವಿಧಾನವಾಗಿದೆ. ಕಲಿಕಾ ಹಬ್ಬ ಮಕ್ಕಳು ಸಂಭ್ರಮದಿಂದ ತನ್ನ ಸ್ನೇಹಿತರೊಂದಿಗೆ ಸೇರಿಕೊಂಡು ಒಡನಾಟ ಕಲಿಕೆಯ ಮೂಲ ಪ್ರಶ್ನೆಗಳು, ಪ್ರಯೋಗಗಳು, ವೀಕ್ಷಣೆಗಳು ಹೀಗೆ ಅನುಭವಾತ್ಮಕವಾಗಿ ಮಕ್ಕಳು ಕಲಿಯುತಿದ್ದಾರೆ ಎಂದರು. ಸಮೂಹ ಸಂಪನ್ಮೂಲ ವ್ಯಕ್ತಿ ಮಂಜುನಾಥ ಹೆಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಪಂಚಾಯತಿ ಅಧ್ಯಕ್ಷ ಖಾತುನಬಿ ರೋಣ, ಎಸ್‌ಡಿಎಂಸಿ ಅಧ್ಯಕ್ಷ ಭೀಮಸಿ ಪೂಜಾರಿ, ಎಚ್.ಬಿ.ಹಾಲಿಗೇರಿ, ವೈ.ಎಚ್.ವಗ್ಯಾನವರ, ಶಿಕ್ಷಣ ಸಂಯೋಜಕ ಎಸ್.ಎ.ಹೂಗಾರ, ವಿ.ಎಸ್.ಸಜ್ಜನ, ಸಂಪನ್ಮೂಲ ವ್ಯಕ್ತಿ ಡಿ.ಬಿ.ಗೌಳಿ, ಕಲಾವಿದ ರಜಾಕ ನದಾಫ್, ಶಾಲಾ ಮುಖ್ಯ ಶಿಕ್ಷಕ ಸಿ.ಎಲ್.ಹೂಗಾರ ಹಾಗೂ ಎಸ್‌ಡಿಎಂಸಿ ಸದಸ್ಯರು ಇದ್ದರು.

## ಲಾಲಸಾಬ ನದಾಫ ಅಹಿಂದ ಸಂಚಾಲಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21– ಜಿಲ್ಲೆಯ ಇಳಕಲ್ಲ ನಗರದ ನದಾಫ ಸಮಾಜದ ಲಾಲಸಾಬ ನದಾಫ ಅವರನ್ನು ಅಹಿಂದ ಸಂಚಾಲಕರನ್ನಾಗಿ ನೇಮಕ ಮಾಡಲಾಗಿದೆ.

ಅಹಿಂದ್ ರಾಜ್ಯ ಮುಖ್ಯ ಸಂಚಾಲಕ ಸಿದ್ದಯ್ಯಮೂರ್ತಿ, ಲಾಲಸಾಬ ನದಾಫ ಅವರನ್ನು ನೇಮಕ ಮಾಡಿದ್ದು, ಸನಾಫ–ಪಿಂಜಾರ್ ಸಮಾಜದ ಅಭಿವೃದ್ಧಿಗಾಗಿ ಶ್ರಮವಹಿಸುವುದರ ಜೊತೆಗೆ ಅಹಿಂದ್ ಸಂಚಾಲಕ ಸ್ಥಾನವನ್ನು ಅಧಿಕಾರ ಎಂದು ತಿಳಿಯದೇ ಸಮುದಾಯದ ಸೇವೆ ಎಂದು ಪರಿಗಣಿಸಿ ಕೆಲಸ ಮಾಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

# ಜಿಲ್ಲಾಮಟ್ಟದ ಕ್ರೀಡಾಕೂಟ 25ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 21 : ನೆಹರೂ ಯುವ ಕೇಂದ್ರದ ವತಿಯಿಂದ ನಗರದ ನೌಬಾದನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ಸಂಕೀರ್ಣದಲ್ಲಿ ಫೆ. 25 ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಮಟ್ಟದ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ.

ಕ್ರೀಡಾಕೂಟದಲ್ಲಿ ಯುವಕರ ವಿಭಾಗದಲ್ಲಿ ವಾಲಿಬಾಲ್, ವೇಟ್ ಲಿಫ್ಟಿಂಗ್, ಬ್ಯಾಡ್ಮಿಂಟನ್, ಯುವತಿಯರ ವಿಭಾಗದಲ್ಲಿ ಕೊಕ್ಕೋ, 100 ಮೀಟರ್ ಓಟ ಹಾಗೂ ಸ್ಲೋ ಸೈಕ್ಲಿಂಗ್ ಸ್ಪರ್ಧೆಗಳು ನಡೆಯಲಿವೆ ಎಂದು ನೆಹರೂ ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರಮೆ ತಿಳಿಸಿದ್ದಾರೆ.

ಈಗಾಗಲೇ ಬೀದರ್, ಔರಾದ್, ಚಿಟಗುಪ್ಪ, ಹುಲಸೂರು ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಕೂಟಗಳು ಜರುಗಿವೆ. ಈ ತಾಲ್ಲೂಕುಗಳಲ್ಲಿ ನಡೆದ ಕ್ರೀಡಾಕೂಟದ ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಸ್ಥಾನಗಳಿಸಿದವರು ಜಿಲ್ಲಾಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಜಿಲ್ಲಾಮಟ್ಟದಲ್ಲಿ ವಿಜೇತರಾದವರಿಗೆ ಟ್ರೋಫಿ, ಪ್ರಮಾಣ ಪತ್ರ ವಿತರಿಸಲಾಗುವುದು. ಜತೆಗೆ ಅವರು ರಾಜ್ಯಮಟ್ಟದ ಸ್ಪರ್ಧೆಗೆ ಸಹ ಅರ್ಹತೆ ಗಳಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಸ್ಪರ್ಧಾಳುಗಳು ಆಧಾರ್ ಕಾರ್ಡ್ ನಕಲು ಪ್ರತಿಯೊಂದಿಗೆ ಕ್ರೀಡಾ–ಕೂಟಕ್ಕೆ ಹಾಜರಾಗಬೇಕು. ಕ್ರೀಡಾಕೂಟದ ಕುರಿತ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9004315246,9535230350 ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

# ಐಕ್ಯೂಎಸಿ ಘಟಕದಿಂದ ಉನ್ನತ ಶಿಕ್ಷಣದ ಅಭಿವೃದ್ಧಿ : ಮಹಾದೇವ ಮುರಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21–ಆಧುನಿಕ ಕಾಲಘಟ್ಟದಲ್ಲಿ ಉನ್ನತ ಶಿಕ್ಷಣ ಓದುತ್ತಿರುವ ಯುವ ಸಮೂಹ ಹಾಗೂ ಬೋಧಕರು ತಮ್ಮ ಅಧ್ಯಯನಗಳಲ್ಲಿ ತಂತ್ರಜ್ಞಾನವನ್ನು ಬಳಸಿಕೊಂಡು ಶೈಕ್ಷಣಿಕ ಪ್ರಗತಿ ಸಾಧಿಸಬೇಕು ಎಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವ ಮಹಾದೇವ ಮುರಗಿ ಹೇಳಿದರು. ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ (ಐಕ್ಯೂಎಸಿ) ಆಂತರಿಕ ಗುಣಮಟ್ಟ ಭರವಸೆ ಕೋಶದ ಅಡಿಯಲ್ಲಿ ಶುಕ್ರವಾರ ನಡೆದ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟನೆ ಮಾಡಿ ಅವರು ಮಾತನಾಡಿದರು. ಕಾಲೇಜುಗಳಲ್ಲಿರುವ ಐಕ್ಯೂಎಸಿ ಘಟಕದ ಮೂಲಕ ಉನ್ನತ ಶಿಕ್ಷಣ ಅಭಿವೃದ್ಧಿಯ ಗುರಿ ಮುಟ್ಟಲು ಸಾಧ್ಯವಿದೆ. ಉನ್ನತ ಶಿಕ್ಷಣದಲ್ಲಿ ಬೋಧಕರು ತಮ್ಮ ಬೋಧನೆಯ ಜೊತಗೆ ವಿದ್ಯಾರ್ಥಿಗಳಲ್ಲಿ ಸಂಶೋಧನಾತ್ಮಕ ಮತ್ತು ವಿಮರ್ಶಾತ್ಮಕ ವಿಚಾರಗಳನ್ನು ಬೆಳೆಸಬೇಕು. ಕಾಲೇಜುಗಳಲ್ಲಿ ಪಾರದರ್ಶಕವಾದ ಆಡಳಿತವನ್ನು ನೀಡಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ಕಾಲೇಜಿನ ಅಭಿವೃದ್ಧಿಯಲ್ಲಿ ಬೋಧಕರಷ್ಟೆ ಬೋಧಕೇತರ ಸಿಬ್ಬಂದಿಯವರ ಪ್ರರಿಶ್ರಮ ಮುಖ್ಯವಾಗಿರುತ್ತದೆ ಎಂದರು. ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಾಲೇಜಿನ ಅಭಿವೃದ್ಧಿಗೆ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಪೋಷಕರು ಹಾಗೂ ಹಳೆ ವಿದ್ಯಾರ್ಥಿಗಳು ಪಂಚೇಂದ್ರಿಯಗಳಿದ್ದಂತೆ. ಎಲ್ಲರೂ ತಮ್ಮ ಜವಾಬ್ದಾರಿಗಳನ್ನು ಸರಿಯಾಗಿ ಪಾಲಿಸಿದರೆ ಕಾಲೇಜು ಹಾಗೂ ಉನ್ನತ ಶಿಕ್ಷಣವನ್ನು ಅಭಿವೃದ್ಧಿ ಪಡಿಸಲು ಸಾಧ್ಯವಾಗುತ್ತದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿದ್ದ ಐಕ್ಯೂಎಸಿ ಸಂಚಾಲಕ ಡಾ.ಪ್ರಭುದೇವ ಮಂಡಿ, ಉನ್ನತ ಶಿಕ್ಷಣದಲ್ಲಿ ಐಕ್ಯೂಎಸಿ ಪಾತ್ರ ಎಂಬ ವಿಷಯ ಕುರಿತು ಉಪನ್ಯಾಸ ನೀಡಿ, ಪದವಿ ಕಾಲೇಜಿನಲ್ಲಿ ಕಲಿಯುವ ವಿದ್ಯಾರ್ಥಿಗಳ ಪ್ರಗತಿಗೆ ಪೂರಕವಾದ ಕೌಶಲ್ಯಗಳನ್ನು ಬಳಸಿಕೊಂಡು ಬೋಧಕರು ತಮ್ಮ ಬೋಧನೆಯಲ್ಲಿ ಹೊಸಹೊಸ ಆವಿಷ್ಕಾರಗಳನ್ನು ಅಳವಡಿಸಿಕೊಂಡು ಪರಿಣಾಮಕಾರಿ ಬೋಧನೆ ಮಾಡಿದರೆ ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಪ್ರಾಧ್ಯಾಪಕ ಡಾ.ಜಿ.ಜಿ.ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಯುಜಿಸಿ ರಚಿಸಿರುವ ನೂತನ ಶೈಕ್ಷಣಿಕ ನಿಯಮಾವಳಿಯಲ್ಲಿ ನ್ಯಾಕ್ ಮತ್ತು ಐಕ್ಯೂಎಸಿ ಘಟಕಗಳ ಪಾತ್ರ ಮಹತ್ವದ್ದಾಗಿವೆ. ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶದಿಂದ ವಿದ್ಯಾರ್ಥಿಯ ಕಲಿಕೆ, ಅಭಿವೃದ್ಧಿ ಇವುಗಳ ಸಮನ್ವಯತೆ ಮೂಲಕ ಉನ್ನತ ಶಿಕ್ಷಣವನ್ನು ಅಭಿವೃದ್ಧಿ ಪಡಿಸಬೇಕಾಗುತ್ತದೆ ಎಂದರು.

ವಿಚಾರ ಸಂಕಿರಣದಲ್ಲಿ ವಿವಿಧ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು. ಪ್ರೊ.ಪರಸಪ್ಪ ತಳವಾರ ಪ್ರಾರ್ಥಿಸಿದರು, ಐಕ್ಯೂಎಸಿ ಸಹ ಸಂಚಾಲಕ ಡಾ.ಮೊಬಿನ್ ಬೆಳಗಾಮ್ ಸ್ವಾಗತಿಸಿದರು, ಡಾ.ಸುಮಂಗಲಾ ಮೇಟಿ ವಂದಿಸಿದರು, ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು.

# ಉಚಿತ ಆರೋಗ್ಯ ಯೋಜನೆ: ನೌಕರರಿಗೆ ಅನುಕೂಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 21 : ರಾಜ್ಯ ಸರ್ಕಾರ ಜಾರಿಗೊಳಿಸಲಿರುವ ಉಚಿತ ಆರೋಗ್ಯ ಯೋಜನೆಯಿಂದ ರಾಜ್ಯ ಸರ್ಕಾರಿ ನೌಕರರಿಗೆ ಅನುಕೂಲವಾಗಲಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ, ನಿರ್ದೇಶಕರ ಸಮಾವೇಶಕ್ಕೆ ಚಾಲನೆ ನೀಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯೋಜನೆ ಶೀಘ್ರ ಜಾರಿಗೊಳಿಸುವ ಭರವಸೆ ಕೊಟ್ಟಿರುವುದು ಸಂತಸ ಉಂಟು ಮಾಡಿದೆ ಎಂದು ತಿಳಿಸಿದ್ದಾರೆ.

ಹೊಸ ಪಿಂಚಣಿ ಯೋಜನೆಯನ್ನು ರದ್ದುಪಡಿಸಿ, ಹಳೆ ಪಿಂಚಣಿ ಯೋಜನೆಯನ್ನೇ ಮರು ಜಾರಿಗೊಳಿಸಬೇಕು ಎಂಬುದು ನೌಕರರ ಬಹು ದಿನಗಳ ಬೇಡಿಕೆಯಾಗಿದೆ. ಇದಕ್ಕೂ ಮುಖ್ಯಮಂತ್ರಿ ಸ್ಪಂದಿಸಿದ್ದು, ಹಳೆ ಪಿಂಚಣಿ ಯೋಜನೆ ಮತ್ತೆ ಜಾರಿಗೊಳಿಸುವ ಸ್ಪಷ್ಟ ಸಂದೇಶ ನೀಡಿದ್ದಾರೆ ಎಂದು ಹೇಳಿದ್ದಾರೆ.

ಸಂಘದ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ನೌಕರರ ಬೇಡಿಕೆಗಳನ್ನು ಸಮರ್ಥವಾಗಿ ಮಂಡಿಸಿದ ಸಂಘದ ರಾಜ್ಯ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರಿಗೆ ಕೃತಜ್ಞತೆ ತಿಳಿಸಿದ್ದಾರೆ.

# ದೇಹದಲ್ಲಿ ನೀರಿನ ಪ್ರಮಾಣ ಕಡಿಮೆಯಾಗದಿರಲಿ:ಅಂಗಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21–ಬಿಸಿಲಿನ ತಾಪಮಾನ ಪ್ರಾರಂಭವಾಗಿದ್ದು, ಈ ಘಳಿಗೆಯಲ್ಲಿ ಆರೋಗ್ಯ ರಕ್ಷಣೆ ಮಾಡಿಕೊಳ್ಳುವುದು ಸೂಕ್ತವಾಗಿದೆ. ದೇಹದಲ್ಲಿ ನೀರಿನ ಪ್ರಮಾಣ ಕಡಿಮೆಯಾಗದಂತೆ ನೋಡಿಕೊಳ್ಳಬೇಕು ಎಂದು ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಸ್.ಅಂಗಡಿ ಹೇಳಿದರು.

ತಾಲೂಕಿನ ಗುಂಡನಪಲ್ಲೆ ಗ್ರಾಮದ ದಾಳಮ್ಮದೇವಿ ದೇವಸ್ಥಾನದ ಆವರಣದಲ್ಲಿ ಗುರುವಾರ ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ನಡೆದ 'ಬಿಸಿಲಿನ ತಾಪಮಾನದಿಂದ ಸ್ವಯಂ ಆರೋಗ್ಯ ರಕ್ಷಣಾ ಕ್ರಮಗಳ' ಕುರಿತ ಜನಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮನುಷ್ಯನ ದೇಹದಲ್ಲಿ ಶೇ.70 ರಷ್ಟು ನೀರಿನ ಪ್ರಮಾಣವಿರಬೇಕು. ಈ ಪ್ರಮಾಣ ಕಡಿಮೆಯಾದರೆ ಅನೇಕ ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ. ವಯೋವೃದ್ಧರು, ಮಕ್ಕಳು, ಬಾಣಂತಿಯರು, ಗರ್ಭಿಣಿಯರು ಮನೆಯಲ್ಲೇ ಹೆಚ್ಚು ಕಾಲ ಇರಬೇಕು. ಶುದ್ಧ ನೀರು, ಎಳೆನೀರು, ಕಲ್ಲಂಗಡಿ, ಶರಬತ್ತು, ಓಆರ್‌ಎಸ್ ದ್ರಾವಣ ಸೇವಿಸಬೇಕು. ತೆಳುವಾದ ಹತ್ತಿ ಬಟ್ಟೆಗಳನ್ನು ಧರಿಸಬೇಕು ಎಂದು ಅಂಗಡಿ ತಿಳಿಸಿದರು. ಗ್ರಾಮದ ಹುಸನಪ್ಪ ಮೇಲಿನಮನಿ, ಬಸಪ್ಪ ಮಾದರ, ಬಸಪ್ಪ ಕಮತರ, ತುಳಸಪ್ಪ ಮಾದರ, ಗದಿಗೆಪ್ಪ ಮಾದರ ಶಿವಪ್ಪ ಮಾದರ, ಯುವಕರು, ಅಂಗನವಾಡಿ, ಆಶಾ ಕಾರ್ಯಕರ್ತರು ಇದ್ದರು.

## ಮಕ್ಕಳಲ್ಲಿ ಕಲಿಕಾಸಕ್ತಿ ಬೆಳೆಸುವಲ್ಲಿ ಕಲಿಕಾ ಹಬ್ಬ ಸಹಕಾರಿ:ಬಿಇಓ ಬಡದಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21– ಕಲಿಕೆಯಲ್ಲಿ ಹಿಂದುಳಿದ ಮಕ್ಕಳಲ್ಲಿ ಕಲಿಕಾಸಕ್ತಿ ಬೆಳೆಸಿ ಅವರಲ್ಲಿ ಆತ್ಮವಿಶ್ವಾಸ ಮೂಡಿಸುವಲ್ಲಿ ಕಲಿಕಾ ಹಬ್ಬ ಸಹಕಾರಿಯಾಗಿದೆ ಎಂದು ಬಾಗಲಕೋಟೆ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಹೇಳಿದ್ದಾರೆ.

ತಾಲೂಕಿನ ಚೌಡಾಪೂರ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಜರುಗಿದ ಬೇವೂರು ಕ್ಲಸ್ಟರ್ ಮಟ್ಟದ ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾ ಸಾಮರ್ಥ್ಯ(ಎಫ್.ಎಲ್.ಎನ್) ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಲಿಕೆಯಲ್ಲಿ ಹಿಂದುಳಿದ ಮಕ್ಕಳೂ ಸಹ ಮುಖ್ಯವಾಹಿನಿಗೆ ಬರಲು ಈ ಕಾರ್ಯಕ್ರಮ ಸೂಕ್ತವೇದಿಕೆಯಾಗಿದೆ. ಶಿಕ್ಷಕರು ಇಂತಹ ಮಕ್ಕಳಿಗೆ ಆಕರ್ಷಕ ಚಟುವಟಿಕೆಗಳ ಮೂಲಕ ಬೋಧನೆ ಮಾಡುವುದರಿಂದ ಅವರಲ್ಲಿ ಕಲಿಕೆಯ ಆಸಕ್ತಿ ಹೆಚ್ಚುತ್ತದೆ ಎಂದ ಬಡದಾನಿ, ಇದರಿಂದ ಮಕ್ಕಳಲ್ಲಿನ ಪ್ರತಿಭೆಯೂ ಬೆಳಗುತ್ತದೆ ಎಂದರು.

ಮುಖ್ಯ ಅತಿಥಿಯಾಗಿದ್ದ ಕ್ಷೇತ್ರಸಮನ್ವಯಾಧಿಕಾರಿ ಎಚ್.ಕೆ.ಗುಡೂರ ಮಾತನಾಡಿ, ಮಕ್ಕಳಲ್ಲಿ ಕಲಿಕಾಸಕ್ತಿ ಬೆಳೆಸುವ ಜೊತೆಗೆ ಶಿಕ್ಷಕರೂ ಸಹ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿ ಮಕ್ಕಳಿಗೆ ಒಳ್ಳೆಯ ಸಂಸ್ಕಾರವನ್ನು ಕಲಿಸುವುದು ಮುಖ್ಯವಾಗಿದೆ ಎಂದು ಹೇಳಿದರು.

ಶಾಲೆಯ ಎಸ್.ಡಿಎಂಸಿ ಅಧ್ಯಕ್ಷ ಬೀರಪ್ಪ ಗೆದ್ದಲಮರಿ ಅಧ್ಯಕ್ಷತೆ ವಹಿಸಿದ್ದರು. ಶರಣಪ್ಪ ಬೇವೂರ, ಅಜೀಂ ಪ್ರೇಮ್ ಜಿ ಸಂಸ್ಥೆಯ ಸುರೇಶ ಗೌಡರ ಮಾತನಾಡಿದರು. ಶಿಕ್ಷಣ ಸಂಯೋಜಕರಾದ ಬಸಪ್ಪ ಲಚ್ಯಾಣ, ಎಸ್.ಎಸ್.ಬೆಣ್ಣೂರ, ಪಿ.ಬಿ.ಪಾಟೀಲ, ಸಂಪನ್ಮೂಲ ವ್ಯಕ್ತಿ ಎಚ್.ಎಂ.ಗೂಳಿ, ಮುಖ್ಯಗುರು ಡಿ.ಆರ್.ಗುಡಿಮನಿ ಅತಿಥಿಗಳಾಗಿದ್ದರು.

ಅತಿಥಿ, ಗಣ್ಯರನ್ನು ಅಕ್ಷರ ಪಠದಿಂದ ಶೃಂಗರಿಸಿದ ಎತ್ತಿನ ಚಕ್ಕಡಿಯಲ್ಲಿ ಪೂರ್ಣ ಕುಂಭ, ವಾದ್ಯ ವೈಭವಗಳೊಂದಿಗೆ ಶಾಲೆಗೆ ಕರೆತರಲಾಯಿತು. ವಿವಿಧ ಶಾಲೆಗಳ 80 ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು. ಕೈ ಬರಹದ ಚಟುವಟಿಕೆ, ಗಟ್ಟಿ ಓದು, ಕಥೆ ಕಟ್ಟುವುದು, ರಸಪ್ರಶ್ನೆ, ಜ್ಞಾಪಕ ಶಕ್ತಿ ಚಟುವಟಿಕೆ, ಪೋಷಕರೊಂದಿಗೆ ಮಕ್ಕಳ ಸ್ನೇಹ ಸಂಬಂಧ ಹೀಗೆ ಹಲವಾರು ಕ್ರಿಯಾತ್ಮಕ ಚಟುವಟಿಕೆಗಳನ್ನು ಸಂಪನ್ಮೂಲ ವ್ಯಕ್ತಿಗಳು ನಡೆಸಿಕೊಟ್ಟರು. ಶಿಕ್ಷಕ ಸತೀಶ ವಿ.ಎಸ್. ನಿರೂಪಿಸಿದರು. ಪುಷ್ಪಲತಾ ಪರದೇಶಿ ವಂದಿಸಿದರು.

## ಬಿಜೆಪಿಯಿಂದ ಛತ್ರಪತಿ ಶಿವಾಜಿ ಜಯಂತಿ ಆಚರಣೆ





ನುಡಿ ವಾರ್ತೆ ಮಲ್ಲಮ್ಮ

ಬಾಗಲಕೋಟೆ,ಫೆ.21– ನಗರದ ಶಿವಾನಂದ ಜೀನದ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಕ್ಷ ಬಾಗಲಕೋಟೆ ಮತಕ್ಷೇತ್ರದ ವತಿಯಿಂದ ಹಿಂದೂ ಸಾಮ್ರಾಟ ಛತ್ರಪತಿ ಶಿವಾಜಿ ಮಹಾರಾಜರ 395 ನೇಯ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾರತ ಮಾತೆ ಹಾಗೂ ಛತ್ರಪತಿ ಶಿವಾಜಿ ಅವರ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಿದ ಮುಖಂಡರಾದ ಬಸವರಾಜ ಯಂಕಂಚಿ, ಗುಂಡುರಾವ ಶಿಂಧೆ ಹಾಗೂ ಜಿಲ್ಲಾ ಶಿಕ್ಷಣ ಪ್ರಕೋಷ್ಠಾದ ಸಹಸಂಚಾಲಕ ಅಂಬರೀಶ ಗೊಂದಿ ಮಾತನಾಡಿದರು.

ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಪ್ರಧಾನ ಕಾರ್ಯದರ್ಶಿ ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಸಭಾಪತಿ ಯಲ್ಲಪ್ಪ ನಾರಾಯಣಿ, ಬಸವರಾಜ ಅವರಾದಿ, ಸಮಾಜದ ಹಿರಿಯರಾದ ಎಮ್.ಆರ್.ಶಿಂಧೆ, ರಾಜು ವಾಘ, ತಾನಾಜಿ ಜಮಖಂಡಿ, ಸುಜಾತಾ ಶಿಂಧೆ, ಡಾ. ಎಮ್.ಎಸ್.ದಡ್ಡೆನ್ನವರ, ಭಾಗೀರಥಿ ಪಾಟೀಲ, ಅಶೋಕ ಪವಾರ, ಶಿವಾನಂದ ಟವಳಿ, ನಗರಸಭೆ ಸದಸ್ಯರಾದ ಶಶಿಕಲಾ ಮಜ್ಜಿಗಿ, ರಾಘವೇಂದ್ರ ಕುಲಕರ್ಣಿ, ಶಂಕರ ಗಲಗ, ಸಂಗನಗೌಡ ಗೌಡರ, ಶಶಿ ಗುತ್ತಣ್ಣವರ, ಡಾ.ರವಿ ಕೋಟೆನ್ನವರ, ಕಾರ್ಯಕರ್ತರು ಉಪಸ್ಥಿತರಿದ್ದರು.

# ನಾಳೆ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಪರೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.21: ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಭಾನುವಾರ ಕನ್ನಡ ಮಾಧ್ಯಮದ 6ನೆಯ ತರಗತಿಗೆ ಉಚಿತ ಪ್ರವೇಶಕ್ಕಾಗಿ ಕೊನೆಯ ಹಂತದ ಪರೀಕ್ಷೆ ಜರುಗಲಿದೆ. ಬೆಳಿಗ್ಗೆ 9 ಗಂಟೆಗೆ ಪರೀಕ್ಷೆ ಪ್ರಾರಂಭವಾಗಲಿದ್ದು, ಪ್ರಸ್ತುತ 5ನೆಯ ತರಗತಿಯಲ್ಲಿ ವ್ಯಾಸಂ ಮಾಡುತ್ತಿರುವ ವಿದ್ಯಾರ್ಥಿಗಳು ಪರೀಕ್ಷೆ ಬರೆಯಬಹುದಾಗಿದೆ.

ಕನ್ನಡ, ಇಂಗ್ಲಿಷ, ಗಣಿತ ಮತ್ತು ಪರಿಸರ ಅಧ್ಯಯನ ವಿಷಯಗಳ ಕುರಿತು ಪರೀಕ್ಷೆ ಆಯೋಜಿಸಲಾಗುತ್ತಿದೆ. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆಯುವ 30 ಮಕ್ಕಳಿಗೆ ಕನ್ನಡ ಮಾಧ್ಯಮದಲ್ಲಿ 6 ರಿಂದ 10ನೆಯ ತರಗತಿ ವರೆಗೆ ಉಚಿತ ಶಿಕ್ಷಣ, ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುತ್ತದೆ ಎಂದು ಆಡಳಿತಾಧಿಕಾರಿ ಮೋಹನ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ವೈದ್ಯನ ಮೇಲೆ ಪಿಎಸ್ಐ ಹಲ್ಲೆ : ವೈದ್ಯಕೀಯ ಸಂಘ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸರ್ಕಾರಿ ವೈಧ್ಯರೊಬ್ಬರ ಮೇಲೆ ನಗರ ಠಾಣೆ ಪಿಎಸ್ಐ ಹಲ್ಲೆ ಮಾಡಿದ ಘಟನೆ ಗುರುವಾರ ಮಧ್ಯಾಹ್ನ ನಗರದ ಸುಭಾಷ್ ಸರ್ಕಲ್ ಹತ್ತಿರ ನಡೆದಿದೆ.

ಈ ಘಟನೆಯಲ್ಲಿ ದೋರನಹಳ್ಳಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದ ವೈಧ್ಯಾಧಿಕಾರಿ ಡಾ.ಅರುಣ್ ಪಾಟೀಲ ಎಂಬುವವರ ಮೇಲೆ ಪಿಎಸ್ಐ ಮಂಜೇಗೌಡ ಎಂಬುವವರು ಹಲ್ಲೆ ಮಾಡಿದ್ದಾರೆ.



ಹಲ್ಲೆ ವೇಳೆ ವೈದ್ಯರ ಮುಖಕ್ಕೆ ರಕ್ತಗಾಯವಾಗಿದ್ದು, ಕಪಾಳಕ್ಕೆ ಮತ್ತು ಇತರೆಡೆ ಹೊಡೆದಿದ್ದಾರೆಂದು ಹಲ್ಲೆಗೊಳಗಾದ ವೈಧ್ಯ ಡಾ.ಅರುಣ್ ಪಾಟೀಲ ಎಸ್‌ಪಿ ಪ್ರಥ್ವಿಕ್ ಶಂಕರ್ ಅವರಿಗೆ ಸಲ್ಲಿಸಿದ ದೂರಿನಲ್ಲಿ ತಿಳಿಸಿದ್ದಾರೆ. ಘಟನೆ ವಿವರ : ಗುರುವಾರ ಮಧ್ಯಾಹ್ನ ಸುಭಾಷ್ ಸರ್ಕಲ್ ಬಳಿ ಪ್ರತಿಭಟನೆ ಹಿನ್ನೆಲೆಯಲ್ಲಿ ಬಂದೋಬಸ್ತಗಾಗಿ ಈ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳ ಇದ್ದರು. ಆ ವೇಳೆಯಲ್ಲಿ ಯಾದಗಿರಿಯಿಂದ ದೋರನಹಳ್ಳಿ ಕರ್ತವ್ಯಕ್ಕೆಂದು ತಮ್ಮ ಕಾರಿನಲ್ಲಿ ಡಾ.ಅರುಣ್ ಪಾಟೀಲ ತಮ್ಮ ಗೆಳಯನೊಂದಿಗೆ ಪ್ರಯಾಣಿಸುತ್ತಿದ್ದರು, ಪ್ರತಿಭಟನಾಗಾರರು ಸರ್ಕಲ್ ಬಳಿ ಬರುತ್ತಿದ್ದಾಗ ಸಂಚಾರ ಸುಗಮಗೊಳಿಸಲು ಪಿಎಸ್ಐ ಮಂಜೇಗೌಡ ವಾಹನಗಳನ್ನು ತಡೆಯುತ್ತಿದ್ದಾಗ ವೈದ್ಯರ ಹಾಗೂ ಇವರ ನಡುವೆ ಮಾತಿನ ಚಕಮಕಿಯಿಂದಾಗಿ ಸಿಟ್ಟಿಗೆದ್ದ ಪಿಎಸ್ಐ ತಮ್ಮ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.ತಕ್ಷಣಕ್ಕೆ ಇಬ್ಬರ ನಡುವೆ ಮಾತಿನ ಭರಾಟೆ ಶುರುವಾಗಿ ಪರಿಸ್ಥಿತಿ ವಿಕೋಪಕ್ಕೆ ಹೋಗುವ ಹಂತಕ್ಕೆ ತಲುಪಿದಾಗ ಸ್ಥಳದಲ್ಲಿ ಇದ್ದವರು ಶಾಂತಗೊಳಿಸಿದ್ದಾರೆ.

ನಂತರ ಈ ಸುದ್ದಿ ನಗರದ ವೈದ್ಯರಿಗೆ ತಿಳಿದು ಹಲ್ಲೆಗೊಳಗಾದ ವೈಧ್ಯರನ್ನು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಹಲ್ಲೆ ಮಾಡಿದ ಪಿಎಸ್ಐ ಮೇಲೆ ಕಠಿಣ ಕ್ರಮ ಜರಿಗಿಸುವಂತೆ ಎಸ್ಪಿ ಅವರನ್ನು ಭೇಟಿ ಮಾಡಿ ಒತ್ತಾಯಿಸಿದ್ದಾರೆ.

ಭಾರತೀಯ ವೈದ್ಯಕೀಯ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಮತ್ತು ನಗರದ ವೈದ್ಯರು ಎಸ್ಪಿ ಅವರಿಗೆ ನಡೆದ ಘಟನೆಯನ್ನು ವಿವರಿಸಿ ಕರ್ತವ್ಯಕ್ಕೆಂದು ತೆರಳುತ್ತಿದ್ದ ವಿನಾಕಾರಣ ಹಲ್ಲೆ ಮಾಡಿರುವುದು ಅಕ್ಷಮ್ಯ ಅಪರಾಧವೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೂರು ಸ್ವೀಕರಿಸಿರುವ ಎಸ್ಪಿ ಪ್ರಥ್ವಿಕ್ ಶಂಕರ್ ಈ ಬಗ್ಗೆ ಡಿವೈಎಸ್ಪಿ ನೇತೃತ್ವದಲ್ಲಿ ತ್ವರಿತಗತಿಯಲ್ಲಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವುದಾಗಿ ವೈದ್ಯರಿಗೆ ಭರವಸೆ ನೀಡಿದ್ದಾರೆ.

ಗುರುವಾರ ಸಂಜೆ ಘಟನೆ ಬಗ್ಗೆ ಹಲ್ಲೆಗೊಳಗಾದ ವೈದ್ಯ ಸೇರಿದಂತೆ ಅನೇಕ ವೈದ್ಯರು ಬಂದು ದೂರು ನೀಡಿದ್ದು, 2–3 ದಿನಗಳಲ್ಲಿ ತನಿಖೆ ಕೈಗೊಂಡು ನ್ಯಾಯ ಒದಗಿಸುವೆ ಎಂದು ತಿಳಿಸಿದ್ದಾರೆ.

ಡಾ.ಅರುಣ್ ಪಾಟೀಲ ಮೇಲೆ ಹಲ್ಲೆ ಮಾಡಿದ ಮಂಜೇಗೌಡ ವಿರುದ್ಧ ಕಳೆದ ಎರಡು ಮೂರು ತಿಂಗಳಲ್ಲಿ ಜನವಿರೋಧಿ ಕರ್ತವ್ಯದ ಬಗ್ಗೆ ಗಂಭೀರ ಆರೋಪಗಳು ಕೇಳಿ ಬರುತ್ತಿವೆ. ಕಳೆದ 3 ತಿಂಗಳ ಹಿಂದೆ ಜಿಲ್ಲಾಧಿಕಾರಿ ಕಛೇರಿ ಎದುರುಗಡೆ ಪ್ರತಿಭಟನೆ ನಡೆಸುತ್ತಿದ್ದ ಹಿರಿಯ ರೈತ ಹೋರಾಟಗಾರ ಚನ್ನಪ್ಪ ಆನೇಗುಂದಿ ಎಂಬುವವರನ್ನು ದರದರನೆ ಎಳೆದುಕೊಂಡು ಹೋಗಿ ಬಂಧಿಸಿದ್ದರು. ಕಳೆದ ವಾರ ಹಿಂದೆ ನಗರದ ಕೆಲವು ಮಂಗಳಮುಖಿಯವರು ದೂರು ನೀಡದ್ದಂತೆ ಇದೇ ಪಿಎಸ್ಐ ಮಂಜೇಗೌಡ ಹಲ್ಲೆ ಮಾಡಿದ್ದಾರೆ ಎಂದು ದೂರಲಾಗಿದೆ. ಈಗ ವೈದ್ಯ ಅರುಣ್ ಮೇಲೆ ಹಲ್ಲೆ ಮಾಡಿದ್ದು ಸಾರ್ವಜನಿಕರಲ್ಲಿ ಇವರ ಕರ್ತವ್ಯದ ಬಗ್ಗೆ ವಿವಿಧ ವ್ಯಾಖ್ಯಾನಗಳ ಕೇಳಿ ಬರುತ್ತಿವೆ.

# ರಂಗಭೂಮಿ ಕಲಾವಿದರನ್ನು ಗೌರವಿಸಿ – ರಾಜು ಮಾಡಗಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ :– ಶಹಾಪುರ ತಾಲೂಕಿನ ಇಟಗಾ ಎಸ್ ಗ್ರಾಮದಲ್ಲಿ ಶ್ರೀ ನಾದಬ್ರಹ್ಮ ಸಂಗೀತ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಶ್ರೀ ಚನ್ನಬಸವೇಶ್ವರ ನಾಟ್ಯ ಸಂಘ ಕಲಬುರ್ಗಿ ರವರ ಸಾರಥ್ಯದಲ್ಲಿ ಚಿನ್ನದ ಗೊಂಬೆ, ಸಾಮಾಜಿಕ ನಾಟಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ರಂಗಭೂಮಿ ಕಲಾವಿದರು ನಾಡಿನ ಸಂಸ್ಕೃತಿ ಪರಂಪರೆಗಳನ್ನು ಉಳಿಸಿ ಬೆಳೆಸುವುದರ ಜೊತೆಯಲ್ಲಿ ರಾಮಾಯಣ,ಮಹಾಭಾರತ, ಶಿವಕಥೆ,ಸೇರಿದಂತೆ ಜಾನಪದ ಲೋಕದ ಅನೇಕ ಕಥೆಗಳು ಇಂದು ಚಿನ್ನದ ಗೊಂಬೆ ಎಂಬ ಜಾನಪದ ಸಾಮಾಜಿಕ ನಾಟಕ ವನ್ನು ಗ್ರಾಮೀಣ ಪ್ರದೇಶದಲ್ಲಿ ನಾಟಕೋತ್ಸವ ಹಮ್ಮಿಕೊಳ್ಳುವುದರ ಮುಖಾಂತರ ವರದಕ್ಷಿಣೆ ಪಿಡುಗು, ರೈತರ ಮಕ್ಕಳಿಗೆ ಹೆಣ್ಣು ಕೊಡುವುದು, ಶಿಕ್ಷಣ ಕಡ್ಡಾಯ, ಎಂಬ ಸಾರಾಂಶದ ಅಡಿಯಲ್ಲಿ ಜಾನಪದ ನಾಟಕೋತ್ಸವ ಆಯೋಜಿಸಿರುವುದು ಇಂದಿನ ಯುವಜನತೆಗೆ ಪೂರ್ತಿದಾಯಕ ನಾಟಕವಾಗಿರುತ್ತದೆ ಎಂದು ರಾಜು ಮಾಡಗಿ ಯವರು ತಿಳಿಸಿದರು. ರಂಗಭೂಮಿ ಯಿಂದ ಚಿತ್ರರಂಗ ಕ್ಷೇತ್ರಗಳು ಹೆಸರುವಾಸಿಗಳಾಗಿವೆ ರಂಗಭೂಮಿ ಕಲಾವಿದರೆ ಚಿತ್ರರಂಗದಲ್ಲಿ ಪ್ರಮುಖರು ಎಂದು ಹರ್ಷ ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ನಾಡಿನ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಕಲಾವಿದರಿಗೆ, ವಿಶೇಷವಾಗಿ ಸತ್ಕರಿಸಿ ಗೌರವಿಸಲಾಯಿತು ಅತಿಥಿಗಳಾಗಿ ಅಣಬಿ ಗ್ರಾಮ ಪಂಚಾಯತ ಸದಸ್ಯರಾದ ಸಂಗಣ್ಣ ಬೂಸ್ಟ್ ಗೇರ್, ವಿಠೋಬ ಯಮನೂರ್, ಈರಪ್ಪ ಟಣಕೇದರ್,ಅಮಲಪ್ಪ ಬಳಕಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು ಈ ಸಂದರ್ಭದಲ್ಲಿ ಜನಪದ ಕಲಾವಿದರಾದ ಶರಣಪ್ಪ ಪೂಜಾರಿ ರಾಜ್ಯ ಪ್ರಶಸ್ತಿ ಪುರಸ್ಕೃತರು,ಗಂಗಾಧರ ಹೊಟ್ಟಿ, ಮಲ್ಲಿಕಾರ್ಜುನ್ ಬೋಳಾರಿ, ದ್ಯಾವಣ್ಣ ದೊರೆ, ನಾಟಕೋತ್ಸವ ಕಲಾವಿದರಾದ ಮಲ್ಲು ಶಾರದಹಳ್ಳಿ ಸೇರಿದಂತೆ ಇತರರಿಗೆ ಸತ್ಕಾರ ನೆರವೇರಿಸಿದರು ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮಲ್ಲಯ್ಯ ಸ್ವಾಮಿ ಇಟಗಿ ವಾಸ್ತವಿಕವಾಗಿ ಮಾತನಾಡಿದರು ಶರಣು ಕಾಡಂಗೇರಿ ಸ್ವಾಗತಿಸಿ ವಂದಿಸಿದರು, ಶಾಂತಯ್ಯ ಸ್ವಾಮಿ ನಿರೂಪಿಸಿದರು.

# ಕುಂಬಾರ ಸಮಾಜ ವತಿಯಿಂದ ಪಟ್ಟಣದಲ್ಲಿ ಆಯೋಜಿಸಿದ ಕವಿ ಸರ್ವಜ್ಞ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಸಮಾಜದಲ್ಲಿ ಬೇರೂರಿದ ಅನಿಷ್ಟಪದ್ಧತಿಗಳು ಜನರಾಡುವ ಭಾಷೆಯಲ್ಲೇ ತ್ರಿಪದಿಗಳು ರಚಿಸಿ ಸಮಾಜದ ಅಂಕುಡೊಂಕುಗಳನ್ನು ತಿದ್ದಿದ ಶ್ರೇಷ್ಠ ಸಮಾಜ ಸುಧಾರಕ ಸರ್ವಜ್ಞ ಆಗಿದ್ದರು ಎಂದು ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ ಹೇಳಿದರು.

ಗುರುವಾರ ಗೋರೊಬಾ ಕಾಕಾ ಸ್ವ ಸಹಾಯ ಸಂಘ ಹಾಗೂ ತಾಲೂಕು ಕುಂಬಾರ ಸಮಾಜ ವತಿಯಿಂದ ಪಟ್ಟಣದಲ್ಲಿ ಆಯೋಜಿಸಿದ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ತ್ರಿಪದಿಗಳ ಮೂಲಕ ಕನ್ನಡ ಸಾರಸ್ವತ ಲೋಕಕ್ಕೆ ಅಮೂಲ್ಯ ಕೊಡುಗೆ ನೀಡಿದ ಶ್ರೇಷ್ಠ ವಚನಕಾರರಾಗಿ 16ನೇ ಶತಮಾನದಲ್ಲಿ ವಿಶ್ವ ಮಾನವ ಸಂದೇಶವನ್ನು ಸಾರಿದ ಸಂತರಗಿದ್ದರು. ಅವರು ಯಾವುದೇ ಒಂದು ಜಾತಿಗೆ ಸೀಮಿತರಾಗದೆ ಸಮಾಜದಲ್ಲಿ ಎಲ್ಲ ವರ್ಗದ ಹಾಗೂ ಎಲ್ಲ ರಂಗಗಳಲ್ಲಿರುವ ಅಂಧಕಾರವನ್ನು ತೊಡೆದು ಹಾಕಲು ಶ್ರಮಿಸಿದ ಮಹಾನ್ ಚೇತನರಾಗಿದ್ದರು. ಅವರ ಆದರ್ಶಗಳು ಎಲ್ಲ ಕಾಲಕ್ಕೂ ಅನ್ವಯವಾಗಲಿದೆ ಎಂದರು.

ತಾಲೂಕು ಕುಂಬಾರ ಸಮಾಜದ ಅಧ್ಯಕ್ಷ ನಾಗಪ್ಪ ಕುಂಬಾರ ಮಾತನಾಡಿ, ಕುಂಬಾರ ಸಮುದಾಯದ ಜನರು ಶಿಕ್ಷಣ ಪಡೆದು ಅಭಿವೃದ್ಧಿ ಹೊಂದಬೇಕು. ಮಕ್ಕಳಿಗೆ ಸರ್ಕಾರದ ಸೌಲಭ್ಯಗಳು ಪಡೆದು ಉನ್ನತ ಶಿಕ್ಷಣ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಗಣೇಶ ಕುಂಬಾರ ಚಟ್ನಾಳ,ನರಸಿಂಗ ಹಂದಿಕೇರಾ,ಈರಪ್ಪ ಕುಂಬಾರ, ಬಸವರಾಜ ಕುಂಬಾರ,ಗುಂಡಪ್ಪ ಕುಂಬಾರ,ನರಸಿಂಗ ಕುಂಬಾರ ಸೇರಿದಂತೆ ಇನ್ನಿತರರಿದ್ದರು.

# ಡಾ,ಬಿ,ಆರ್.ಅಂಬೇಡ್ಕರ ಪ್ರತಿಮೆ ಸ್ಥಾಪನೆ ಸಚಿವ ದರ್ಶನಾಪುರರಿಗೆ ಹೃದಯಸ್ಪರ್ಶಿ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ದಲಿತಪರ ಸಂಘಟನೆಗಳ ಪ್ರಗತಿಪರ ಸಂಘಟನೆಗಳ ಬಹುದಿನಗಳ ಬೇಡಿಕೆಯಾಗಿದ್ದ, ಶಹಾಪುರ ಹಳೆ ಬಸ್ ನಿಲ್ದಾಣದ ಅವರಣದಲ್ಲಿ, ಸಂವಿಧಾನ ಶಿಲ್ಪಿ ಡಾ, ಬಾಬಾಸಾಹೇಬ್ ಅಂಬೇಡ್ಕರವರ ಪ್ರತಿಮೆ ಸ್ಥಾಪನೆಗೆ ದಿ,20 ರಂದು ಮುಖ್ಯಮಂತ್ರಿ ಸಿದ್ರಾಮಯ್ಯನವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟದ ಸಭೆಯಲ್ಲಿ, ಕ್ಷೇತ್ರದ ಜನಪ್ರೀಯ ಶಾಸಕರು, ಕರ್ನಾಟಕ ಸರ್ಕಾರದ ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸಪ್ಪಗೌಡ ದರ್ಶನಾಪುರ ವರು ಮುಖ್ಯಮಂತ್ರಿಗಳ ಮನವಲಿಸಿ, ನಗರ ಬಸ್ ನಿಲ್ದಾಣದ 198.35 ಜಾಗವನ್ನು ಡಾ,ಬಿ,ಆರ್,ಅಂಬೇಡ್ಕರವರ ಪ್ರತಿಮೆ ಸ್ಥಾಪನೆಗೆ ಒಪ್ಪಿಗೆ ನೀಡಿದ್ದಕ್ಕೆ, ಶಹಾಪುರ ತಾಲುಕಿನ ದಲಿತಪರ ಸಂಘಟನೆಗಳ ಮುಖಂಡರು ಭೀ,ಗುಡಿ ಪ್ರವಾಸಿ ಮಂದಿರದಲ್ಲಿ ಸಚಿವ ದರ್ಶನಾಪುರವರಿಗೆ ಸಿಹಿ ಹಂಚಿ, ಹೃದಯಸ್ಪರ್ಶಿ ಗೌರವ ಸನ್ಮಾನ ಮಾಡಿದರು, ಹಿರಿಯ ಮುಖಂಡರಾದ ನೀಲಕಂಠ ಬಡಿಗೇರ, ಮಲ್ಲಿಕಾರ್ಜುನ ಪೂಜಾರಿ, ಮೋನಪ್ಪ ಹೋಸಮನಿ, ಗೋಗಿ, ನಾಗಣ್ಣ ಬಡಿಗೇರ, ಶಾಂತಪ್ಪ ಕಟ್ಟಿಮನಿ, ವೆಂಕಟೇಶ ಆಲೂರ, ಭೀಮರಾಯ ಕಾಂಗ್ರೆಸ್,ಬಾಬುರಾವ ಬೂತಾಳೆ, ಶಿವುಕುಮಾರ ತಳವಾರ, ಶುಭಾಸ ತಳವಾರ, ಡಾ, ರವಿಂದ್ರನಾಥ ಹೋಸಮನಿ, ಮೋನಪ್ಪ ಗಡ್ಡದ, ಮಾನಯ್ಯ ಹತ್ತಿಗೂಡೂರ, ಜಯರಡ್ಡಿ ಹೊಸಮನಿ, ಭೀಮರಾಯ ಜುನ್ನಾ, ಗ್ಯಾನಪ್ಪ ಅಣಿಬಿ, ಮಾಹಾದೇವಪ್ಪ ದಿಗ್ಗಿ,ಹೊನ್ನಪ್ಪ ರಸ್ತಾಪುರ, ಚಂದ್ರಶೇಖರ ಗುತ್ತೆದಾರ, ಸೇರಿದಂತೆ ಅನೇಕ ಗಣ್ಯರು ಹಿರಿಯರು ಭಾಗವಹಿಸಿದ್ದರು,

### 3ನೇ ವರ್ಷದ ಕಲ್ಯಾಣ ಕಲಾ ಸಾಂಸ್ಕೃತಿಕ ಕಾರ್ಯಕ್ರಮದ

# ಆಮಂತ್ರಣ ಪತ್ರಿಕೆ ಬಿಡುಗಡೆ ವಿಶ್ವನಾಥರಡ್ಡಿ ದರ್ಶನಾಪೂರ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ ನಗರದ ನೌಕರರ ಗೃಹ ನಿರ್ಮಾಣ ಕೆಂದ್ರ ಕಛೇರಿಯಲ್ಲಿ ಕಲ್ಯಾಣ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಮತ್ತು ಶಿಕ್ಷಣ ಸಂಸ್ಥೆ ರಿ ಕಾಡಂಗೇರಾ ಇದರ 3ನೇ ವರ್ಷದ ಕಲ್ಯಾಣ ಕಲಾ ಸಾಂಸ್ಕೃತಿಕ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಯನ್ನು ಯಾದಗಿರ ಜಿಲ್ಲಾ ಸಹಕಾರಿ ಯೂನಿಯನ್ ಒಕ್ಕೂಟದ ಅಧ್ಯಕ್ಷರಾದ ವಿಶ್ವನಾಥರಡ್ಡಿ ದರ್ಶನಾಪೂರ ಬಿಡುಗಡೆ ಮಾಡಿ ಮಾತಾನಾಡಿದ ಸಂದರ್ಭ ಮಾರ್ಚ 1ರಂದು ನಡೆಯುವ ಕಾರ್ಯಕ್ರಮಕ್ಕೆ ಪ್ರತಿ ವರ್ಷದಂತೆ ಈ ವರ್ಷವು ಕೂಡ ವಿವಿಧ ಕ್ಷೇತ್ರದಲ್ಲಿ ಸಾಧನೆ ಸಲ್ಲಿಸಿದ ಗಣ್ಯರಿಗೆ ಕಲ್ಯಾಣ ಸಿರಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ ಮತ್ತು ಇದೆ ಸಂದರ್ಭದಲ್ಲಿ ಹಲವಾರು ಜನನಿ ಪೂರ್ವ ಪ್ರಾಥಮಿಕ ಶಾಲೆಯ ವತಿಯಿಂದ ಮಕ್ಕಳ ಸಾಂಸ್ಕೃತಿಕ ಸಂಭ್ರಮ ಜರಗಲಿದ್ದು ಈ ಸಂಸ್ಥೆಯ ಮುಂದಿನ ದಿನಗಳಲ್ಲಿ ಇನ್ನೂ ಹಲವಾರು ಜನಪರ ಕೆಲಸವನ್ನು ಯಶಸ್ವಿಯಾಗಿ ಮಾಡಲಿ ಎಂದು ಸಲಹೆ ನೀಡಿದರು ಈ ಸಂಸ್ಥೆ ಹೆಮ್ಮರವಾಗಿ ಬೆಳೆಯಲ್ಲಿ ಎಂದು ಶುಭಹಾರೈಕೆ ನುಡಿದರು


ಈ ಸಂದರ್ಭದಲ್ಲಿ ಹಿರಿಯರಾದ ಬಾಪುಗೌಡ ಅಸಂತಪೂರ ಶಾಂತಗೌಡ ತುಂಬಗಿ ರೇಖು ಚವ್ಹಾಣ ಶಂಕರಗೌಡ ಯಕ್ಷಂತಿ ಸಂಸ್ಥೆಯ ಅಧ್ಯಕ್ಷರಾದ ಶರಣು ಎಸ್ ಕಾಡಂಗೇರಾ ಅನೇಕರು ಉಪಸ್ಥಿತಿ ಇದ್ದರು.

# ಜೆಜೆಮ್ ಗುತ್ತೆದಾರರ ಸಂಘದ ಹೇಳಿಕೆ ಖಂಡನಾರ್ಹ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಜೆಜೆಎಮ್, ಕಾಮಗಾರಿಗಳು ತ್ವರಿತಗತಿಯಲ್ಲಿ ಸಂಪೂರ್ಣಗೊಳ್ಳದೆ ಅರೆಬರೆ ಕಾಮಗಾರಿಗಳಾಗಿದ್ದರ ಹಿನ್ನಲೆಯಲ್ಲಿ ಪ್ರಗತಿಪರ ಸಂಘಟನೆಗಳು ಸಂಭಂಧಪಟ್ಟ ಕಚೇರಿ ಮುಂದೆ ಆಯಾ ಅಧಿಕಾರಿಗಳ ವಿರುದ್ಧ ಹೋರಾಟ ಮಾಡುವದು ಸಿದ್ಧಾಂತಗಳಾಗಿವೆ, ಪ್ರಶ್ನಿಸುವ ಹಕ್ಕು ಸರ್ವರಿಗೂ ಇದೆ.ಆದರೆ




> ಜೆಜೆಎಮ್ ನಳದಲ್ಲಿ ನೀರು ಬಾರದ ಕಾರಣಕ್ಕಾಗಿ ಹತ್ತಿಗೂಡೂರ ಗ್ರಾ,ಪಂ, ಮುಂದೆ ಖಾಲಿ ಕೊಡಗಳ ಮೇರವಣಿಗೆ ಪ್ರತಿಭಟನೆ ನಡೆಸಿದರು, ಕಾಮಗಾರಿಗಳು ಸಮರ್ಪಕವಾಗಿದ್ದರೆ ಸಮಸ್ಯೆಗಳು ಉದ್ಬವಾಗಲ್ಲ, ಪ್ರತಿಭಟನೆಗಳು ಅನಿವಾರ್ಯವಾಗಿ ಮಾಡಬೇಕಾಗುತ್ತದೆ, ಅದನ್ನು ತಡೆ ಹಾಕುವ ಹುನ್ನಾರದ ಮಾತುಗಳು ಸರಿಯಲ್ಲ,
>
> **ವಿಶ್ವ ಚಲುವಾದಿ, ಜಿಲ್ಲಾ ದಲಿತ ಮುಖಂಡರು**

ಜೆಜೆಎಮ್,ಗುತ್ತೆದಾರರನ್ನು ವಿರುದ್ಧ ಪ್ರತಿಭಟನೆಗೆ ಯಾವ ಸಂಘಟನೆಗಳು ಮುಂದಾಗಿಲ್ಲ, ಪ್ರತಿಭಟನೆ ಅಫರಾಧವನ್ನಾಗಿಸುವ ನಿಟ್ಟಿನಲ್ಲಿ ಗುತ್ತೆದಾರರ ಸಂಘದವರು ಮುಂದೆ ಗುತ್ತೆದಾರರ ಆತ್ಮಹತ್ಯೆ ಮಾಡಿಕೊಂಡಲ್ಲಿ ಸಂಘಟನೆಗಳ ಕಾರಣ ಎನ್ನುವ ವಿಡಿಯೋ ಹೇಳಿಕೆ ಖಂಡನಾರ್ಹವಾಗಿದೆ, ಎಂದು ರೈತ ಸಂಘದ ಅಧ್ಯಕ್ಷರಾದ ಮಲ್ಲಣಗೌಡ ಹಗರಟಗಿ ತಿಳಿಸಿದರು, ಈ ಕುರಿತು ಯಾವ ಸಂಘಟನೆಗಳಿಂದ ಗುತ್ತೆದಾರರಿಗೆ ಅನ್ಯಾಯವಾದಲ್ಲಿ ಬಹಿರಂಗ ಹೇಳಿಕೆ ನೀಡಬೇಕು, ಈ ಆರೋಪಗಳು ಕಡಾ ಖಂಡಿತವಾಗಿ ತಳ್ಳಿಹಾಕುತ್ತೇವೆ, ಇನ್ನೂ ಮುಂದಿನ ದಿನಗಳಲ್ಲಿ ಸಭೆ ಈ ಕುರಿತು ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು,ಈ ಸಮಯದಲ್ಲಿ ಪ್ರದೀಪ ಅಣಿಬಿ, ಸುಭಾಶ ಹೊತಪೇಟ, ನಿಂಗಣ್ಣ ಕದರಾಪುರ, ಮರೆಪ್ಪ ಕ್ರಾಂತಿ, ಮೊಹನರಾಜ ಹಯ್ಯಾಳಪ್ಪ, ದೇವಿಂದ್ರಪ್ಪ ಶಿರವಾಳ,ಬಸವರಾಜ ನಾಟೇಕಾರ, ರಾಮಲಿಮಗ ಇಸ್ಮಾಯಲ್ ತಿಮ್ಮಾಪುರಿ,ವಿಶ್ವ–ರಾಧ್ಯ ಚಲುವಾದಿ ಸೇರಿದಂತೆ ಹಲವಾರು ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು,

# ರೈತರು ಮಣ್ಣು, ನೀರಿನ ಸಂರಕ್ಷಣೆ ಮಾಡುವುದು ಅತಿ ಅವಶ್ಯಕ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ;ಫೆ:21–ರೈತರು ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡುವುದು ಅತಿ ಅವಶ್ಯಕವಾಗಿದ್ದು,ಮನೆಗೊಂದು ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರು ಪಾಲದಾರರಾಗಬೇಕು ಎಂದು ಅಬ್ಬೆತುಮಕೂರಿನ ಶ್ರೀ ವಿಶ್ವರಾಧ್ಯ ಸಿದ್ದಸಂಸ್ಥಾನ ಮಠದ ಕಿರಿಯ ಸ್ವಾಮಿಗಳಾದ ಶಿವಶೇಖರ ಸ್ವಾಮಿ ಹೇಳಿದರು




ತಾಲೂಕಿನ ಅಬ್ಬೆತುಮಕೂರ ಗ್ರಾಮದ ಶ್ರೀ ವಿಶ್ವರಾಧ್ಯ ಸಿದ್ದ ಸಂಸ್ಥಾನ ಮಠದಲ್ಲಿ ಜಿಲ್ಲಾ ಪಂಚಾಯತ ಯಾದಗಿರಿ, ಕೃಷಿ ಇಲಾಖೆ ಯಾದಗಿರಿ ವತಿಯಿಂದ ಪ್ರದಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ– ಜಲಾನಯನ ಅಭಿವೃದ್ಧಿ, ಜಲಾನಯನ ಯಾತ್ರೆ ಪ್ರಯುಕ್ತ ಪಾನಿ ಕೀ ಪಾಠಶಾಲಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬೇಸಿಗೆ ಆರಂಭವಾಗಿದ್ದು, ನೀರಿನ್ನು ಮಿತವಾಗಿ ಬಳಸಬೇಕು.ಮಾನವ ಹಾಗೂ ಪ್ರಾಣಿ–ಪಕ್ಷಿ ಸಂಕುಲ ಆಹಾರವಿಲ್ಲದೆ ಹಲವಾರು ದಿನಗಳು ಬದುಕಬಹುದು. ಆದರೆ ಕುಡಿಯುವ ನೀರಿಲ್ಲದೆ ಒಂದು ದಿನ ಬದುಕುವುದೂ ಅತೀ ಕಷ್ಟ ಎಂದರು.

ಮಳೆ ಪ್ರಮಾಣ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಇದರಿಂದ ನೀರಿನ ಸಮಸ್ಯೆ ಎದುರಾಗುತ್ತಿದೆ. ಹೀಗಾಗಿ ನೀರನ್ನು ಪೋಲು ಮಾಡದೆ ಎಚ್ಚರಿಕೆಯಿಂದ ಬಳಸಬೇಕು ಎಂದರು. ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸುರೇಶ ಮಾತನಾಡಿ, ನೀರನ್ನು ಮಿತವಾಗಿ ಬಳಸಬೇಕು. ನೀರಿನ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅಗತ್ಯವಿದೆ. ನಾವೆಲ್ಲರೂ ಸಂಶೋಧನೆಗಳಿಂದ ಎಷ್ಟೆ ವೈಜ್ಞಾನಿಕವಾಗಿ, ತಾಂತ್ರಿಕವಾಗಿ ಮುಂದುವರಿದರೂ, ನಮ್ಮಿಂದ ನೀರನ್ನು ಸೃಷ್ಟಿಸಲು ಸಾಧ್ಯವಿಲ್ಲ ಎಂದರು.

ನೀರು ದೇವರು ಕೊಟ್ಟ ಕಾಣಿಕೆ. ಅದನ್ನು ಮುಂದಿನ ಪೀಳಿಗೆಗೆ ಕೊಡುಗೆಯಾಗಿ ನೀಡಬೇಕೆಂದರೆ ನೀರನ್ನು ಸಂರಕ್ಷಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿ ಇಲಾಖೆಯ ತಾಂತ್ರಿಕ ಅಧಿಕಾರಿಗಳಾದ ಯಾಮರೆಡ್ಡಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರುಗಳಾದ ಬಸವರಾಜ ಬೊಮ್ಮನ, ಟಾಟಾ ಟ್ರಸ್ಟ್ ಕಾರ್ಯಕ್ರಮ ಸಂಯೋಜಕ ಮಂಜುನಾಥ, ಅಬ್ಬೆತುಕೂರಿನ ಪಶು ವೈದ್ಯಾಧಿಕಾರಿ ಡಾ. ಶಿವಮಂಗಲಾ, ತೋಟಗಾರಿ–ಕೆ ವಿಸ್ತಾರಣ ಮುಂದಾಳು ರಾಜಕುಮಾರ, ಸಹಾಯಕ ಕೃಷಿ ನಿರ್ದೇಶಕರು ವಿಷಯ ತಜ್ಞರಾದ ರಾಜಕುಮಾರ, ಅಬ್ಬೆಮಕೂರಿನ ಬಿಎಡ್ ವಿದ್ಯಾರ್ಥಿಗಳು, ಹಾಗೂ ಗ್ರಾಮಸ್ಥರು ಇದ್ದರು.

# ಫೆಬ್ರವರಿ 27 ರಂದು ಮುಂಗಡ ಪತ್ರ ತಯಾರಿಸಲು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.21–ಕಲಬುರಗಿ ಮಹಾನಗರಪಾಲಿಕೆಯ 2025–26ನೇ ಸಾಲಿನ ಮುಂಗಡ ಪತ್ರವನ್ನು ತಯ್ಯಾರಿಸಲು ಪೂರ್ವಭಾವಿವಾಗಿ ಸಾರ್ವಜನಿಕರಿಂದ ಸಲಹೆ–ಸೂಚನೆಗಳನ್ನು ಪಡೆಯಲು ಇದೇ ಫೆಬ್ರವರಿ 27 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಇಂದಿರಾ ಸ್ಮಾರಕ ಭವನದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ನೋಂದಾಯಿತ ಸ್ಥಳೀಯ ಕಲ್ಯಾಣ ಸಂಘ, ವ್ಯಾಪಾರ, ಉದ್ಯಮ ನಡೆಸುವ ಸಂಘ–ಸಂಸ್ಥೆಗಳು,ಎನ್.ಜಿ.ಓ.ಸಂಘಗಳು, ಇತರೆ ಪ್ರಮುಖ ನಾಗರಿಕ ಹಾಗೂ ಸಾರ್ವಜನಿಕರು ಮೇಲ್ಕಂಡ ದಿನದಂದು ನಡೆಯುವ ಪೂರ್ವಭಾವಿ ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆ ನೀಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸುದ್ದಿಗೋಷ್ಠಿಯಲ್ಲಿ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಹೆಚ್. ಕೃಷ್ಣ ಮಾಹಿತಿ 10 ನ್ಯಾಯಬೆಲೆ ಅಂಗಡಿಗಳ ಪರವಾನಿಗೆ ರದ್ದು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ಜಿಲ್ಲೆಯ ವಿವಿಧ ತಾಲ್ಲೂಕುಗಳ ನ್ಯಾಯಬೆಲೆ ಅಂಗಡಿಗಳಿಗೆ ಅನಿರೀಕ್ಷಿತವಾಗಿ ಭೇಟಿನೀಡಿದಾಗ ಹೆಚ್ಚುವರಿಯಾಗಿ ಪಡಿತರ ದಾಸ್ತಾನು ಕಂಡುಬಂದ ಒಟ್ಟು 10 ನ್ಯಾಯಬೆಲೆ ಅಂಗಡಿಗಳ ಪರವಾನಿಗೆ ರದ್ದು ಮಾಡಲಾಗಿ, ಒಂದು ಗೋದಾಮಿನ ವ್ಯವಸ್ಥಾಪಕರನ್ನು ಅಮಾನತುಗೊಳಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಹೆಚ್. ಕೃಷ್ಣ ಅವರು ಹೇಳಿದರು.

ಶುಕ್ರವಾರ ನಗರದ ಸರ್ಕಾರಿ ಅತಿಥಿ ಗೃಹದ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಕಳೆದ ಐದು ದಿನಗಳಿಂದ ಜಿಲ್ಲಾದ್ಯಂತ ಆಯೋಗದ ಸದಸ್ಯರು ಒಳಗೊಂಡಂತೆ ಆಹಾರ ಇಲಾಖೆ ಅಧಿಕಾರಿಗಳೊಂದಿಗೆ ಆಹಾರ ನಾಗರಿಕ ಸರಬರಾಜು ನಿಗಮದ ಸಗಟು ಗೋದಾಮುಗಳಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳಲಾಗಿದ್ದು, ಅಲ್ಲಿ ಸ್ವಚ್ಛತೆ ಕಾಯ್ದುಕೊಳ್ಳದೇ ಇರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿದಾಗ ಅಲ್ಲಿ ಯಾವುದೇ ರೀತಿಯ ಆಹಾರ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ಮಾಹಿತಿ ವಿವರ ಫಲಕ ಪ್ರದರ್ಶಿಸುವುದು ಕಂಡುಬಂದಿಲ್ಲ. ಗ್ರಾಹಕರಿಗೆ ನ್ಯೂನತೆ ಕಂಡುಬಂದಲ್ಲಿ ಅವರು ಯಾರನ್ನು ವಿಚಾರಿಸಬೇಕು ಎಂಬುದರ ಕುರಿತ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ಹೆಸರು ಮತ್ತು ಸಂಪರ್ಕ ವಿವರ ಸಹಿತ ಮಾಹಿತಿ ಪ್ರದರ್ಶಿಸಬೇಕು ಎಂದು ಸೂಚಿಸಲಾಗಿದೆ ಎಂದರು.

ನ್ಯಾಯಬೆಲೆ ಅಂಗಡಿಗಳಲ್ಲಿಯೂ ಸಹ ಸ್ವಚ್ಛತಾ ಮರೀಚಿಕೆ ಆಗಿದೆ. ಜಾಗೃತಿ ಸಮಿತಿ ಸದಸ್ಯರ ಪಟ್ಟಿ ಹಾಗೂ ಆಹಾರ ಆಯೋಗದ ಸದಸ್ಯರ ನಾಮಫಲಕ ಅಳವಡಿಸಿಲ್ಲ. ಜಾಗೃತಿ ಸಮಿತಿ ಕೊರತೆ, ಭೌತಿಕ ಹಾಗೂ ತಾಂತ್ರಿಕ ದಾಸ್ತಾನು ವ್ಯತ್ಯಾಸ ಕಂಡುಬಂದಿದೆ. ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಅಧ್ಯಕ್ಷರು ತಿಳಿಸಿದರು.

ಮಂಗಳವಾರ ಹಾಗೂ ಸರ್ಕಾರಿ ರಜೆ ಹೊರತು ಪಡಿಸಿ, ನ್ಯಾಯ ಬೆಲೆ ಅಂಗಡಿ ತೆರೆದಿರಬೇಕು. ಪಡಿತರ ವಿತರಣೆ ಕಾರ್ಯ, ಪಡಿತರ ವಿತರಣೆ ಸಮರ್ಪಕವಾಗಿ ವಿತರಿಸಿರುವ ಬಗ್ಗೆ ಫಲಾನುಭವಿಗಳ ಮನೆ–ಮನೆ ಭೇಟಿ ನೀಡಿ ಖುದ್ದು ಪರಿಶೀಲನೆ ಮಾಡಲಾಗಿದೆ ಎಂದರು.

ಪಡಿತರ ಅಕ್ಕಿ ಸಂಗ್ರಹಿಸುವ ಉಗ್ರಾಣಗಳಲ್ಲಿಯೂ ಸಹ ಸರಿಯಾದ ವ್ಯವಸ್ಥೆಯಿಲ್ಲ. ಮಾನದಂಡ ಇಲ್ಲದೆ ಪರವಾನಗಿ ನೀಡಲಾಗಿದೆ. ತಿಂಗಳಲ್ಲೇ ನಾಲ್ಕು ದಿನ ಮಾತ್ರ ಪಡಿತರ ವಿತರಿಸುವುದು. ಮುಂಚಿತವಾಗಿ ಬೆರಳು ಗುರುತು ಹಾಕಿಸಿಕೊಳ್ಳುವುದು ಗಮನಕ್ಕೆ ಬಂದಿದೆ. ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.


ವಿವಿಧ ವಸತಿ ಶಾಲೆಯಲ್ಲಿ ಮೂಲಭೂತ ಸೌಕರ್ಯಗಳು ಇಲ್ಲ. ಗುಣಮಟ್ಟದ ಆಹಾರ ನೀಡುತ್ತಿಲ್ಲ. ಈ ಕುರಿತು ನಿಲಯ ಪಾಲಕರ ಅಮಾನತಿಗೆ ಶಿಫಾರಸ್ಸು ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರಾದ ಲಿಂಗರಾಜ್ ಕೋಟೆ, ರೋಹಿಣಿ ಪ್ರಿಯ, ಮಾರುತಿ ಎಂ.ದೊಡ್ಡಲಿಂಗಣ್ಣನವರ್, ಸುಮಂತ್ ರಾವ್ ಸೇರಿದಂತೆ ಇತರರಿದ್ದರು.



ಅಯೋಧ್ಯ:– ಉತ್ತರ ಪ್ರದೇಶದ ಅಯೋಧ್ಯ ನಗರದಲ್ಲಿರುವ ಶ್ರೀ ರಾಮ ದೇವಸ್ಥಾನಕ್ಕೆ ಬೀದರ್ ಜಿಲ್ಲೆಯ ಚಿಟಗುಪ್ಪ ಪಟ್ಟಣದ ಫಾತ್ಮಪುರ್ ಬಡಾವಣೆಯ ನಿವಾಸಿಗಳಾದ ವೆಂಕಟ ಪೂಜಾರಿ, ರಾಜಕುಮಾರ ಆರ್. ಹಡಪದ, ನರೇಂದ್ರರೆಡ್ಡಿ ರಾಂಪುರ, ಧರ್ಮರೆಡ್ಡಿ ಚಿಂಚೋಳಿ, ಜಗನಾಥ ಗೋಣಗಿ, ಸೂರ್ಯಕಾಂತ ಸಂಗೋಳಗಿ ಇವರುಗಳು ಶ್ರೀ ರಾಮನ ದರ್ಶನ ಪಡೆದು ನಾಡಿನ ಜನರ ಹಾಗೂ ವಿಶೇಷವಾಗಿ ರೈತರ ಮತ್ತು, ಸೈನಿಕರಿಗಾಗಿ ಪ್ರಾರ್ಥನೆ ಸಲ್ಲಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಅರ್ಚಕರಿಗೆ ಸೇರಬೇಕಿದ್ದ ಹಣ ಅಧಿಕಾರಿಗಳಿಂದ 1.87 ಕೋಟಿ ಗುಳುಂ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರಿನ ಕಂದಾಯ ಇಲಾಖೆಯ ಅಧಿಕಾರಿಗಳಿಂದ ಮುಜರಾಯಿ ಇಲಾಖೆಯಲ್ಲಿನ ಕೋಟ್ಯಾಂತರ ರೂಪಾಯಿ ಲೂಟಿ ನಡೆದಿರುವುದು ಬೆಳಕಿಗೆ ಬಂದಿದೆ.

ಮುಜರಾಯಿ ದೇವಸ್ಥಾನಗಳ ಅರ್ಚಕರಿಗೆ ಸೇರಬೇಕಾದ 1,87,86,561 ರೂ. ಹಣ ಲೂಟಿಯಾಗಿದೆ. ಲಿಂಗಸುಗೂರು ಕೆನರಾಬ್ಯಾಂಕ್ ಸಿಬ್ಬಂದಿಯೊಂದಿಗೆ ಶಾಮೀಲಾಗಿ ಸರ್ಕಾರದ ಹಣವನ್ನು ಅಧಿಕಾರಿಗಳು ಕುಟುಂಬಸ್ಥರು ಹಾಗೂ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆ ಮಾಡಿದ್ದಾರೆ.

ನಕಲಿ ದಾಖಲೆಗಳನ್ನು ಸೃಷ್ಟಿಸಿ, ಮುಜರಾಯಿ ಖಾತೆಯ ಹಣ ಲಪಟಾಯಿಸಿದ್ದು, ಕಚೇರಿಯ ಐವರು ಅಧಿಕಾರಿಗಳಿಂದ ಹಣ ದುರ್ಬಳಕೆಯಾಗಿದೆ ಎಂಬ ಆರೋಪ ಕೇಳಿಬಂದಿದೆ. ಜೊತೆಗೆ ದ್ವಿತೀಯ ದರ್ಜೆ ಸಹಾಯಕನ ಮೇಲೆ ಆರೋಪ ಹೊರಿಸಿ ಕೈ ತೊಳೆದುಕೊಳ್ಳಲು ಸಂಚು ನಡೆದಿಸಿದ್ದರು ಎನ್ನಲಾಗಿದೆ. ಎಸ್‌ಡಿಎ ಯಲ್ಲಪ್ಪನಿಂದ ತನ್ನ ಪತ್ನಿ, ಮಗ, ಮಗಳು, ಟೆಕ್ಸ್‌ಟೈಲ್ ಹಾಗೂ ಕಿರಾಣಿ ಅಂಗಡಿಗಳಿಗೆ ಹಣ ವರ್ಗಾವಣೆಯಾಗಿದೆ.

ಸದ್ಯ ಹಗರಣ ಕುರಿತು ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಲಿಂಗಸುಗೂರು ತಹಶೀಲ್ದಾರ್ ಶಂಶಾಲಂ ಅವರು ಎಸ್‌ಡಿಎ ಯಲ್ಲಪ್ಪ, ಕೆನರಾ ಬ್ಯಾಂಕ್ ಮ್ಯಾನೇಜರ್ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಅಕ್ರಮದಲ್ಲಿ ಭಾಗಿಯಾಗಿರುವ ಎಲ್ಲಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಫೆ.23 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ಬಳ್ಳಾರಿಯ 110/11ಕೆ.ವಿ ಹಲಕುಂದಿ ಉಪ–ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯವನ್ನು ತುರ್ತಾಗಿ ಕೈಗೊಂಡಿರುವುದರಿಂದ, 110/11ಕೆ.ವಿ ಹಲಕುಂದಿ ವಿದ್ಯುತ್ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ 11ಕೆ.ವಿ ಮಾರ್ಗಗಳಲ್ಲಿ ಫೆ.23 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್–1 ಗ್ಯಾಲಕ್ಸಿ ಕೆಮಿಕಲ್ ಮಾರ್ಗದ ಮುಂಡರಗಿ ಕೈಗಾರಿ–ಕೆ ಪ್ರದೇಶದ 2 ಮತ್ತು 3 ಹಂತ, ಎಫ್–10 ಮಿಂಚೇರಿ ಐ.ಪಿ ಮರ್ಗದ ಮುಂಡರಗಿ, ಹಲಕುಂದಿ, ಮಿಂಚೇರಿ ಎಸ್. ಜೆ.ಕೋಟೆ ಕೃಷಿ ಪ್ರದೇಶಗಳು. ಎಫ್–11 ಯಶಸ್ವಿನಿ ಸ್ಪಾಂಜ್ ಕೈಗಾರಿಕೆ ಪ್ರದೇಶ ಮಾರ್ಗದ ಹಲಕುಂದಿ ಗ್ರಾಮ, ಮುಂಡರಗಿ ಕೈಗಾರಿಕಾ ಪ್ರದೇಶ.

ಎಫ್–2 ಸುಧಾಕರ ಪೈಪ್ ಮಾರ್ಗದ ಮುಂಡರಗಿ ಕೈಗಾರಿಕೆ ಪ್ರದೇಶದ 2 ಮತ್ತು 3 ನೇ ಹಂತ, ಎಫ್–4 ಗುರುನಾಥ ರೈಸ್ ಮಿಲ್ ಮಾರ್ಗದ ಮುಂಡರಗಿ ಕೈಗಾರಿಕೆ ಪ್ರದೇಶದ 2 ಮತ್ತು 3 ನೇ ಹಂತ, ಎಫ್–5 ಅಪೇರಲ್ ಪಾರ್ಕ್ ಮಾರ್ಗದ ಮುಂಡರಗಿ ಕೈಗಾರಿಕೆ ಪ್ರದೇಶದ 4 ನೇ ಹಂತ, ಎಫ್–6 ಸ್ನೇಹ ಗ್ಲಾಸ್ ಮಾರ್ಗದ ಮುಂಡರಗಿ ಕೈಗಾರಿಕೆ ಪ್ರದೇಶದ 2 ಮತ್ತು 3 ನೇ ಹಂತದ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾ.26 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ಸಂಡೂರು ತಾಲ್ಲೂಕಿನ ಯಶವಂತನಗರ ಗ್ರಾಮದ 'ರಾಮನದುರ್ಗ ಐರನ್ ಓರ್ ಮೈನ್'ನಲ್ಲಿ ಕುಮಾರಸ್ವಾಮಿ ಮಿನರಲ್ ಎಕ್ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರು ಈಗಾಗಲೇ ಅಸ್ತಿತ್ವದಲ್ಲಿರುವ ಒಟ್ಟು 59.36 ಹೆಕ್ಟೇರ್ ಅರಣ್ಯ ಪ್ರದೇಶದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಬ್ಬಿಣದ ಅದಿರಿನ ಗಣಿಗಾರಿ–ಕೆಯ ವಾರ್ಷಿಕ ಉತ್ಪಾದನಾ ಸಾಮರ್ಥ್ಯವನ್ನು 2.8 ಮಿಲಿಯನ್ ಟನ್ ನಿಂದ 4.0 ಮಿಲಿಯನ್ ಟನ್‌ಗೆ ವಿಸ್ತರಿಸಲು (ಹೆಚ್ಚುವರಿ ವಾರ್ಷಿಕ ಉತ್ಪಾದನಾ ಸಾಮರ್ಥ್ಯ 1.2 ಮಿಲಿಯನ್ ಟನ್) ವಿಸ್ತರಣಾ ಪ್ರಸ್ತಾವನೆ ಸಲ್ಲಿಸಿದ್ದು, ಇದರ ಸಂಬಂಧ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಮಾ.26 ರಂದು ಬೆಳಿಗ್ಗೆ 11 ಗಂ–ಟೆಗೆ ಸಂಡೂರು ತಾಲ್ಲೂಕಿನ ಯಶವಂತನಗರ ಗ್ರಾಮದ 'ರಾಮನದುರ್ಗ ಐರನ್ ಓರ್ ಮೈನ್ಸ್' (ಕುಮಾರಸ್ವಾಮಿ ಮಿನರಲ್ ಎಕ್ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್) ಯೋಜನಾ ಪ್ರದೇಶದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.

ಇದಕ್ಕೆ ಸಂಬಂಧಿಸಿದಂತೆ ಉದ್ದೇಶಿತ ಯೋಜನೆಯ ಕಾರ್ಯನಿರ್ವಾಹಕ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಸಂಬಂಧಿಸಿದ ಕಚೇರಿಗಳಲ್ಲಿ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಗಮನಕ್ಕೆ ಇಡಲಾಗಿದೆ.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆಬ್ರವರಿ 28 ರಂದು ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.20–ಕಲಬುರಗಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಕಲಬುರಗಿ ಜಿಲ್ಲೆಯ ಜೇವರ್ಗಿ ಹಾಗೂ ಯಡ್ರಾಮಿ ತಾಲೂಕುಗಳಿಗೆ ಸಂಬಂಧಿಸಿದಂತೆ ಇದೇ ಫೆಬ್ರವರಿ 28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜೇವರ್ಗಿ ತಹಶೀಲ್ದಾರರ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಕಲಬುರಗಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಬಿ.ಕೆ. ಉಮೇಶ ಅವರು ತಿಳಿಸಿದ್ದಾರೆ.

ಕಲಬುರಗಿ ಕರ್ನಾಟಕ ಲೋಕಾಯುಕ್ತ ಡಿ.ಎಸ್.ಪಿ. ಯವರಾದ ಗೀತಾ ಟಿ. ಬೇನಹಾಳ (ಮೊಬೈಲ್ ಸಂಖ್ಯೆ 9364062569) ಹಾಗೂ ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ರಾಜಶೇಖರ ವಿ. ಹಳಿಗೋದಿ (ಮೊಬೈಲ್ ಸಂಖ್ಯೆ 9364062671) ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳನ್ನು ವಿಳಂಬ ಮಾಡುತ್ತಿದ್ದರೆ ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಚೇರಿಗೆ ಅಲೆದಾಡಿಸುತ್ತಿದ್ದಲ್ಲಿ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದ್ದಲ್ಲಿ ಕಲಬುರಗಿ ಕರ್ನಾಟಕ ಲೋಕಾಯುಕ್ತರ ಗಮನಕ್ಕೆ ತರಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಐವಾನ್ ಶಾಹಿ, ಕಂಪೌಂಡ್, ಕಲಬುರಗಿ–585102 ಕಚೇರಿಯನ್ನು ಹಾಗೂ ದೂರವಾಣಿ ಸಂಖ್ಯೆ 08472–295364ಗೆ ಸಂಪರ್ಕಿಸಲು ಕೋರಲಾಗಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9448604450

# ಭಿಕ್ಷಾಟನೆ ತಡೆ, ಕಾಣೆಯಾದ ಮಕ್ಕಳ ರಕ್ಷಣೆ ಕುರಿತು ಜನಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ವಿಶೇಷ ಪೊಲೀಸ್ ಘಟಕ, ಸಖಿ–ಒನ್ ಸ್ಟಾಪ್ ಸೆಂಟರ್ ಇವರ ಸಹಯೋಗದಲ್ಲಿ ನಗರದ ರೈಲ್ವೇ ನಿಲ್ದಾಣ ಮತ್ತು ಬಸ್ ನಿಲ್ದಾಣಗಳಲ್ಲಿ ಭಿಕ್ಷಾಟನೆ ತಡೆ ಮತ್ತು ಕಾಣೆಯಾದ ಮಕ್ಕಳ ರಕ್ಷಣೆ ಕುರಿತು ಜನಜಾಗೃತಿ ಕಾರ್ಯಕ್ರಮ ಗುರುವಾರ ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ (ಅಸಾಂಸ್ಥಿಕ ಸೇವೆ) ಚನ್ನಬಸಪ್ಪ ಪಾಟೀಲ್ ಅವರು ಮಾತನಾಡಿ, 'ಕೆಲವು ಜನರು ಭಿಕ್ಷಾಟನೆಯನ್ನು ವೃತ್ತಿಯನ್ನಾಗಿಸಿಕೊಂಡಿದ್ದು, ಈ ಪಿಡುಗನ್ನು ಸಮಾಜದಿಂದ ತಡೆಗಟ್ಟಲು ಹಾಗೂ ನಿಷೇಧಿಸಲು ಇಂತಹ ಕೃತ್ಯದಲ್ಲಿ ತೊಡಗಿಸಿಕೊಂಡಿರುವವರನ್ನು ಗುರುತಿಸಿ, ರಕ್ಷಿಸಿ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಿ ಅವರಿಗೆ ಪುನರ್ವಸತಿ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿ ಲಲಿತಮ್ಮ ಅವರು ಮಾತನಾಡಿ, ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು, ಚಿಂದಿ ಹಾಯುವ ಮಕ್ಕಳು, ಬೀದಿ ಮಕ್ಕಳು, ಕಾಂಈಕ ಪದ್ಧತಿಯಲ್ಲಿ ತೊಡಗಿರುವ ಮಕ್ಕಳು, ಅನಾಥ ಮಕ್ಕಳು, ಸಾಗಣೆಯಾದ ಮಕ್ಕಳು, ಪರಿತ್ಯಜಿಸಿಲ್ಪಟ್ಟ ಮಕ್ಕಳು, ಶೋಷಣೆ ಮತ್ತು ದೌರ್ಜನ್ಯಕ್ಕೆ ಒಳಗಾದ ಮಕ್ಕಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ–1098 ಇಲ್ಲವೇ ಪೊಲೀಸ್ ತುರ್ತು ಸೇವೆ – 112 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಹೇಳಿದರು.

ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್ ಮಾತನಾಡಿ, ಕಾಣೆಯಾದ ಯಾವುದೇ ಮಗು ಕಂಡು ಬಂದಲ್ಲಿ ಕೂಡಲೇ ಮಕ್ಕಳ ಸಹಾಯವಾಣಿ–1098 ಮಾಹಿತಿ ನೀಡಿ, ಇಲ್ಲವೇ ಹತ್ತಿರದ ಪೊಲೀಸ್ ಠಾಣೆಗೆ ಮಗುವನ್ನು ಒಪ್ಪಿಸಬೇಕು ಎಂದು ಜಾಗೃತಿ ಮೂಡಿಸಿದರು.

ಮಕ್ಕಳ ರಕ್ಷಣಾಧಿಕಾರಿ (ಸಾಂಸ್ಥಿಕ ಸೇವೆ) ಮಂಜುನಾಥ ಅವರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಯೊಜನೆಗಳ ಕುರಿತು ಜನರಿಗೆ ತಿಳಿಸಿಕೊಟ್ಟರು. ಮಕ್ಕಳ ಸಹಾಯವಾಣಿಯ ಸಂಯೋಜ–ಕರಾದ ಆನಂದ ಅವರು ಮಕ್ಕಳ ಸಹಾಯವಾಣಿ–1098 ಕುರಿತ ಕರಪತ್ರಗಳನ್ನು ಸಾರ್ವಜನಿಕರಿಗೆ ವಿತರಿಸಿ ಸಾರ್ವಜನಿಕರಿಗೆ ಮಕ್ಕಳ ಸಹಾಯವಾಣಿ ಸೇವೆಗಳ ಕುರಿತು ತಿಳಿಸಿದರು.

ಈ ವೇಳೆ ಬಸ್ ನಿಲ್ದಾಣದ ಉಸ್ತುವಾರಿ ಅಧಿಕಾರಿ ರಾಜಶೇಖರ್, ನಿಯಂತ್ರಣಾಧಿಕಾರಿ ಪಂಪಾರೆಡ್ಡಿ, ಬಳ್ಳಾರಿ ರೈಲ್ವೇ ನಿಲ್ದಾಣದ ಎಎಸ್‌ಐ ಶಿವಮೂರ್ತಿ, ಪೊಲೀಸ್ ಪೇದೆ ಶಂಕರ್, ಬ್ರೂಸ್‌ಪೇಟೆ ಪೊಲೀಸ್ ಠಾಣೆ–ಯ ಪಿಎಸ್‌ಐ ಎಂ.ಅನ್ಸರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ ಸಿಬ್ಬಂದಿಗಳಾದ ರವಿಕುಮಾರ್, ಹೊನ್ನೂರಪ್ಪ, ಉಮೇಶ್, ಅರುಳ್ ಆನಂದ್, ಕಾರ್ತಿಕ್, ಸುಧಾ, ನಿಲೋಫಿಯಾ, ಚಂದ್ರಕಳ, ಸಜಿನಿ ಮತ್ತು ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಶಹಜಾನ್, ಸಖಿ–ಒನ್ ಸ್ಟಾಪ್ ಸೆಂಟರ್‌ನ ಸಿಬ್ಬಂದಿಗಳಾದ ವಿಶಾಲಕ್ಷೀ ಸರಸ್ವತಿ ಹಾಗೂ ನವದುರ್ಗಿ ಪೊಲೀಸ್ ಸಿಬ್ಬಂದಿಯವರು ಭಾಗವಹಿಸಿದ್ದರು.

# ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲಂಗೆ ವಿಶೇಷ ಸಾರಿಗೆ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ಕಲ್ಯಾಣಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದಿಂದ ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲಂಗೆ ಹೋಗಲು ವಿಶೇಷ ಸಾರಿಗೆ ಸೌಲಭ್ಯ ಮಾಡಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ಮೋಕಾ, ಕುರುಗೋಡು, ಸಿರುಗುಪ್ಪ, ತೆಕ್ಕಲಕೋಟೆ, ಹಳೇಕೋಟೆ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲಂಗೆ ಹೋಗುತ್ತಿದ್ದು, ಭಕ್ತಾಧಿಗಳ ಅನುಕೂಲಕ್ಕಾಗಿ ಫೆ.21 ರಿಂದ 28 ರ ವರೆಗೆ ರವರೆಗೆ ವಿಶೇಷ ಸಾರಿಗೆ ಒದಗಿಸಲಾಗಿದೆ.

ಮಾಹಿತಿಗಾಗಿ:ಬಳ್ಳಾರಿ–1ನೇ ಘಟಕದ ವ್ಯವಸ್ಥಾಪಕರು–7760992163, ಬಳ್ಳಾರಿ–2ನೇ ಘಟಕ ವ್ಯವಸ್ಥಾಪಕರು–7760992164, ಸಿರುಗುಪ್ಪ ಘಟಕ ವ್ಯವಸ್ಥಾಪಕರು–7760992165, ಕುರುಗೋಡು ಘಟಕ ವ್ಯವಸ್ಥಾಪಕರು–9606483671, ಸಂಡೂರು ಘಟಕ ವ್ಯವಸ್ಥಾಪಕರು–7760992309ಗೆ ಸಂಪರ್ಕಿಸಬಹುದು. ಈ ಸಾರಿಗೆ ಸೇವೆಯನ್ನು ಸಾರ್ವಜನಿಕ ಪ್ರಯಾಣಿಕರು ಸದುಪಯೋಗಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ

# ಜಾರಿಗೊಳಿಸಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.21–ನಗರದಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಫೆ.23 ಮತ್ತು ಮಾ.02 ರಂದು ವಿವಿಧ ಇಲಾಖೆಗಳ ಗ್ರೂಪ್ 'ಬಿ' ಹೈದರಾಬಾದ್ ಕರ್ನಾಟಕ ವೃಂದದ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ 2023ರ ಕಲಂ 163 ರ ಮೇರೆಗೆ ನಿರ್ಬಂಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.



ಫೆ.23 ರಂದು ಸಾಮಾನ್ಯ ಪತ್ರಿಕೆಯು ಬೆಳಿಗ್ಗೆ 10 ಗಂಟೆಯಿಂದ 11.30 ಗಂಟೆಯವರೆಗೆ ನಗರದ 11 ಪರೀಕ್ಷಾ ಕೇಂದ್ರಗಳಲ್ಲಿ ಮತ್ತು ಮಾ.02 ರಂದು ನಿರ್ದಿಷ್ಟ ಪತ್ರಿಕೆ–2 ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ 12 ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿವೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಇರುವ ಜೆರಾಕ್ಸ್, ಇಂಟರ್‌ನೆಟ್ ಸೆಂಟರ್‌ಗಳು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಲು ಆದೇಶಿಸಿದ್ದು, ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ.

ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಯವರಿಗೆ ಅನ್ವಯಿಸುವುದಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಮಾ.08 ರಂದು ರಾಜ್ಯಮಟ್ಟದ ಬುಡಕಟ್ಟು ಉತ್ಸವ ಆಯೋಜನೆ

ಬಳ್ಳಾರಿ,ಫೆ.21–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2024–25ನೇ ಸಾಲಿನ ಪರಿಶಿಷ್ಟ ಪಂಗಡಗಳ ಉಪಯೋಜನೆಯಡಿ ರಾಜ್ಯ ಮಟ್ಟದ ಬುಡಕಟ್ಟು ಉತ್ಸವ ಕಾರ್ಯಕ್ರಮವನ್ನು ಮಾ.08 ರಂದು ನಗರದ ಡಾ.ರಾಜ್‌ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ವಿಜೃಂಭಣೆಯಿಂದ ಆಯೋಜಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಭಾರತರತ್ನ ಡಾ,ಬಿ,ಆರ್,ಅಂಬೇಡ್ಕರ ಪ್ರತಿಮೆ ಸ್ಥಾಪನೆಗೆ ಸಚಿವ ಸಂಪುಟ ಒಪ್ಪಿಗೆ ಹರ್ಷದ ಸಂಭ್ರಮಾಚರಣೆ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಬಹುದಿನಗಳ ಬೆಡಿಕೆಯಾಗಿದ್ದ ಶಹಾಪುರ ಹಳೆ ಬಸ್ ನಿಲ್ದಾಣದ ಅವರಣದಲ್ಲಿನ ಡಾ,ಬಿ,ಆರ್,ಅಂಬೇಡ್ಕರವರ ಪ್ರತಿಮೆ ಸ್ಥಾಪನೆ ಕುರಿತು ರಾಜ್ಯ ಸಚಿವ ಸಂಪುಟದಲ್ಲಿ ಒಪ್ಪಿಗೆ ನೀಡಿದೆ, ಶಹಾಪುರ ಮತಕ್ಷೇತ್ರದ ಜನಪ್ರೀಯ ಶಾಸಕರು, ರಾಜ್ಯ ಸಚಿವ ಸಂಪುಟದ ಮಂತ್ರಿಗಳು, ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರು, ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸಪ್ಪಗೌಡ ದರ್ಶನಾಪುರವರ ಸತತ ಪ್ರಯತ್ನಗಳಿಂದ ಇಂದು ಸಂಪುಟದಲ್ಲಿ ಪ್ರತಿಮೆ ಸ್ಥಾಪನೆಗೆ ಒಪ್ಪಿಗೆ ನೀಡಲಾಯಿತು, ಸಚಿವರು ಅವಿರತ ಪರಿಶ್ರಮ ಮತ್ತು ದಲಿಪ ,ಪ್ರತಿಪರ , ಜನಪರ ,ಕನ್ನಡಪರ. ಸಮಾಜಿಕ ಸಮೂಹಿಕ ಸಂಘಟನೆಗಳ ಸಹಕಾರಗಳಿಂದ ಸಂವಿಧಾನ ಶಿಲ್ಪಿ ಡಾ, ಬಾಬಾಸಾಹೇಬ್ ಅಂಬೇಡ್ಕರವರ ಪ್ರತಿಮೆ ಸ್ಥಾಪನೆಗೆ ಕಾರಣವಾಗಿ ಹಳೆ ಗ್ರಾಮೀಣ ಬಸ್ ನಿಲ್ದಾಣದ ಅವರಣದ ಡಾ, ಬಾಬಾಸಾಹೇಬರ ಮೈದಾನದಲ್ಲಿ ಸರ್ವರು ಸಂಭ್ರಮಾಚರಣೆ ಮಾಡಿದರು, ಈ ಸಮಯದಲ್ಲಿ ಡಾ,ಶರಣು ಗದ್ದುಗೆ , ಸಣ್ಣ ನಿಂಗಣ್ಣನಾಯ್ಕೊಡಿ,ಗೌಡಪ್ಪಗೌಡ ಆಲ್ದಾಳ,ನೀಲಕಂಠ ಬಡಿಗೇರ, ಮಲ್ಲಿಕಾರ್ಜುನಪೂಜಾರಿ,ಶಾಂತಪ್ಪ ಗುತ್ತೆದಾರ, ವೆಂಕಟೇಶ ಆಲೂರ,ಗಿರೆಪ್ಪಗೌಡ ಬಾಣತಿಹಾಳ, ಚೆನ್ನಪ್ಪ ಆನೆಗುಂದಿ, ಅಂಬ್ರೇಶ ವಿಬೂತಿಹಳ್ಳಿ,ನಾಗಣ್ಣ ಬಡಿಗೇರ, ಭೀಮರಾಯ ಹೊಸಮನಿ, ಶಿವಪುತ್ರ ಜವಳಿ, ರುದ್ರಪ್ಪ ಹುಲಿಮನಿ, ಡಾ,ರವಿಂದ್ರನಾಥ ಹೋಸಮನಿ,ಶುಭಾಶ ತಳವಾರ,ಶಿವುಕುಮಾರ ತಳವಾರ, ಮರೆಪ್ಪ ಪ್ಯಾಟಿ,ವಿಜಯಕುಮಾರ ಎದರಮನಿ,ಸೇಖರ ದೊರಿ,ಬಸವರಾಜ ನಾಯ್ಕಲ್,ಮಾಹಾದೇವ ದಿಗ್ಗಿ, ಸೇರಿದಂತೆ ದಲಿಪತ ಮುಖಂಡರು, ಸಾಮಾಜಿಕ ಹೋರಾಟಗಾರರು, ಕನ್ನಡಪರ ಹೋರಾಟಗಾರರು, ಪ್ರಗತಿಪರ ಚಿಂರಕರು ಸಹಿ ಹಂಚಿ ಹರ್ಷ ವ್ಯಕ್ತಪಡಿಸಿದರು,

## ಪುರಾಣ ಪ್ರವಚನ ಆಲಿಸುವುದು ಮನಸ್ಸಿಗೆ ನೆಮ್ಮದಿ ನೀಡುತ್ತದೆ. ಶರಣಗೌಡ ಕಂದಕೂರ





ಮಲ್ಲಮ್ಮ ನುಡಿ ವಾರ್ತೆ

ಸೇಡಂ : ಫೆ. 21. ತಾಲೂಕಿನ ಬೆನಕನಹಳ್ಳಿ ಶ್ರೀ ಸಿದ್ಧಲಿಂಗೇಶ್ವರ ವಿರಕ್ತಮಠದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಹಮ್ಮಿಕೊಂಡಿರುವ ಗುಡ್ಡಾಪುರ ದಾನಮ್ಮ ದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಐದನೇ ದಿನದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಕಂದಕೂರ ಮಾತೆಯರಿಗೆ ಪುರಾಣಗಳ ಮೂಲಕ ಇತಿಹಾಸವನ್ನು ತಿಳಿಸುತ್ತಿರುವ ಪೂಜ್ಯರ ಕಾರ್ಯ ಶ್ಲಾಘನೀಯ, ಪುರಾಣ ಪ್ರವಚನ ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ, ಶಾಂತಿ ಉಂಟುಮಾಡುತ್ತದೆ ಎಂದು ಮಾತನಾಡಿದರು,

ದಿವ್ಯ ಸಾನಿಧ್ಯ ವಹಿಸಿದ್ದ.

ಶ್ರೀ ಷ.ಬ್ರ.ಡಾ.ಚನ್ನರುದ್ರಮನಿ ಶಿವಾಚಾರ್ಯರು ಈ ನಾಡಿಗೆ ಪುರಾಣ ಪ್ರವಚನಗಳು ಅವಶ್ಯ ಎಂದು ಅನೇಕ ಧಾರ್ಮಿಕ ವಿಚಾರಗಳ ಕುರಿತು ಆಶೀರ್ವಚನ ದಯಪಾಲಿಸಿದರು.

ಸಮ್ಮುಖ ವಹಿಸಿದ್ದ ಪರಮ ಪೂಜ್ಯಶ್ರೀ ವಿಶ್ವಾರಾಧ್ಯ ಶ್ರೀಗಳು ಶಾಹಾಪೂರ ಮತ್ತು ಪರಮ ಪೂಜ್ಯ ಶ್ರೀ ಮಹಾಂತ ಶ್ರೀಗಳು ಲೋಕಾಪುರ ಪೂಜ್ಯರು ಭಕ್ತಾದಿಗಳಿಗೆ ಆಶೀರ್ವಚನ ದಯಪಾಲಿಸಿದರು,

ಕಾರ್ಯಕ್ರಮದ ರೂವಾರಿಗಳು ಹಾಗು ಘನ್ ನೇತೃತ್ವ ವಹಿಸಿರುವ ಕೇದಾರ ಶ್ರೀ ಗಳು ಮಾತನಾಡಿ ಅನೇಕ ಮಠಾಧೀಶರು

ಶ್ರೀ ಮಠಕ್ಕೆ ಆಗಮಿಸಿ ಶರಣ ಸಂತರ ಸಾದಕರ ಆಶೀರ್ವಚನ ನಿಡಲಿದ್ದಾರೆ,

ಭಕ್ತಾದಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಜೀವನ ನಡೆಸಬೇಕು ಎಂದು ಹೇಳಿದರು, ಗುರುಮಠಕಲ್ ಜೆಡಿಎಸ್ ಯುವ ಮುಖಂಡರಾದ ಶ್ರೀ ಮಲ್ಲಿಕಾರ್ಜುನ ಅರುಣಿ, ಬಿಜೆಪಿ ಯುವ ಮುಖಂಡರಾದ ಶ್ರೀ ವಿರೇಶ ಹುಗಾರ, ಪುರಸಭೆ ಸದಸ್ಯರಾದ ಶ್ರೀ ಶಿವಾನಂದ ಸ್ವಾಮಿ ಗಡಿಕೇಶ್ವಾರ, ಜೆಡಿಎಸ್ ಯುವ ಮುಖಂಡರಾದ ಶ್ರೀ ನರಸಪ್ಪ ಕವಡೆ ಬದ್ದೆಪಲ್ಲಿ, ಜೆಡಿಎಸ್ ಯುವ ಮುಖಂಡರಾದ ಶ್ರೀ ರಾಜೇಶ್ ಶೆಟ್ಟಿ ಸೈದಾಪುರ,ವಿರೇಶ ಕೊಟಗಿ, ಚಂದ್ರಮ ಜೊಗಿ, ನಾಗೇಂದ್ರಪ್ಪ ಅವಂಟಿ, ಇದ್ದರು ಶ್ರೀ ಬಸಯ್ಯ ಸ್ವಾಮಿ ಮಠಪತಿ ಸ್ವಾಗತಿಸಿದರು, ಚನ್ನಯ್ಯ ಸ್ವಾಮಿ ಮಠಪತಿ ನಿರೂಪಿಸಿದರು.

## ವಿಮಡಾಪುರ ಗ್ರಾಮದಲ್ಲಿ ಮೂಲಭೂತ ಸೌಕರ್ಯದ ಕೊರತೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ : ಫೆ 21. ತಾಲ್ಲೂಕಿನ ಆಡಕಿ ಗ್ರಾಮ ಪಂಚಾಯತ ವ್ಯಾಪ್ತಿಗೆ ಒಳಪಡುವ ವಿಮಡಾ ಪುರ ಗ್ರಾಮದಲ್ಲಿ ಮೂಲಭೂತ ಸೌಕರ್ಯದ ಕೊರತೆ ಎದ್ದುಕಾಣುತ್ತಿದ್ದೂ.

ಗ್ರಾಮದ ಶಾಲೆಯ ಅಕ್ಕಪಕ್ಕದಲ್ಲಿ ಹಾಗೂ ವಿವಿಧ ಓಣಿಗಳಲ್ಲಿ ಒಳಚರಂಡಿಯು ಕಸ ದಿಂದ ತುಂಬಿ ಕೊಳಚೆ ನೀರು ಮುಂದೆ ಸಾಗದೆ ನಿಂತಲ್ಲೇ ನಿಂತು ಡೆಂಗು, ಮಲೇರಿಯಾ. ಇನ್ನು ಹಲವಾರು ಸಾಂಕ್ರಾಮಿಕ ರೋಗಗಳಿಗೆ

ಆವ್ಹಾನ ನಿಡುತ್ತಿದೆ. ಹಾಗೂ ಉರ್ದು ಶಾಲೆಯ ಪಕ್ಕದಲ್ಲಿ ಚರಂಡಿಯಿಂದ ಕೆಟ್ಟದಾಗಿ ವಾಸನೆ ಬರುತ್ತಿದ್ದು.

ಇದರಿಂದ ಶಾಲೆಗೆ ಹೋಗುವ ಮಕ್ಕಳಿಗೆ ಹಿರಿಯ ಪಾದಚಾರಿಗಳಿಗೆ ರಸ್ತೆಯ ಮೇಲೆ ಅಲೆದಾಡಲು ಕಷ್ಟವಾಗುತ್ತಿದೆ. ಈ ವಿಷಯವನ್ನ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತಂದರು ಅವರು ಇಲ್ಲಿಯವರೆಗೆ ಯಾವುದೆ ರೀತಿಯ ಪ್ರತಿಕ್ರಿಯೆ ನೀಡಿರುವುದಿಲ್ಲ.

ಆದಕಾರಣ ಸಂಬಂಧಪಟ್ಟಂತಹ ಚುನಾಯಿತ ಪ್ರತಿನಿದಿಗಳು ಹಿರಿಯ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿ ಗ್ರಾಮದ ಈ ಸಮಸ್ಸೆಯನ್ನು ಆದಷ್ಟು ಬೇಗನೆ ಬಗೆಹರಿಸಿಕೊಡಬೇಕೆಂದು ಗ್ರಾಮಸ್ಥರ ಪರವಾಗಿ, ಕರವೇ ಗ್ರಾಮ ಘಟಕದ ಅಧ್ಯಕ್ಷರಾದ ರವಿಸಿಂಗ ರಜಪೂತ ಮತ್ತು ಪತ್ರಿಕಾ ಮಾಧ್ಯಮದ ಸಂಚಾಲಕರಾದ ಗುಂಡಪ್ಪ ಪೂಜಾರಿಯವರು ಮಾಧ್ಯಮಕ್ಕೆ ತಿಳಿಸಿದ್ದಾರೆ.

## ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನ ಹಾಗೂ ಸಪ್ತಾಹ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಫೆ 21. ಹುಲಸೂರು ತಾಲೂಕಿನ ಮುಚಳಂಬ ಗ್ರಾಮದಲ್ಲಿ ಶ್ರೀ ರಾಮಲಿಂಗೇಶ್ವರ ಸರ್ಕಾರಿ ಪ್ರೌಢ ಶಾಲೆಯಲ್ಲಿ ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನ ಹಾಗೂ ಸಪ್ತಾಹ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ .ಮುಖ್ಯ ಅತಿಥಿಗಳಾಗಿ ಸರ್ಕಾರಿ ಪ್ರೌಢಶಾಲೆ ಜನತಾ ನಗರ ವಿಜ್ಞಾನ ಸಹ ಶಿಕ್ಷಕರಾದ ಮಲ್ಲಪ್ಪ ಜಿಗಜೀವಣಿ ಮಾತನಾಡಿ ಇಂಧನ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ ಸರ್ಕಾರ ಸಂಘ ಸಂಸ್ಥೆಗಳು ಹಾಗೂ ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು ಜೊತೆಗೆ ಇಂಧನದ ಉಳಿತಾಯ ಹಾಗೂ ಸಮರ್ಪಕ ಬಳಕೆ ಎಲ್ಲರ ಹೊಣೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಅತಿಥಿಯಾಗಿ ಪ್ರಾಚಾರ್ಯರಾದ ಶಿವಯೋಗಿ ನಾಗಭೂಷಣ ಕಾಲೇಜು ಶಿವಶಂಕರ್ ಕಾಮ ಶೆಟ್ಟಿ ಮಾತನಾಡಿ ಪರಿಸರ ಸಂರಕ್ಷಣೆ ನಮ್ಮ ಕರ್ತವ್ಯವಾಗಿದ್ದು ಮುಂದಿನ ಪೀಳಿಗೆಗೆ ಒಂದು ಸಮತೋಲಿತ ಸಂಪತ್ಭರಿತವಾದ ಪರಿಸರವನ್ನು ಯಥಾವತ್ತಾಗಿ ಲಭಿಸುವಂತೆ ಮಾಡುವುದು ನಮ್ಮೆಲ್ಲರ ಸರ್ಕಾರದ ಕರ್ತವ್ಯ ಎಂದು ತಿಳಿಸಿದರು .ಅಧ್ಯಕ್ಷತೆ ವಹಿಸಿದ ಶಾಲೆಯ ಮುಖ್ಯ ಗುರುಗಳಾದ ರವೀಂದ್ರ ಬಿರಾದಾರ್ ಮಾತನಾಡಿ ಫಲವತ್ತಾದ ಭೂಮಿಯು ಸಸ್ಯಗಳನ್ನು ಪೋಷಿಸುವಂತೆ ಸಮತೋಲನದಿಂದ ಕೂಡಿದ ಪರಿಸರವು ಸಕಲ ಜೀವಿಗಳನ್ನು ಪೋಷಿಸುವುದು ಹಾಗೂ ಸಂರಕ್ಷಿಸುವುದು ಎಂದು ತಿಳಿಸಿದರು. ಸಂಚಾಲನೆ ಮಲಿಕ್ ಲದಾಫ್. ಸ್ವಾಗತ ಅನೋಜ್ ಕುಮಾರ್ ದೊಡ್ಮನಿ ನೆರವೇರಿಸಿದರು. ಕಾರ್ಯಕ್ರಮದ ಆಯೋಜನೆ ಎಲ್ಲಾ ಶಿಕ್ಷಕ ಸಿಬ್ಬಂದಿ ವರ್ಗದವರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶ್ರೀ ಲಿಂಗೈಕ್ಯ ಪರಮಪೂಜ್ಯ ಅಯ್ಯಪ್ಪ ಮುತ್ಯಾ ದೇವಸ್ಥಾನ ಉದ್ಘಾಟನೆ.!



ಮಲ್ಲಮ್ಮ ನುಡಿ ವಾರ್ತೆ

ಸುರುಪುರ:ತಾಲೂಕಿನ ಕೆಂಭಾವಿ ಪಟ್ಟಣದಲ್ಲಿ ಹಾಲುಮತದ ಶ್ರೀ ತೋಟದ ಮಾನ್ಯದ ದೇವರ ಹಾಗೂ ದೇವಸ್ಥಾನದ ಸಂಸ್ಥಾಪಕ ಮಳ್ಳಿ ಗ್ರಾಮದ ಶ್ರೀ ನಡಿಗೇರಿ ಲಿಂಗಯ್ಯ ದೇವರ ಪಟ್ಟದ ಪೂಜಾರಿ ಯವರ ವಂಶದ ಕುಡಿಯಾಗಿರುವ ಲಿಂಗೈಕ್ಯ ಪರಮಪೂಜ್ಯ ಅಯ್ಯಪ್ಪ ಮುತ್ಯ ಪಟ್ಟದ ಪೂಜಾರಿಯವರ ಕೆಂಭಾವಿಯಲ್ಲಿ ಸರ್ವೆ ನಂಬರ್ 602 ರಲ್ಲಿ ಇರುವ ಪುರಾತನ ದೇವಸ್ಥಾನವನ್ನು ಸಂಪೂರ್ಣ ಜೀರ್ಣಉದ್ದಾರ ಗೊಳಿಸಿ ನೂತನ ದೇವಸ್ಥಾನವನ್ನು ಉದ್ಘಾಟನೆ ಮಾಡಲಾಗುವುದು ಎಂದು ಮಲ್ಲಮ್ಮ ನುಡಿ ಪತ್ರಿಕೆಗೆ ಕುಟುಂಬ ಮೂಲಗಳು ಮಾಹಿತಿ ಕೊಟ್ಟಿದ್ದಾರೆ.!

## ಬಸವತತ್ವ ಪ್ರಚಾರಕ್ಕೆ ಹರ್ಡೇಕರ ಮಂಜನಪ್ಪನವರ ಬದುಕು ಮುಡಿಪು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಕರ್ನಾಟಕ ಗಾಂಧಿ ಎಂದೇ ಖ್ಯಾತಿ ಪಡೆದ ಶರಣ ಹರ್ಡೇಕರ ಮಂಜಪ್ಪನವರು ಬಸವಾದಿ ಶರಣರ ತತ್ವಪ್ರಸಾರಕ್ಕಾಗಿ ತಮ್ಮ ಜೀವನ ಮುಡುಪಾಗಿಟ್ಟರು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು. ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಆಯೋಜಿಸಿದ್ದ ಹರ್ಡೇಕರ ಮಂಜಪ್ಪನವರ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರ ವಚನಗಳಿಂದ ಪ್ರಭಾವಿತರಾಗಿ ಲಿಂಗದೀಕ್ಷೆಪಡೆದು–ಕೊಂಡು ಜೀವನದ್ದುದಗಲಕ್ಕೂ ಶರಣ ಜೀವನ ನಡೆಸಿದರು. ಬಸವಣ್ಣ ಮತ್ತು ಮಹಾತ್ಮ ಗಾಂಧೀಜಿಯವರ ಚಿಂತನೆಯ ಪ್ರಾರಂಭ ಇವರ ವ್ಯಕ್ತಿತ್ವ ಮೇಲೆ ಇತ್ತು. ಮಹಾತ್ಮಗಾಂಧೀಜಿಯವರಿಗೆ ಬಸವಣ್ಣನವರ ಪರಿಚಯ ಮಾಡಿಕೊಟ್ಟ ಕೀರ್ತಿ ಹರ್ಡೇಕರ ಮಂಜಪ್ಪನವರಿಗೆ ಸಲ್ಲುತ್ತದೆ.

ಮಂಜಪ್ಪನವರು ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗಿಯಾಗಿ ಖಾದಿ ಪ್ರಸಾರ, ಸ್ವದೇಶಿ ಚಳುವಳಿ ಮಾಡಿದರು. ಶರಣರ ಕುರಿತು ಚಿಕ್ಕ ಚಿಕ್ಕ ಪುಸ್ತಕಗಳನ್ನು ಬರೆದು ತಾವೇ ಮನೆ ಮನೆಗೆ ಹೋಗಿ ತಲುಪಿಸಿದರು. ಬಸವಣ್ಣನವರ ಸಾರ್ವಜನಿಕ ಜಯಂತಿ ಉತ್ಸವ ಆರಂಭಿಸಿದ ಕೀರ್ತಿ ಹರ್ಡೇಕರ ಮಂಜಪ್ಪನವರಿಗೆ ಸಲ್ಲುತ್ತದೆ. ಮಂಜಪ್ಪನವರ ಈ ಐತಿಹಾಸಿಕ ಕಾರ್ಯದಿಂದ ಸಮಾಜ ಸಂಘಟನೆ ಬೆಳೆದು ಜಾಗೃತವಾಗಿ ಇಂದು ಬಸವಪ್ರಜ್ಞೆ ಜಗತ್ತಿನಾದ್ಯಂತ ಬೆಳೆಯುತ್ತಿದೆ. ಅವರ ಈ ಕಾರ್ಯ ನಮ್ಮೆಲ್ಲರಿಗೆ ಆದರ್ಶಪ್ರಾಯವಾಗಿದೆ. ಅದಕ್ಕಾಗಿ ಅವರ ಸ್ಮರಣೆ ನಮಗೆ ಸ್ಪೂರ್ತಿ ನೀಡುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ,ಪ್ರಮುಖರಾದ ಬಸವರಾಜ ಮರೆ, ಮಲ್ಲಮ್ಮ ಆರ್.ಪಾಟೀಲ, ವಿಶ್ವನಾಥಪ್ಪ ಬಿರಾದಾರ, ಶರಣಪ್ಪ ಬಿರಾದಾರ, ನಾಗಭೂಷಣ ಮಾಮಡಿ, ಗುಂಡಪ್ಪ ಸಂಗಮಕರ, ಗಣಪತಿ ಬಾವುಗೆ, ಶಿವರಾಜ ಜೊತೆಪ್ಪ, ಅಶೋಕ ಬಾವುಗೆ ಹಾಗೂ ಅಕ್ಕನಬಳಗದ ಶರಣೆಯರು ಇದ್ದರು. ವೀರಣ್ಣ ಕುಂಬಾರ ನಿರೂಪಿಸಿದರು.

## 6ನೇ ತರಗತಿಗೆ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 21, – ಸರಕಾರಿ ಆದರ್ಶ ವಿದ್ಯಾಲಯ ಶಾಲೆಯಲ್ಲಿ 2025–26ನೇ ಸಾಲಿನ 6ನೇ ತರಗತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಆದರ್ಶ ವಿದ್ಯಾಲಯದ ಮುಖ್ಯಗುರುಗಳು ಅವರು ತಿಳಿಸಿದ್ದಾರೆ.

ಸರಕಾರಿ ಆದರ್ಶ ವಿದ್ಯಾಲಯ ಶಾಲೆಯ 6ನೇ ತರಗತಿಗೆ ಆನ್‌ಲೈನ್ ಫೆಬ್ರವರಿ 28ರ ಒಳಗೆ ಅರ್ಜಿ ಸಲ್ಲಿಸಬೇಕು, ವಿದ್ಯಾರ್ಥಿಗಳು ಹಾಲ್ ಟಿಕೆಟ್ ಡೌನ್‌ಲೋಡ್ ಮಾಡಿಕೊಳ್ಳಬೇಕು, ಮಾರ್ಚ್ 23 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.schooleducation.gov.in, www.vidyavahini.karnataka.gov.in ನಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಕಲಿ ಪೌರಕಾರ್ಮಿಕರ ನೇಮಕಾತಿಯಲ್ಲಿ ಆಕ್ರಮ ಎಸಗಿದ ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಿ: ಕುಂದನ ಐನಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 21:– ಚಿಟಗುಪ್ಪ ಪುರಸಭೆಯಲ್ಲಿ ಆರು ಜನ ನಕಲಿ ಪೌರ ಕಾರ್ಮಿಕರನ್ನು ನೇಮಕ ಮಾಡಿ ಸರ್ಕಾರಕ್ಕೆ ವಂಚಿಸಿದ ಅಲ್ಲಿಯ ಪುರಸಭೆಯ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ಮತ್ತು ಪ್ರಥಮ ದರ್ಜೆ ಸಹಾಯಕ ಚಿದಾನಂದ ಪತ್ರಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಸಾಮಾಜಿಕ ಕಾರ್ಯಕರ್ತ ಕುಂದನ್ ಐನಳ್ಳಿ ಆಗ್ರಹಿಸಿದ್ದಾರೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು 2018 ರಲ್ಲಿ ಈಗಿನ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ಹಾಗೂ ಸಿಬ್ಬಂದಿ ಚಿದಾನಂದ ಪತ್ರಿ ಅವರು 2018 ರಲ್ಲಿ 44 ಜನ ಪೌರ ಕಾರ್ಮಿಕರನ್ನು ನೇಮಕಾತಿ ಮಾಡಿಕೊಂಡಿದ್ದರು. ಅದರಲ್ಲಿ 19 ಜನರ ವಯಸ್ಸು ಕಾನೂನಿನ ಅಡಿಯಲ್ಲಿ ಬರುವುದಿಲ್ಲ ಎಂದು ಅವರ ನೇಮಕಾತಿ ಕೈಬಿಡ್ಡಿದ್ದರು. ನಂತರ ಸರ್ಕಾರದ ಹೊಸ ಸುತ್ತೋಲೆ ಪ್ರಕಾರ 2023ರಲ್ಲಿ ಕೈಬಿಟ್ಟ 19 ಜನರನ್ನು ಪುನಃ ನೇಮಕ ಮಾಡಿಕೊಂಡಿದ್ದು, ಅದರಲ್ಲಿ 13 ಜನರ ದಾಖಲಾತಿಗಳು ಕ್ರಮಬದ್ಧವಾಗಿರುತ್ತವೆ. ಆರು ಜನರಾದ ಶರಣಪ್ಪ ತಂ. ಮಡೆಪ್ಪ, ಕಂಚಮ್ಮ ಗಂ. ಪ್ರಹ್ಲಾದ, ಲಲಿತಾ ಗಂ. ಮಾಣಿಕರಾವ, ಇಂದುಮತಿ ಗಂ. ಮನೋಹರ, ಸುನಿತಾ ಗಂ. ಬಸವರಾಜ, ಭೀಮಶಾ ತಂ. ಶರಣಪ್ಪ ಇವರ ವಯಸ್ಸಿನಲ್ಲಿ ಲೋಪವಿದ್ದು, 2018 ರಲ್ಲಿ ಒಂದು ವಯಸ್ಸು, 2023–24ನೇ ಸಾಲಿನಲ್ಲಿ ಮತ್ತೊಂದು ವಯಸ್ಸು ನಮೂದಿಸಿ ಅವರನ್ನು ನೇಮಕಾತಿಗೆ ಅರ್ಹರೆಂದು ಪರಿಗಣಿಸಲಾಗಿದೆ. ಆದರೆ ಈ ಆರೂ ಜನರ ನೇಮಕ ಸಂಪೂರ್ಣ ಆಕ್ರಮವಾಗಿದ್ದು, ಸರ್ಕಾರಕ್ಕೆ ಮೋಸ ಎಸಗಲು ಪುರಸಭೆ ಸಿಓ ಹಾಗೂ ಎಫ್.ಡಿ.ಸಿ. ಮುಖ್ಯ ಕಾರಣರಾಗಿದ್ದಾರೆ ಎಂದು ಕುಂದನ್ ದೂರಿದರು.

ಈ ಮೇಲೆ ತಿಳಿಸಿದ ಆರೂ ಜನರ ಶಾಲಾ ದಾಖಲಾತಿಗಳು ಪರಿಶೀಲಿಸಿದಾಗ ನಿಯಮಾನುಸಾರ ಶೈಕ್ಷಣಿಕ ಅರ್ಹತೆ ಹೊಂದದೆ ನಕಲಿ ವರ್ಗಾವಣೆ ಪ್ರಮಾಣ ಪತ್ರಗಳನ್ನು ಸೃಷ್ಟಿಸಲಾಗಿದೆ. ಈ ವಿಚಾರವಾಗಿ ಈಗಾಗಲೇ ರಾಜ್ಯ ಸರ್ಕಾರದ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಿಗೆ, ಹಾಲಿ ಪೌರಾಡಳಿತ ಸಚಿವ ರಹಿಂಖಾನ್, ಹಿಂದಿನ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಇಂದಿನ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಸಹಾಯಕ ಆಯುಕ್ತರು ಬಸವಕಲ್ಯಾಣ ಇವೆಲ್ಲದಕ್ಕೂ ಮಿಗಿಲಾಗಿ ಬೀದರ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮೋತಿಲಾಲ ಲಮಾಣಿ, ಅವರಿಗೂ ಸಹ ಈ ಕುರಿತು ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನ ಆಗಲಿಲ್ಲ. ಇತ್ತೀಚೆಗೆ ಪುನಃ ಮೋತಿಲಾಲ್ ಲಮಾಣಿ ಅವರಿಗೆ ಮೌಖಿಕವಾಗಿ ವಿಚಾರಿಸಿದಾಗ ಎಲ್ಲವೂ ಸರಿಯಾಗಿದೆ ಎಂದು ನನಗೆ ಏಕವಚನದಲ್ಲಿ ಸಂಭೋಧಿಸಿದಲ್ಲದೆ ಈ ವಿಚಾರವಾಗಿ ನೀನು ಯಾರಿಗಾದರೂ ದೂರು ಸಲ್ಲಿಸಬಹುದು ಎಂದು ಗದರಿಸಿರುತ್ತಾರೆ ಎಂದು ಆರೋಪಿಸಿದರು.

ನೇಮಕಾತಿಯಲ್ಲಿ ಆಕ್ರಮವೆಸಗಿದ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ಎಫ್ಡಿಸಿ ಚಿದಾನಂದ ಪತ್ರಿ, ಹಾರಿಕೆ ಉತ್ತರ ನೀಡಿದ ಡಿಯುಡಿಸಿ ಪಿಡಿ ಮೋತಿಲಾಲ್ ಲಮಾಣಿ ಜೊತೆಗೆ ಆಕ್ರಮವಾಗಿ ನೇಮಕಗೊಂಡ ಮೇಲೆ ತಿಳಿಸಿದ ಆರು ಜನ ಪೌರ ಕಾರ್ಮಿಕರ ನೇಮಕಾತಿಯನ್ನು ರದ್ದು ಪಡಿಸುವುದಲ್ಲದೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂಬ ಹಿಂದಿನ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಆದೇಶ ಪ್ರಕಾರ ಕ್ರಮ ಜರುಗಿಸಬೇಕೆಂದು ಒತ್ತಾಯಿಸುತ್ತೇನೆ. ಈ ವಿಚಾರದಲ್ಲಿ ದಿವ್ಯ ಮೌನ ವಹಿಸಿದ್ದ ಪೌರಾಡಳಿತ ಸಚಿವ ರಹಿಂಖಾನ್ ಅವರ ವಿರುದ್ಧವೂ ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಅವರಿಗೆ ದೂರು ಸಲ್ಲಿಸುವುದಾಗಿ ತಿಳಿಸಿದ ಕುಂದನ್ ಅವರು ಕೂಡಲೇ ಈ ನಕಲಿ ಪೌರ ಕಾರ್ಮಿಕರ ವಿರುದ್ಧ ಹಾಗೂ ನೇಮಕಾತಿಗೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದೇ ಇದ್ದಲ್ಲಿ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸುವುದಾಗಿ ಎಚ್ಚರಿಸಿದರು.

# ಕಮತಗಿ ಹುಚ್ಚೇಶ್ವರ ಮಠದಲ್ಲಿ ಪತ್ರಕರ್ತರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.21-ಜಿಲ್ಲೆಯ ಹುನಗುಂದ ತಾಲೂಕಿನ ಸು-ಕ್ಷೇತ್ರ ಕಮತಗಿಯ ಹೊಳೆ ಹುಚ್ಚೇಶ್ವರ ಮಠದಲ್ಲಿ ಜರುಗಿದ ಕಮತಪುರ ಉತ್ಸವ ಶ್ರೀಮಠದ ಪೂಜ್ಯರಾದ ಹೊಳೆ ಹುಚ್ಚೇಶ್ವರ ಮಹಾಸ್ವಾಮಿಗಳ ಪಟ್ಟಾಧಿಕಾರ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಪತ್ರಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಂಗಮೇಶ ಸಿನ್ನೂರ, ವಿಜಯ ಸಿಂಗದ, ಬಸವರಾಜ ನಿಡಗುಂದಿ, ಶಿವು ಕುಮಚಗಿ, ಹರ್ಷ ದೇಸಾಯಿ, ಪ್ರಕಾಶ ಗುಳೇದಗುಡ್ಡ, ಶಬ್ಬೀರ ಬಿಜಾಪೂರ, ಸುನೀಲ್ ಮಾರಬಸರಿ, ಶಂಕರ ವನಕೆ, ನಿಂಗಪ್ಪ ಕಡ್ಲಿಮಟ್ಟಿ, ಮಹೇಶ ಸರಗಣಾಚಾರಿ, ಅಶೋಕ ಸಿಂಗದ ಅವರುಗಳನ್ನು ಪೂಜ್ಯ ಹೊಳೆಹುಚ್ಚೇಶ್ವರ ಶ್ರೀಗಳು ಸನ್ಮಾನಿಸಿದರು.

ಡಾ.ಅಮರೇಶ್ವರ ಸ್ವಾಮೀಜಿ, ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮುರುಗೇಶ ಕಡ್ಲಿಮಟ್ಟಿ, ವಕೀಲ ನಬಿ ತಹಶೀಲ್ದಾರ, ಗಚ್ಚಿನಮಠದ ಅಮರೇಶ್ವರ ದೇವರು ಮತ್ತಿತರರು ಇದ್ದರು.

# ಮಹಾಶಿವರಾತ್ರಿ: 12 ಜ್ಯೋತಿರ್ಲಿಂಗಗಳ ಶೋಭಾಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 21 : ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಪಾವನಧಾಮ ಕೇಂದ್ರದಿಂದ ಮಹಾಶಿವರಾತ್ರಿ ಅಂಗವಾಗಿ ನಗರದಲ್ಲಿ ಗುರುವಾರ 12 ಜ್ಯೋತಿರ್ಲಿಂಗಗಳ ಶೋಭಾಯಾತ್ರೆ ನಡೆಯಿತು.

ಹೂವಿನಿಂದ ಅಲಂಕರಿಸಿದ 12 ಕಾರುಗಳ ಮೇಲೆ ಜ್ಯೋತಿರ್ಲಿಂಗಗಳನ್ನಿಟ್ಟು ಮೆರವಣಿಗೆ ಮಾಡಲಾಯಿತು.

ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ, ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ ಪ್ರತಿಮಾ ಅಕ್ಕ ಶೋಭಾಯಾತ್ರೆಗೆ ಚಾಲನೆ ನೀಡಿದರು. ಜೆಪಿ ನಗರದ ಬ್ರಹ್ಮಕುಮಾರಿ ಪಾವನಧಾಮ ಕೇಂದ್ರದಿಂದ ಆರಂಭವಾದ ಶೋಭಾಯಾತ್ರೆ ಸಿದ್ಧಾರ್ಥ ಕಾಲೇಜು, ಅಂಬೇಡ್ಕರ್ ವೃತ್ತ, ಮಹಮೂದ್ ಗಾವಾನ್ ಚೌಕ್, ಚೌಬಾರ, ಬಸವೇಶ್ವರ ವೃತ್ತ, ಭಗತ್‌ಸಿಂಗ್ ವೃತ್ತ, ಶಿವಾಜಿ ವೃತ್ತ, ಹರಳಯ್ಯಾ ವೃತ್ತ, ಮೋಹನ್ ಮಾರ್ಕೆಟ್ ಮೂಲಕ ಸಾಯಿ ಶಾಲೆ ತಲುಪಿತು.

ದಾರಿಯುದ್ದಕ್ಕೂ ಭಕ್ತಿಗೀತೆಗಳನ್ನು ಹಾಡುತ್ತ ಶ್ವೇತವರ್ಣದ ಉಡುಗೆಗಳನ್ನು ತೊಟ್ಟ ಸಹೋದರಿಯರು ಕುಂಭ ಕಲಶ ಹೊತ್ತು ಯಾತ್ರೆಯಲ್ಲಿ ಪಾಲ್ಗೊಂಡಿದ್ದರು. ಫೆ. 21 ರಿಂದ 23ರ ವರೆಗೆ ನಗರದ ಸಾಯಿ ಶಾಲೆ ಆವರಣದಲ್ಲಿ ರಾಜಸ್ತಾನದ ಮೌಂಟ್ ಅಬುದಿಂದ ಆಗಮಿಸಲಿರುವ ಅಂತರರಾಷ್ಟ್ರೀಯ ಉಪನ್ಯಾಸಕ ಡಾ. ಶಕ್ತಿರಾಜ್ ವಿಶೇಷ ಉಪನ್ಯಾಸ ನೀಡುವರು.

22ರಂದು ಯುವಕರಿಗಾಗಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪಾವನಧಾಮ ಕೇಂದ್ರದ ಬಿ.ಕೆ. ಗುರುದೇವಿ ಅಕ್ಕ ತಿಳಿಸಿದರು.

# ಕಿಶೋರ ಕಾರ್ಮಿಕನ ರಕ್ಷಣೆ; ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 21: ಜಿಲ್ಲೆಯ ಮಾನವಿಯ ಮೆ॥ ಶ್ರೀ ಆ್ಯಂಡ್ ಶ್ರೀ ಇಂಡಸ್ಟ್ರೀಸ್, ಪ್ಲಾಟ್ ನಂ.37 ಕೆ.ಐ.ಎ.ಡಿ.ಬಿ ಇಂಡಸ್ಟ್ರೀಯಲ್ ಏರಿಯಾದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಕಾಯ್ದೆ 1986, ತಿದ್ದುಪಡಿ ಕಾಯ್ದೆ-2016ರ ಅಡಿಯಲ್ಲಿ ತಪಾಸಣೆ ನಡೆಸಿ ಒಬ್ಬ ಕಿಶೋರ ಕಾರ್ಮಿಕನನ್ನು ರಕ್ಷಣೆ ಮಾಡಿ, ಸರ್ಕಾರಿ ಬಾಲಕರ ಬಾಲಮಂದಿರ ರಾಯಚೂರಿಗೆ ಒಪ್ಪಿಸಲಾಯಿತು.

ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದ "ಮೆ॥ಶ್ರೀ ಆ್ಯಂಡ್ ಶ್ರೀ ಇಂಡಸ್ಟ್ರೀಸ್‌ನ ಮಾಲೀಕರಾದ ಶ್ರೀರಾಮುಲು ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ ಮಾನವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ಈ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ ಅವರು ಮಾತನಾಡಿ, ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50,000/- ರೂ. ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗಾಗಿ ಅಕ್ರಮ ಮತ್ತು ಕಾನೂನು ಬಾಹಿರವಾಗಿ ಸಾಗಾಣಿಕೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ, ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ-1098ಗೆ ಮಾಹಿತಿ ನೀಡಬಹುದಾಗಿದೆ ಎಂದರು.

ಈ ದಾಳಿಯ ತಂಡದಲ್ಲಿ ಕಾರ್ಖಾನೆ ಮತ್ತು ಬಾಯ್ಲರ್‌ಗಳ ಇಲಾಖೆ ಸಹಾಯಕ ನಿರ್ದೇಶಕರು ವರುಣ್.ಆರ್.,ಮಾನವಿ ವೃತ್ತ ಕಾರ್ಮಿಕ ನಿರೀಕ್ಷಕ ಮಲ್ಲಪ್ಪ ಸೇರಿದಂತೆ ಇತರರು ಇದ್ದರು.

# ಕುಂಭ ಯಾತ್ರಿಗಳ ಸಾವು: ಶಾಸಕ ಬೆಲ್ದಾಳೆ ಸಂತಾಪ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಫೆ.21:ಪ್ರಯಾಗರಾಜ್ ಮಹಾಕುಂಭ ಮೇಳದಲ್ಲಿ ಪುಣ್ಯ ಸ್ನಾನ ಮುಗಿಸಿಕೊಂಡು ವಾಪಸ್ ಆಗುವ ವೇಳೆ ಉತ್ತರ ಪ್ರದೇಶದ ಕಾಶಿ ಹತ್ತಿರ ಶುಕ್ರವಾರ ಬೆಳಿಗ್ಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಬೀದರ್ ನಗರದ ಲಾಡಗೇರಿಯ ಐವರು ಭಕ್ತರು ದುರಂತ ಅಂತ್ಯ ಕಂಡ ಘಟನೆ ಬಗ್ಗೆ ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರು ಸಂತಾಪ ಸೂಚಿಸಿದ್ದಾರೆ.

ಕುಂಭ ಯಾತ್ರೆ ಬಳಿಕ ಕಾಶಿ ವಿಶ್ವನಾಥ ದರ್ಶನಕ್ಕೆ ಹೊರಟಿದ್ದ ಲಾಡಗೇರಿಯ 14 ಭಕ್ತರಿದ್ದ

ಕ್ರೂಷರ್ ಜೀಪ್ ಮಿರ್ಜಾಪುರ ಹತ್ತಿರದ ರುಪಾಪುರ ಬಳಿ ಅಪಘಾತಕ್ಕೀಡಾಗಿದೆ. ಐವರು ಮೃತಪಟ್ಟರೆ, 8 ಭಕ್ತರು ಗಾಯಗೊಂಡಿದ್ದಾರೆ. ಮೃತರ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಹಾಗೂ ಕುಟುಂಬದವರಿಗೆ ದುಃಖ ಸಹಿಸುವ ಶಕ್ತಿ ನೀಡಲಿ. ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ. ಇನ್ನೂ ಒಂದು ವಾರ ಮಹಾಕುಂಭ ಇದೆ. ಭಕ್ತರು ಯಾತ್ರೆ ವೇಳೆ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಿ, ಯಾತ್ರೆ ಸುರಕ್ಷಿತ ಮಾಡಲು ಮನವಿ ಮಾಡಿದ್ದಾರೆ.

# ರನ್ನ ಹಳಗನ್ನಡ ಪ್ರಶಸ್ತಿಗೆ ಶಾಂತಿನಾಥ ದಿಬ್ಬದ, ಶಂಕರಯ್ಯ ಉಕ್ಕಲಿ ಆಯ್ಕೆ

# ರನ್ನ ಸಾಂಸ್ಕೃತಿಕ ವೈಭವಕ್ಕೆ ಸಕಲ ಸಜ್ಜು : ಸಚಿವ ತಿಮ್ಮಾಪೂರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಫೆ. 21 : ಜಿಲ್ಲೆಯ ಮುಧೋಳದಲ್ಲಿ ಫೆಬ್ರುವರಿ 22 ರಿಂದ 24 ವರೆಗೆ ಜರುಗಲಿರುವ ಮೂರು ದಿನಗಳ ರನ್ನವೈಭವಕ್ಕೆ ಎಲ್ಲ ರೀತಿಯಿಂದ ಸಜ್ಜಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು. ಮುಧೋಳ ನೀರಿಕ್ಷಣಾಮಂದಿರಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ರನ್ನ ಪ್ರತಿಷ್ಠಾನ ಮುಧೋಳ ಸಹಯೋಗದಲ್ಲಿ ಮೂರು ದಿನಗಳ ಕಾಲ ನಡೆಯುವ ರನ್ನವೈಭವವನ್ನು ಅದ್ದೂ-ರಿಯಾಗಿ ಆಚರಿಸಲು ಸಕಲ ರೀತಿಯಲ್ಲಿ ಸಜ್ಜಾಗಿದೆ. ರನ್ನವೈಭವದ ಅಂಗವಾಗಿ ಹಮ್ಮಿಕೊಂಡ ತಾಲೂಕಾ, ಜಿಲ್ಲಾ ಹಾಗೂ ರಾಜ್ಯ ಮಟ್ಟದ ರನ್ನರಥಯಾತ್ರೆ ಯಶ್ವಿಯಾಗಿ ನಡೆಯುತ್ತಿದ್ದು, ರಾಜ್ಯ ಮಟ್ಟದ ರಥ ಶನಿವಾರ ರನ್ನ ಬೆಳಗಲಿಗೆ ಬಂದು ತಲುಪಲಿದೆ ಎಂದು ತಿಳಿಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಕ್ರೀಡಾಕೂಟಗಳನ್ನು ಸಹ ಹಮ್ಮಿಕೊಳ್ಳಲಾಗಿದೆ. ಅಂತರರಾಜ್ಯ ಮಹಿಳಾ ಮತ್ತು ಪುರುಷ ಕಬಡ್ಡಿ ಪಂದ್ಯಾವಳಿ ನಡೆಯಲಿದ್ದು, ಮಹಾರಾಷ್ಟ್ರ, ಪಂಜಾಬ, ದೆಹಲಿ, ತಮಿಳುನಾಡು, ಕೇರಳ ರಾಜ್ಯ ಸೇರಿದಂತೆ ಇತರೆ ರಾಜ್ಯದ ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ. ಇದರ ಜೊತೆಗೆ ಸಂಗ್ರಾಣಿ ಕಲ್ಲು, ಗುಂಡು ಹಾಗೂ ಚೀಲ ಎತ್ತುವುದು, ಮಲ್ಲಕಂಬ, ಹಗ್ಗ ಜಗ್ಗಾಟದಂತಹ ಸ್ಪರ್ಧೆಗಳು ನಡೆಸಲಾಗುತ್ತಿದೆ ಎಂದರು.

ಮೂರು ದಿನಗಳ ಕಾಲ ನಡೆಯುವ ಉತ್ಸವದಲ್ಲಿ ಕವಿ ಚಕ್ರವರ್ತಿ ರನ್ನನ ಸಾಹಿತ್ಯ ಕುರಿತಂತೆ ವಿಚಾರಗೋಷ್ಠಿ, ಕವಿಗೋಷ್ಠಿ ಏರ್ಪಡಿಸಲಾಗುತ್ತಿದೆ. ರಾಷ್ಟ್ರಮಟ್ಟದ ಹಾಗೂ ರಾಜ್ಯ ಮಟ್ಟದ ಶ್ರೇಷ್ಠ ಕಲಾವಿದರಿಂಧ ಓಡಿಸ್ಸಿ ನೃತ್ಯ, ಕಥಕ್ಕಳಿ, ಖ್ಯಾತ ಗಾಯಕರಾದ ಗುರುಕಿತಣ, ಅರ್ಜುನ ಜನ್ಯ, ರಾಜೇಶ ಕೃಷ್ಣನ್, ವಿಜಯ ಪ್ರಕಾಶ, ಅನುಪಮಾ ಭಟ್, ಆರ್.ಜೆ.ರಶೀದ್ ತಂಡದಿಂದ ಸಂಗೀತ ರಸದೌತನ ನೀಡಲಿದ್ದಾರೆ. ಈ ಕಾರ್ಯಕ್ರಮಗಳಲ್ಲಿ ಚಲನಚಿತ್ರನಟಿ ರಚಿತಾ ರಾಮ್, ನಿರೂಪಕಿ ಅನುಶ್ರೀ ಪಾಲ್ಗೊಳ್ಳಲಿದ್ದಾರೆ. ಸರಕಾರದಿಂದ 2 ಕೋಟಿ ರೂ. ಬಿಡುಗಡೆಯಾಗಿದ್ದು, ಪ್ರಾವಾಸೋದ್ಯಮ ಇಲಾಖೆಯಿಂದ 20 ಲಕ್ಷ ರೂ. ಬಿಡುಗಡೆ-ಯಾಗಿದೆ ಎಂದರು. ಫೆಬ್ರವರಿ 22 ರಂದು ರನ್ನ ಬೆಳಗಲಿಯ ಕವಿಚಕ್ರವರ್ತಿ ರನ್ನವೇದಿಕೆಯಲ್ಲಿ ನಡೆಯಲಿರುವ ಕಾರ್ಯಕ್ರಮದ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಚಾಲನೆ ನೀಡಿದರೆ, ಎರಡನೇ ದಿನದ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಭಾಗವಹಿಸಲಿದ್ದಾರೆ. ಮೂರನೇ ದಿನ ದಿನ ಸಮಾರೋಪ ಸಮಾರಂಭಕ್ಕೆ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಆಗಮಿಸಿ ಶ್ರೀ ಮುಕುಟ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಲಿದ್ದಾರೆಂದು ತಿಳಿಸಿದರು. ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹಾದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಪ್ರೀಯಾಂಕ ಖರ್ಗೆ, ಜವಳಿ, ಸಕ್ಕರೆ ಮತ್ತು ಕೃಷಿ ಸಚಿವ ಶಿವಾನಂದ ಪಾಟೀಲ, ತೆ-ೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ, ಅಥಣಿ ಶಾಸಕ ಲಕ್ಷ್ಮಣ ಸವದಿ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

## ರನ್ನ ಹಳಗನ್ನಡ ಪ್ರಶಸ್ತಿಗೆ ಶಾಂತಿನಾಥ ದಿಬ್ಬದ, ಶಂಕರಯ್ಯ ಉಕ್ಕಲಿ ಆಯ್ಕೆ





ಮುಧೋಳ ರನ್ನ ಪ್ರತಿಷ್ಠಾನದ ವ’ತಿಯಿಂದ ನೀಡಲಾಗುವ ರನ್ನ ಹಳಗನ್ನಡ ಪ್ರಶಸ್ತಿಗೆ ವಿಶ್ರಾಂತ ಕುಲಸಚಿವ ಡಾ.ಶಾಂತಿನಾಥ ದಿಬ್ಬದ ಹಾಗೂ ವಿಶ್ರಾಂತ ಶಿಕ್ಷಕರಾದ ಶಂಕರಯ್ಯ ಉಕ್ಕಲಿ ಇವರನ್ನು ಆಯ್ಕೆ ವಮಾಡಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದರು.

ಡಾ.ಶಾಂತಿನಾಥ ದಿಬ್ಬದ ಅವರು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಸೋಮಾಪುರ ಗ್ರಾಮದವರು. ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎ, ಪಿಎಚ್‌ಡಿ ಪದವೀಧರರಾಗಿದ್ದು, ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ಗುಲಬರ್ಗ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ, ಬೆಳಗಾವಿಯ ಕಿತ್ತೂರ ರಾಣಿ ಚೆನ್ನಮ್ಮ ಮಹಿಳಾ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ನಂತರ ಕುಲಸಚಿವರಾಗಿ 2015ರಲ್ಲಿ ನಿವೃತ್ತರಾದರು. ಇವರು ಮಹಾಕವಿ ಪಂಪ ಮತ್ತು ಅವನ ಕೃತಿಗಳು. ವಾಗ್ದೇವಿ ಬಂಡಾರದ ಮುದ್ರೆ ಆಗಮಿಕ ಜೀವನಪರ-ಜನಪರ, ಜೈನ ಸಂಸ್ಕೃತಿ ಸಮೀಕ್ಷೆ ಭ್ರಾಜಿಷ್ಣು ವಿರಚಿತ ಆರಾಧನಾ ಕರ್ನಾಟಟೀಕಾ ಮುನಿ ವಂಶಾಭ್ಯುದಯ, ಸಮಸ್ತ್ರ ಭಾರತ ಸೇರಿದಂತೆ ಅನೇಕ ವೈಚಾರಿಕ ಲೇಖನ, ಪ್ರಬಂಧಗಳನ್ನು ರಚಿಸಿದ್ದಾರೆ. ಅಲ್ಲದೇ 15 ವಿದ್ಯಾರ್ಥಿಗಳಿಗೆ ಎಂ.ಫಿಲ್ ಮಾರ್ಗದರ್ಶನ ಮಾಡಿದ್ದಾರೆ. ಇವರು ಅನೇಕ ಪ್ರಶಸ್ತಿಗಳನ್ನು ಪಡೆದಿದ್ದು, ಅದರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಗುಲಬರ್ಗ ವಿವಿ ರಾಜ್ಯೋತ್ಸವ ಪ್ರಶಸ್ತಿ, ಶ್ರವಣ ಬೆಳಗೊಳದ ಗೋಮ್ಮಟೇಶ ವಿದ್ಯಾಪೀಠ ಸೇರಿದಂತೆ ಅನೇಕ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

ಶಂಕರಯ್ಯ ಉಕ್ಕಲಿ ಅವರು ಅನೇಕ ಹಳಗನ್ನಡ ಗ್ರಂಥಗಳ ಕಾವ್ಯಾನುವಾದಗಳನ್ನು ಮಾಡಿದ್ದಾರೆ. ಸೂರ್ಯಪುತ್ರ ರನ್ನಮಯ ಪಂಪಭಾರತ, ಆದಿಪುರಾಣಂ ಎಂಬ ಹಳಗನ್ನಡ ಕೃತಿಗಳನ್ನು ಹೊರತಂದಿದ್ದಾರೆ. ಕರ್ಣಪಟ್ಟಿಯ ವಿರಚಿತ ನೇಮಿನಾಥ ಪುರಾಣಂ ಕಾವ್ಯಾನುವಾದ ಹಾಗೂ ರನ್ನ ಅಜಿತನಾಥ ಪುರಾಣ, ಚಾಮರಸ ಪ್ರಭುಲಿಂಗ ಲೀಲೆ ಕಾವ್ಯ ಸಂಕಲ ಪ್ರಕಟಣೆಗೆ ಸಿದ್ದಗೊಂಡಿವೆ. ಶ್ರವಣ ಬೆಳಗೊಳದಲ್ಲಿ ನಡೆದ ಅಖಿಲಭಾರತ ಕನ್ನಡ ಜೈನ ಸಾಹಿತ್ಯ ಸಮ್ಮೇಳನದಲ್ಲಿ ಆದಿಕವಿ ಪಂಪ ಬರೆದ ಪಂಪ ಭಾರತ ಕಾವ್ಯಾನುವಾದದ ಸನ್ಮಾನಗಳು ದೊರೆತಿದ್ದು, ಅಲ್ಲದೇ ಧರ್ಮಸ್ಥಳ, ಬಾಗಲಕೋಟೆ, ಮುಧೋಳ, ಗುಲಬರ್ಗದಲ್ಲಿ ನಡೆದ ಅಖಿಲ ಭಾರತ ಸಮ್ಮೇಳನದಲ್ಲಿ ಅವರ ಅನೇಕ ಕೃತಿಗಳು ಲೋಕಾರ್ಪಣೆಗೊಂಡಿವೆ.

# ದ್ವಿತೀಯ ಪಿಯುಸಿ ಪರೀಕ್ಷೆ ಸುಸೂತ್ರವಾಗಿ ನಡೆಸಲು ಸೂಚನೆ



ಕಲಬುರಗಿ:ಫೆ.21: ಮಾರ್ಚ 01 ರಿಂದ ಮಾರ್ಚ್ 20 ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಸುಸೂತ್ರವಾಗಿ ವ್ಯವಸ್ಥಿತವಾಗಿ ಜರುಗಿಸುವಂತೆ ನೋಡಿಕೊಳ್ಳಲು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ತಿಳಿಸಿದರು.

ಶುಕ್ರವಾರದಂದು ಹಳೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಸಂಬಂಧ ನಡೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಲಬುರಗಿ ಜಿಲ್ಲೆಯಲ್ಲಿ 51 ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ವಾರ್ಷಿಕ ಪರೀಕ್ಷೆಗಳು ನಡೆಯಲಿದ್ದು, ಕಲಬುರಗಿ ನಗರದಲ್ಲಿ 25 ಪರೀಕ್ಷಾ ಕೇಂದ್ರಗಳು, 8 ತಾಲ್ಲೂಕಿನಲ್ಲಿ 26 ಪರೀಕ್ಷಾ ಕೇಂದ್ರಗಳ ಮುಖಾಂತರ ಪರೀಕ್ಷೆ ಒಟ್ಟು ವಿದ್ಯಾರ್ಥಿಗಳು 31449 ವಿದ್ಯಾರ್ಥಿಗಳು ಪರೀ-ಕ್ಷೆ ಬರೆಯುತ್ತಿದ್ದಾರೆ ಎಂದು ಅವರು ಹೇಳಿದರು.

ಪರೀಕ್ಷೆ ನಡೆಯುವ ಅಕ್ರಮ ಅಹಿತಕರ ಘಟನೆಗಳು ಜರುಗದಂತೆ ವೆಬ್ ಕಾಸ್ಟಿಂಗ್ ಮುಖಾಂತರ ಜಿಲ್ಲಾಮಟ್ಟದಲ್ಲಿ ಜಿಲ್ಲಾ ಪಂಚಾಯತ ಕಂಟ್ರೋಲ್ ರೂಂ ಮುಖಾಂತರ ಎಲ್ಲ ಪರೀಕ್ಷೆಗಳ ಕೇಂದ್ರಗಳ ನಿಗಾ ವಹಿಸಲಾಗುವುದು ಯಾವುದೆ ಅಹಿತರ ಘಟನೆಗಳು ಕಂಡುಬಂದಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಅವರು ಹೇಳಿದರು.

ಪರೀಕ್ಷೆ ಸುತ್ತಮುತ್ತ ಪೋಲಿಸ್ ಬಂದೋಬಸ್ತ ಒದಗಿಸಲಾಗುವುದು ಇ.ಓ. ಮತ್ತು ತಹಶೀಲ್ದಾರರುಗಳ ಕಂಟ್ರೋಲ್ ರೂಂ ನಿಂದ ಮಾಹಿತಿಯನ್ನು ಪಡೆಯುತ್ತೇವೆ ಎಂದರು.

ಪರೀಕ್ಷೆ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ತಲುಪಿಸಲು ಮಾರ್ಗಾಧಿಕಾರಿಗಳು ನೇಮಕ ಮಾಡಲಾಗಿದ್ದು, ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಜೆಸ್ಕಾಂ ರವರಿಗೆ ಕ್ರಮ ವಹಿಸಲು ತಿಳಿಸಬೇಕು.

ಎಲ್ಲ ಪರೀಕ್ಷೆ ಕೇಂದ್ರಗಳಲ್ಲಿ ಸಿಸಿಟಿವಿ ಅಳವಡಿಸಲಾಗಿದ್ದು ಪರೀಕ್ಷೆ ಕೇಂದ್ರಗಳು ಸುತ್ತ ಸ್ವಚ್ಛತೆಯನ್ನು ಕಾಪಾಡಲು ಸಂಬಂಧಪಟ್ಟ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಿದರು.

ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಅಶೋಕ ಶಾಸ್ತ್ರಿ ಸೇರಿದಂತೆ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಮುಖ್ಯಅಧೀಕ್ಷರು ಸಭೆಯಲ್ಲಿ ಭಾಗಹಿಸಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.